ಕನ್ನಡ ನಟಿ ಮೌನಾ ಗುಡ್ಡೆಮನೆ ಅವರ ಹೊಚ್ಚಹೊಸ ಶಾರ್ಟ್ ಹೇರ್‌ಸ್ಟೈಲ್ ಇನ್‌ಸ್ಟಾಗ್ರಾಂನಲ್ಲಿ ವೈರಲ್ ಆಗಿದೆ. ಸದಾ ಸಾಂಪ್ರದಾಯಿಕವಾಗಿ ಕಾಣುತ್ತಿದ್ದ ಮೌನಾ, ಈ ಮಾಡರ್ನ್ ಲುಕ್‌ನಲ್ಲಿ ಅತಿ ಸುಂದರವಾಗಿ ಕಾಣುತ್ತಿದ್ದಾರೆ. ಅಭಿಮಾನಿಗಳು ಅವರ ಹೊಸ ಕೇಶವಿನ್ಯಾಸಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ್ದು, ಇದು ಅವರ ಸೌಂದರ್ಯವನ್ನು ಮತ್ತಷ್ಟು ಹೆಚ್ಚಿಸಿದೆ ಎಂದಿದ್ದಾರೆ.



BHARATHA SARATHI
KANNADA DAILY NEWS PAPER

# ಭಾರತ ಸಾರಥಿ

CALL 9740160669

RNI KARKAN2011/44806

prabhavaa.com

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ




ಅಧಿಕಾರ ಹಂಚಿಕೆಯ ಸೂತ್ರವನ್ನು ಮುಂದಿಟ್ಟುಕೊಂಡು ಡಿಕೆಶಿ ಹೈಕಮಾಂಡ್ ಅಂಗಳದಲ್ಲಿ ಮೂರು ಸ್ಫೋಟಕ ಷರತ್ತುಗಳನ್ನು ವಿಧಿಸಿ ಬಿಗಿಪಟ್ಟು ಹಿಡಿದಿದ್ದಾರೆ ಎಂದು ಮೂಲಗಳು ತಿಳಿಸಿವೆ. ಡಿಕೆಶಿ ಅವರ ಈ ಖಡಕ್ ನಿಲುವು ಈಗ ಹೈಕಮಾಂಡ್ ನಾಯಕರನ್ನೂ ಧರ್ಮಸಂಕಟಕ್ಕೆ ಸಿಲುಕಿಸಿದೆ. ಕರ್ನಾಟಕದಲ್ಲಿ ಸರ್ಕಾರ ರಚನೆಯಾಗುವಾಗ ಅಧಿಕಾರ ಹಂಚಿಕೆ ವಿಚಾರದಲ್ಲಿ ಏನು ಮಾತುಕತೆ ಯಾಗಿತ್ತೋ, ಆ ಮಾತನ್ನು ಸಿಎಂ ಸಿದ್ದರಾಮಯ್ಯ ಹಾಗೂ ಹೈಕಮಾಂಡ್ ಇಬ್ಬರೂ ಉಳಿಸಿಕೊಳ್ಳಬೇಕು. ಕಾಲಮಿತಿ ಮುಗಿದಿದ್ದು, ಈಗ ನಾಯಕತ್ವ ಬದಲಾವಣೆ ಆಗಲೇಬೇಕು ಎಂದು ಪಟ್ಟು ಹಿಡಿದು ಕುಣಿತಿದ್ದಾರೆ ಎನ್ನಲಾಗಿದೆ.

# ಸಿಎಂ ರಾಜೀನಾಮೆ...?

ನವದೆಹಲಿ: ದೆಹಲಿನಲ್ಲಿ ಕರ್ನಾಟಕ ಕಾಂಗ್ರೆಸ್ ನಾಯಕತ್ವ ಬಿಕ್ಕಟ್ಟಿನ ಕುರಿತು ನಡೆದ ಹೈವೋಲ್ಟೇಜ್ ಸಭೆ ರಾಜ್ಯ ರಾಜಕೀಯದಲ್ಲಿ ಭಾರೀ ಚರ್ಚೆಗೆ ಕಾರಣವಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಕಾಂಗ್ರೆಸ್ ಹೈಕಮಾಂಡ್ ಪ್ರತ್ಯೇಕವಾಗಿ ಕರೆಸಿ ಮಾತುಕತೆ ನಡೆಸಿರುವುದು ರಾಜಕೀಯ ಕುತೂಹಲಕ್ಕೆ ಕಾರಣವಾಗಿದೆ. ರಾಜ್ಯದಲ್ಲಿ ಕಳೆದ ಕೆಲ ತಿಂಗಳುಗಳಿಂದ ಮುಖ್ಯಮಂತ್ರಿ ಬದಲಾವಣೆ ಕುರಿತು ನಡೆಯುತ್ತಿರುವ ಚರ್ಚೆಗಳ ನಡುವೆಯೇ ಈ ಸಭೆ ನಡೆದಿರುವುದು ವಿಶೇಷ ಮಹತ್ವ ಪಡೆದುಕೊಂಡಿದೆ.

ಸಭೆಯಲ್ಲಿ ಸಿದ್ದರಾಮಯ್ಯ ಅವರಿಗೆ ರಾಜ್ಯಸಭೆ ಸ್ಥಾನಮಾನ ನೀಡುವ ಪ್ರಸ್ತಾವವನ್ನು ಹೈಕಮಾಂಡ್ ಮುಂದಿಟ್ಟಿದೆ ಎನ್ನಲಾಗುತ್ತಿದೆ. ಈ ಮೂಲಕ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಗೌರವಪೂರ್ವಕವಾಗಿ ರಾಷ್ಟ್ರ ರಾಜಕೀಯಕ್ಕೆ ಕಳುಹಿಸುವ ತಂತ್ರವನ್ನು ಕಾಂಗ್ರೆಸ್ ನಾಯಕತ್ವ ರೂಪಿಸಿದೆ ಎಂಬ ಮಾತುಗಳು ಕೇಳಿಬರುತ್ತಿವೆ. ರಾಜ್ಯದಲ್ಲಿ ಅಧಿಕಾರ ಹಂಚಿಕೆ ವಿಚಾರವಾಗಿ ದೀರ್ಘಕಾಲದಿಂದ ನಡೆಯುತ್ತಿರುವ ಒಳಜಗಳಕ್ಕೆ ಅಂತ್ಯ ಹಾಡಲು ಹೈಕಮಾಂಡ್ ಮಧ್ಯಪ್ರವೇಶ ಮಾಡಿದೆ ಎನ್ನಲಾಗುತ್ತಿದೆ. ಇದೇ ವೇಳೆ ಸಿದ್ದರಾಮಯ್ಯ ಪುತ್ರ ಹಾಗೂ ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ದರಾಮಯ್ಯ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡುವ ಭರವಸೆಯನ್ನೂ ಹೈಕಮಾಂಡ್ ನೀಡಿದೆ ಎಂಬ ಮಾಹಿತಿ ರಾಜಕೀಯ ವಲಯದಲ್ಲಿ ಹರಿದಾಡುತ್ತಿದೆ. ಸಿದ್ದರಾಮಯ್ಯ ಅವರನ್ನು ಸಮಾಧಾನಪಡಿಸಲು ಮತ್ತು ಅವರ ಬೆಂಬಲಿಗರ ಅಸಮಾಧಾನ ತಗ್ಗಿಸಲು ಈ ರಾಜಕೀಯ ಸೂತ್ರ ರೂಪಿಸಲಾಗಿದೆ ಎಂದು ವಿಶ್ಲೇಷಿಸಲಾಗುತ್ತಿದೆ.

ದೆಹಲಿಯ ಎಐಸಿಸಿ ಕಚೇರಿಯಲ್ಲಿ ಹೈವೋಲ್ಟೇಜ್ ಸಭೆ ಈಗ ಕ್ಲೈಮ್ಯಾಕ್ಸ್ ಹಂತಕ್ಕೆ ತಲುಪಿದೆ. ಹೈಕಮಾಂಡ್ ನಾಯಕರ ಸಮ್ಮುಖದಲ್ಲೇ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕೊಟ್ಟ ಮಾತು ಉಳಿಸಿಕೊಳ್ಳಿ ಎಂದು ಸಿಂಹಗರ್ಜನೆ ಮಾಡಿದ್ದಾರೆ.



ಅಧಿಕಾರ ಹಂಚಿಕೆಯ ಸೂತ್ರವನ್ನು ಮುಂದಿಟ್ಟುಕೊಂಡು ಡಿಕೆಶಿ ಹೈಕಮಾಂಡ್ ಅಂಗಳದಲ್ಲಿ ಮೂರು ಸ್ಫೋಟಕ ಷರತ್ತುಗಳನ್ನು ವಿಧಿಸಿ ಬಿಗಿಪಟ್ಟು ಹಿಡಿದಿದ್ದಾರೆ ಎಂದು ಮೂಲಗಳು ತಿಳಿಸಿವೆ. ಡಿಕೆಶಿ ಅವರ ಈ ಖಡಕ್ ನಿಲುವು ಈಗ ಹೈಕಮಾಂಡ್ ನಾಯಕರನ್ನೂ ಧರ್ಮಸಂಕಟಕ್ಕೆ ಸಿಲುಕಿಸಿದೆ.

ಕರ್ನಾಟಕದಲ್ಲಿ ಸರ್ಕಾರ ರಚನೆಯಾಗುವಾಗ ಅಧಿಕಾರ ಹಂಚಿಕೆ ವಿಚಾರದಲ್ಲಿ ಏನು ಮಾತುಕತೆ ಯಾಗಿತ್ತೋ, ಆ ಮಾತನ್ನು ಸಿಎಂ ಸಿದ್ದರಾಮಯ್ಯ ಹಾಗೂ ಹೈಕಮಾಂಡ್ ಇಬ್ಬರೂ ಉಳಿಸಿಕೊಳ್ಳಬೇಕು.

ಕಾಲಮಿತಿ ಮುಗಿದಿದ್ದು, ಈಗ ನಾಯಕತ್ವ ಬದಲಾವಣೆ ಆಗಲೇಬೇಕು.

ಒಂದು ವೇಳೆ ಸಿದ್ದರಾಮಯ್ಯ ಅವರನ್ನೇ ಸಿಎಂ ಆಗಿ ಮುಂದುವರಿಸಲು ನಿರ್ಧರಿಸಿದ್ದರೆ ಮತ್ತು ಕೊಟ್ಟ ಮಾತು ಈಡೇರಿಸಲು ಆಗುತ್ತಿಲ್ಲ ಎಂದಾದರೆ, ಅದನ್ನು ಹೈಕಮಾಂಡ್ ಹಾಗೂ ಸಿಎಂ ಇಬ್ಬರೂ ಜಂಟಿಯಾಗಿ ಮಾಧ್ಯಮಗಳ ಮುಂದೆ ಬಹಿರಂಗ ವಾಗಿ ಒಪ್ಪಿಕೊಳ್ಳಲಿ. ದಿನನಿತ್ಯದ ಈ ಗೊಂದಲಕ್ಕೆ ಮತ್ತು ಕಾರ್ಯಕರ್ತರ ಆತಂಕಕ್ಕೆ ತಕ್ಷಣ ತೆರೆ ಎಳೆಯಿರಿ.

ಕೊಟ್ಟ ಮಾತು ಉಳಿಸಿಕೊಳ್ಳದಿದ್ದರೆ ನನಗೆ ಕೆಪಿಸಿಸಿ ಅಧ್ಯಕ್ಷ ಸ್ಥಾನವೂ ಬೇಡ, ಉಪಮುಖ್ಯಮಂತ್ರಿ ಪಟ್ಟವೂ ಬೇಡ. ಎರಡೂ ಸ್ಥಾನಗಳಿಗೂ ನಾನು ರಾಜೀನಾಮೆ ನೀಡಲು ಸಿದ್ಧ. ನಾನು ಸಾಮಾನ್ಯ ಕಾರ್ಯಕರ್ತನಾಗಿ ಪಕ್ಷದ ಕೆಲಸ ಮಾಡುತ್ತೇನೆ.

ಈ ಮೂರು ಷರತ್ತುಗಳನ್ನು ಹೈಕಮಾಂಡ್ ನಾಯಕರ ಮುಂದಿಟ್ಟ ಡಿ.ಕೆ.ಶಿವಕುಮಾರ್, "ಇದು ನನ್ನ ಅಂತಿಮ ನಿಲುವು. ಈಗ ಯಾವ ನಿರ್ಧಾರ ತೆಗೆದುಕೊಳ್ಳುತ್ತೀರೋ, ಬಿಡುತ್ತೀರೋ ಅದು ನಿಮಗೆ ಬಿಟ್ಟಿದ್ದು" ಎಂದು ನೇರವಾಗಿಯೇ ಹೇಳಿದ್ದಾರೆ.

## ಗೋಡೆ ಕುಸಿದು ಕಾರ್ಮಿಕ ಸಾವು

ಬೆಂಗಳೂರು: ನಗರದಲ್ಲಿ ನಿರ್ಮಾಣ ಹಂತದಲ್ಲಿರುವ ಅಪಾರ್ಟ್‌ಮೆಂಟ್ ಕಟ್ಟಡದ ಕಾಂಪೌಂಡ್ ಗೋಡೆ ಕುಸಿದು 17 ವರ್ಷದ ಕಾರ್ಮಿಕ ಸಾವನ್ನಪ್ಪಿದ್ದು, ಮತ್ತೊಬ್ಬ ಗಾಯಗೊಂಡಿದ್ದಾರೆ ಎಂದು ಪೊಲೀಸರು ಮಂಗಳವಾರ ತಿಳಿಸಿದ್ದಾರೆ.

ಮೃತನನ್ನು ರಾಯಚೂರು ಜಿಲ್ಲೆಯ ಪಂಚಮುಖಿ ಗ್ರಾಮದ ಭೀಮೇಶ್ ಎಂದು ಗುರುತಿಸಲಾಗಿದೆ. ಗುಂಜಾಳ ಗ್ರಾಮದ 32 ವರ್ಷದ ದೂಲಯ್ಯ ಗಾಯಗೊಂಡ ಕಾರ್ಮಿಕನನ್ನು ಹತ್ತಿರದ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಚಿಕ್ಕಬಾನಸವಾಡಿಯ ನಿರ್ಮಾಣ ಸ್ಥಳದಲ್ಲಿ ಸೋಮವಾರ ಮಧ್ಯಾಹ್ನ ಈ ಘಟನೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಪೊಲೀಸರ ಪ್ರಕಾರ, ಇತ್ತೀಚಿನ ಮಳೆಯ ನಂತರ ಕಾಂಪೌಂಡ್ ಗೋಡೆಯ ಬಳಿ ಸಂಗ್ರಹವಾಗಿದ್ದ ಮಳೆನೀರು ಮತ್ತು ಮಣ್ಣನ್ನು ಆರು ಕಾರ್ಮಿಕರು ತೆರವುಗೊಳಿಸುತ್ತಿದ್ದರು.

ಮಧ್ಯಾಹ್ನ 2 ಗಂಟೆ ಸುಮಾರಿಗೆ, ಗೋಡೆ ಇದ್ದಕ್ಕಿದ್ದಂತೆ ಕಾರ್ಮಿಕರ ಮೇಲೆ ಕುಸಿದು ಬಿದ್ದಿದೆ. ಮೂವರು ಕಾರ್ಮಿಕರು ಸುರಕ್ಷಿತವಾಗಿ ತಪ್ಪಿಸಿಕೊಳ್ಳುವಲ್ಲಿ ಯಶಸ್ವಿಯಾದರು, ಆದರೆ ಭೀಮೇಶ್ ಮತ್ತು ದೂಲಯ್ಯ ಅವಶೇಷಗಳ ಅಡಿಯಲ್ಲಿ ಸಿಲುಕಿಕೊಂಡು ಗಂಭೀರವಾಗಿ ಗಾಯಗೊಂಡರು.

ಭೀಮೇಶ್ ನಂತರ ಆಸ್ಪತ್ರೆಯಲ್ಲಿ ನಿಧನರಾದರು ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಕಟ್ಟಡ ನಿರ್ಮಾಣಕಾರ ಮತ್ತು ಸೈಟ್ ಮಾಲೀಕರ ಕಳಪೆ ನಿರ್ಮಾಣ ಮತ್ತು ನಿರ್ಲಕ್ಷ್ಯವೇ ಅಪಘಾತಕ್ಕೆ ಕಾರಣ ಎಂದು ನಿವಾಸಿಗಳು ಆರೋಪಿಸಿದ್ದಾರೆ.

## ದ್ವೇಷ ಭಾಷಣ ಮಸೂದೆಗೆ ಬ್ರೇಕ್..!

ನವದೆಹಲಿ/ಬೆಂಗಳೂರು: ಕರ್ನಾಟಕದ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧ ತಡೆ ಮಸೂದೆಗೆ ಅಮಿತ್ ಶಾ ನೇತೃತ್ವದ ಗೃಹ ಸಚಿವಾಲಯವು ಬ್ರೇಕ್ ಹಾಕಿದ್ದು, ಈಗಿರುವ ಕಾನೂನು ವ್ಯವಸ್ಥೆಯೇ ಸಾಕಷ್ಟು ಸಮರ್ಪಕವಾಗಿದೆ.

ಆ ಕಾರಣಕ್ಕೆ ಹೊಸ ಕಾನೂನು ಅಗತ್ಯವಿಲ್ಲದಿರಬಹುದು ಎಂದು ಹೇಳಿದೆ. ಈ ಕುರಿತ ತನ್ನ ಅಭಿಪ್ರಾಯವನ್ನು ಕೇಂದ್ರ ಗೃಹ ಸಚಿವಾಲಯ ರಾಜ್ಯ ಸರ್ಕಾರಕ್ಕೆ ತಿಳಿಸಿದೆ.

ಇದೇ ವರ್ಷ ಫೆಬ್ರವರಿಯಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಮಸೂದೆಗೆ ಅನುಮೋದನೆ ನೀಡಲು ನಿರಾಕರಿಸಿದ ನಂತರ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಅನುಮೋದನೆಗಾಗಿ ಮಸೂದೆಯನ್ನು ಗೃಹ ಸಚಿವಾಲಯಕ್ಕೆ ಕಳುಹಿಸಲಾಗಿತ್ತು.

ಕಠಿಣ ನಿಯಮಗಳನ್ನು ಒಳಗೊಂಡಿದ್ದ ಈ ಮಸೂದೆ ಪ್ರಕಾರ, ದ್ವೇಷ ಅಪರಾಧ ಅಥವಾ ದ್ವೇಷ ಭಾಷಣ ಮಾಡಿದರೆ ಒಂದು ವರ್ಷದಿಂದ ಏಳು ವರ್ಷಗಳವರೆಗೆ ಜೈಲು ಶಿಕ್ಷೆ ಹಾಗೂ 50 ಸಾವಿರ ದಂಡ ವಿಧಿಸುವ ಅವಕಾಶವಿತ್ತು. ಮರು ಅಪರಾಧಕ್ಕೆ ಏಳು ವರ್ಷಗಳವರೆಗೆ ಶಿಕ್ಷೆ ಮತ್ತು 1 ಲಕ್ಷದ ವರೆಗೆ ದಂಡ ವಿಧಿಸುವ ಬಗ್ಗೆಯೂ ಮಸೂದೆಯಲ್ಲಿ ಸೇರಿಸಲಾಗಿತ್ತು.

ಮೇ 12ರಂದು ಕಳುಹಿಸಿದ ಪತ್ರದಲ್ಲಿ ಗೃಹ ಸಚಿವಾಲಯ, ಮಸೂದೆಯಲ್ಲಿ ಪರಿಹರಿಸಲು ಯತ್ನಿಸಿರುವ ವಿಷಯಗಳು ಈಗಾಗಲೇ ಭಾರತೀಯ ನ್ಯಾಯ ಸಂಹಿತೆ 2023 ಮತ್ತು ಇತರ ಕಾನೂನುಗಳಲ್ಲೇ ಇವೆ.



ಬೆಂಗಳೂರುದಲ್ಲಿ ಮಳೆರಾಯ ಮತ್ತೆ ಅಬ್ಬರಿಸಿದ್ದು, ಸಂಜೆ ಆರಂಭವಾದ ಜಿಟಿಜಿಟಿ ಮಳೆ ಕೆಲವೇ ಕ್ಷಣಗಳಲ್ಲಿ ಭಾರಿ ಗಾಳಿ ಸಹಿತ ಧಾರಾಕಾರ ಮಳೆಯಾಗಿ ನಗರದ ಜನಜೀವನ ಅಸ್ತವ್ಯಸ್ತಗೊಳಿಸಿತು. ಟೌನ್ ಹಾಲ್, ಮೆಜೆಸ್ಟಿಕ್, ಸಿಟಿ ಮಾರ್ಕೆಟ್, ವಿಧಾನಸೌಧ ಸುತ್ತಮುತ್ತ ಭಾರೀ ಮಳೆಯಾಗಿದ್ದು, ವಾಹನ ಸವಾರರು ಟ್ರಾಫಿಕ್ ಮಧ್ಯೆ ಪರದಾಡು ವಂತಾಯಿತು. ಭಾರಿ ಗಾಳಿ ಸಹಿತ ಸುರಿದ ಮಳೆಯಿಂದ ನಮ್ಮ ಮೆಟ್ರೋ ಹಳಿಯ ಮೇಲೆ ಮರದ ಕೊಂಬೆ ಬಿದ್ದ ಪರಿಣಾಮ ಮೆಟ್ರೋ ಸಂಚಾರದಲ್ಲೂ ವ್ಯತ್ಯಯ ಉಂಟಾಯಿತು.

## 'ನರ್ಮದಾ ನೀರು ಹಂಚಿಕೆ; ಮೋದಿ–ಶಿವರಾಜ್ ಸಿಂಗ್ ನಡವಳಿಕೆ ಇಡೀ ದೇಶಕ್ಕೆ ಮಾದರಿ'

ನವದೆಹಲಿ: ಎರಡು ರಾಜ್ಯಗಳ ನದಿ ನೀರು ಹಚಿಕೆಯ ಬಗ್ಗೆ ನರ್ಮದಾ ನದಿ ನೀರು ಹಂಚಿಕೆ ವಿಚಾರದಲ್ಲಿ ಅಂದು ಗುಜರಾತ್ ಮುಖ್ಯಮಂತ್ರಿಗಳಾಗಿದ್ದ ನರೇಂದ್ರ ಮೋದಿ ಹಾಗೂ ಮಧ್ಯ ಪ್ರದೇಶದ ಮುಖ್ಯಮಂತ್ರಿ ಶಿವರಾಜ್ ಸಿಂಗ್ ಚೌಹಾಣ್ ಅವರ ನಡುವೆ ನಡೆದಿದ್ದ ಸೌಹಾರ್ದ ಚರ್ಚೆ ಅತ್ಯಂತ ಮಾದರಿ ಮತ್ತು ಅನುಕರಣೀಯ ಎಂದು ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು ಹೇಳಿದರು.

ಕೇಂದ್ರದ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ತಮ್ಮ ಒಡನಾಟ, ರಾಜಕೀಯ ಪ್ರಯಾಣದ ಬಗ್ಗೆ ರಚಿಸಿರುವ 'ಅಪನಾಪನ್' ಕೃತಿಯ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾಜಿ ಪ್ರಧಾನಿಗಳು ಮಾತನಾಡಿದ ಅವರು, ಪುಸ್ತಕದಲ್ಲಿನ ಕೆಲ ಮಹತ್ವದ ಅಂಸಗಳನ್ನು ಉಲ್ಲೇಖಿಸಿದ ಮಾಜಿ ಪ್ರಧಾನಿಗಳು; 2006ರಲ್ಲಿ ನವದೆಹಲಿಯಲ್ಲಿ ಶಿವರಾಜ್ ಸಿಂಗ್ ಮತ್ತು ನರೇಂದ್ರ ಮೋದಿ ಅವರ ನಡುವೆ ಸರ್ದಾರ್ ಸರೋವರ ಯೋಜನೆ ಮತ್ತು ನರ್ಮದಾ ನೀರು ನಿರ್ವಹಣೆಗೆ ಸಂಬಂಧಿಸಿದಂತೆ ಸಭೆ ನಡೆಯಿತು.

ಆಗ ಇಬ್ಬರೂ ಅವರವರ ರಾಜ್ಯಗಳ ಮುಖ್ಯಮಂತ್ರಿಗಳಾಗಿದ್ದರು. ಗುಜರಾತ್ ಮತ್ತು ಮಧ್ಯಪ್ರದೇಶ ಎರಡೂ ರಾಜ್ಯಗಳು ಒಟ್ಟಿಗೆ ಪ್ರಯೋಜನ ಪಡೆಯಬಹುದಾದ ಸಹಕಾರಿ ಚೌಕಟ್ಟನ್ನು ಮೋದಿ ಅವರು ರೂಪಿಸಿದ್ದರು. ಪರಸ್ಪರ ಸಹಕಾರ ತತ್ವದ ಚೌಕಟ್ಟಿನಲ್ಲಿ ನಡೆದ ಈ ಸಭೆ ಯಶಸ್ವಿಯಾಯಿತು. ಅದೊಂದು ಉತ್ತಮ ಸಭೆ. ಅಂತಾರಾಜ್ಯ ಜಲ ವಿವಾದಗಳ ಪರಿಹಾರದ ನಿಟ್ಟಿನಲ್ಲಿ ಅದು ಮಾದರಿ ಚರ್ಚೆ ಎಂದು ಬಣ್ಣಿಸಿದರು.



ನರ್ಮದಾ ನೀರಿನ ಹಂಚಿಕೆ ಮತ್ತು ಸರ್ದಾರ್ ಸರೋವರ ಅಣೆಕಟ್ಟಿನ ಎತ್ತರವನ್ನು ಹೆಚ್ಚಿಸುವ ಬಗ್ಗೆ ಒಮ್ಮತ ಸಾಧಿಸಲು ಪ್ರಧಾನಿಯಾಗಿದ್ದಾಗ ತಾವು ನಡೆಸಿದ ಪ್ರಯತ್ನಗಳನ್ನು ನೆನಪು ಮಾಡಿಕೊಂಡ ದೇವೇಗೌಡರು; 1996ರಲ್ಲಿ ನಾನು ಸೌಹಾರ್ದಯುತ ಮತ್ತು ಒಮ್ಮತ–ಆಧರಿತ ಪರಿಹಾರಕ್ಕೆ ಬರಲು ಸಂಬಂಧಪಟ್ಟ ರಾಜ್ಯಗಳ ಮುಖ್ಯಮಂತ್ರಿಗಳು ಮತ್ತು ಹಿರಿಯ ಅಧಿಕಾರಿಗಳ ಸಭೆಯನ್ನು ಕರೆದಿದ್ದೆ. ನಂತರ ಸುಪ್ರೀಂ ಕೋರ್ಟ್ ಆ ಪರಿಹಾರ ಸೂತ್ರವನ್ನು ಅಂಗೀಕರಿಸಿತು. ನರ್ಮದಾ ನದಿ ನೀರು ಗುಜರಾತ್ ಮತ್ತು ಮಧ್ಯಪ್ರದೇಶದ ಜನರಿಗೆ ಪ್ರಯೋಜನವನ್ನು ನೀಡುತ್ತಲೇ ಇದೆ ಎಂಬುದು ನನಗೆ ಬಹಳ ಸಂತೋಷದ ಸಂಗತಿ ಎಂದರು.

2019 ಸೆಪ್ಟೆಂಬರ್ ತಿಂಗಳಲ್ಲಿ ಸರ್ದಾರ್ ಸರೋವರ ಅಣೆಕಟ್ಟು ಪೂರ್ಣ ಮಟ್ಟಕ್ಕೆ ತುಂಬಿದಾಗ, ನಾನು ಬೆಂಗಳೂರಿನಿಂದ ಅಲ್ಲಿಗೆ ಹೋಗಿ ಅಣೆಕಟ್ಟನ್ನು, ಅದರ ಪೂರ್ಣ ಸಾಮರ್ಥ್ಯವನ್ನು ವೀಕ್ಷಿಸಿದೆ. ಇದು ನನಗೆ ಸಾರ್ಥಕದ ಕ್ಷಣವಾಗಿತ್ತು ಎಂದು ಮಾಜಿ ಪ್ರಧಾನಿಗಳು ಹೇಳಿದರು.

ಕೃತಿಯ ಶೀರ್ಷಿಕೆ ಬಗ್ಗೆಯೂ ಮೆಚ್ಚುಗೆ ವ್ಯಕ್ತಪಡಿಸಿದ ಅವರು; ನನ್ನ ಮಾತೃಭಾಷೆ ಕನ್ನಡದ ಮೂಲಕ ಈ ಶೀರ್ಷಿಕೆ ಅರ್ಥವನ್ನು ಆಸ್ವಾದಿಸುವ ಪ್ರಯತ್ನ ಮಾಡಿದೆ. ನನ್ನ ಭಾಷೆಯಲ್ಲಿ 'ಅಪನಾಪನ್'ಎಂದರೆ 'ಆಪ್ತ' ಅಥವಾ 'ಆಪ್ತಭಾವ' ಎಂದು ಅರ್ಥ ಬರುತ್ತದೆ. ಅದೊಂದು ಸುಂದರವಾದ ಪದ.

ಈ ಪುಸ್ತಕವನ್ನು ಕನ್ನಡಕ್ಕೆ ಅನುವಾದಿಸಿದರೆ ನಿಮಗೆ ಈಗಲೇ ಶೀರ್ಷಿಕೆ ಸಿದ್ಧವಾಗಿದೆ ಎಂದಾಗ ವೇದಿಕೆಯಲ್ಲಿ ವಿಶ್ರಾಂತ ಉಪ ರಾಷ್ಟ್ರಪತಿ ಎಂ. ವೆಂಕಯ್ಯನಾಯ್ಡು ಹಾಗೂ ಶಿವರಾಜ್ ಸಿಂಗ್ ಚೌಹಾಣ್ ಸೇರಿ ಇಡೀ ಸಭಾಂಗಣ ಕರತಾಡನ ಮಾಡಿತು.

## ರಾಜ್ಯದಲ್ಲಿ ಎಬೋಲಾ ಪತ್ತೆ...

ಬೆಂಗಳೂರು: ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಎಬೋಲಾ ವೈರಸ್ ರೋಗದ ಶಂಕಿತ ಪ್ರಕರಣವೊಂದು ಪತ್ತೆಯಾಗಿದೆ ಎನ್ನಲಾಗುತ್ತಿದ್ದು, ರಾಜಧಾನಿ ಜನತೆಯಲ್ಲಿ ತೀವ್ರ ಆತಂಕ ಮೂಡಿಸಿದೆ. ಉಗಾಂಡಾ ದೇಶದಿಂದ ಬಂದ 28 ವರ್ಷದ ವಿದೇಶಿ ಮಹಿಳೆಯಲ್ಲಿ ಎಬೋಲಾ ರೋಗದ ಲಕ್ಷಣಗಳು ಕಾಣಿಸಿಕೊಂಡಿದ್ದು, ಸದ್ಯ ಅವರನ್ನು ತೀವ್ರ ನಿಗಾದಲ್ಲಿ ಇರಿಸಲಾಗಿದೆ.



ಉಗಾಂಡಾ ದೇಶದ ಕ್ಯಾಂಪಾಲಾ ಮೂಲದ ನಾಗಿರೆ ಲತಿಫಾ (28) ಎಂಬ ಮಹಿಳೆ, ಕಳೆದ ಮೇ 23ರಂದು ಬೆಂಗಳೂರಿಗೆ ಆಗಮಿಸಿದ್ದರು. ಇಲ್ಲಿನ 'ರಾಯಲ್ ಏಸ್ ಬೂಟಿಕ್' ಹೋಟೆಲ್‌ನ ರೂಮ್ ನಂಬರ್ 303ರಲ್ಲಿ ತಂಗಿದ್ದರು. ಮಹಿಳೆಗೆ ಎಬೋಲಾ ಮಾದರಿಯ ಆರೋಗ್ಯ ಸಮಸ್ಯೆಗಳು ಪತ್ತೆಯಾಗುತ್ತಿದ್ದಂತೆ ಎಚ್ಚೆತ್ತ ಆರೋಗ್ಯ ಇಲಾಖೆ, ತಕ್ಷಣವೇ ಆದೇಶ ಹೊರಡಿಸಿ ಇಂದು ಆಂಬುಲೆನ್ಸ್ ಮೂಲಕ ಅವರನ್ನು ಐಸೋಲೇಷನ್‌ಗಾಗಿ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ.

ಶಂಕಿತ ಮಹಿಳೆಯಿಂದ ಮೇ 25ರಂದೇ ರಕ್ತ ಹಾಗೂ ಇತರ ಅಗತ್ಯ ಮಾದರಿಗಳನ್ನು ಸಂಗ್ರಹಿಸಲಾಗಿದೆ. ಈ ಸ್ಯಾಂಪಲ್‌ಗಳನ್ನು ಹೆಚ್ಚಿನ ಪರೀಕ್ಷೆಗಾಗಿ ಪುಣೆಯ ಲ್ಯಾಬ್‌ಗೆ ಕಳುಹಿಸಲಾಗಿದ್ದು, ವೈದ್ಯಕೀಯ ವರದಿಗಾಗಿ ಆರೋಗ್ಯ ಇಲಾಖೆ ಅಧಿಕಾರಿಗಳು ಕಾಯುತ್ತಿದ್ದಾರೆ. ವರದಿ ಬಂದ ಬಳಿಕವಷ್ಟೇ ಮಹಿಳೆಗೆ ಎಬೋಲಾ ಸೋಂಕು ತಗುಲಿದೆಯೇ ಇಲ್ಲವೇ ಎಂಬುದು ಅಧಿಕೃತವಾಗಿ ದೃಢವಾಗಲಿದೆ. ನಾಳೆಯೊಳಗೆ ವರದಿ ಕೈಸೇರಲಿದೆ ಎಂದು ಆರೋಗ್ಯ ಇಲಾಖೆಯಿಂದ ಮಾಹಿತಿ ನೀಡಲಾಗಿದೆ. ವರದಿ ಬಳಿಕ ಸೂಕ್ತ ಕ್ರಮಕ್ಕೆ ಆರೋಗ್ಯ ಇಲಾಖೆ ಮುಂದಾಗಲಿದೆ.

ಎಬೋಲಾ ಸೋಂಕಿತ ರಾಷ್ಟ್ರಗಳಿಂದ ಬಂದವರಿಗೆ ಕ್ವಾರಂಟೈನ್‌ನಲ್ಲಿಡಲು ಇತ್ತೀಚೆಗೆ ಮಾರ್ಗಸೂಚಿ ಹೊರಡಿಸಲಾಗಿತ್ತು. ಬೆಂಗಳೂರಿಗೆ ಬರುವ ಪ್ರಯಾಣಿಕರಿಗೆ 21 ದಿನ ಕ್ವಾರಂಟೈನ್‌ನಲ್ಲಿಡಲು ಸರ್ಕಾರ ನಿರ್ಧರಿಸಿತ್ತು. ರೋಗಲಕ್ಷಣ ಕಂಡು ಬಂದರೆ ಹತ್ತಿರದ ಆಸ್ಪತ್ರೆಗೆ ವರದಿ ನೀಡಲು ಸೂಚಿಸಲಾಗಿತ್ತು.

## ತೈಲ ಬೆಲೆ ಏರಿಕೆ ಬೆನ್ನಲ್ಲೇ ಅಗತ್ಯವಸ್ತುಗಳ ಬೆಲೆಯಲ್ಲಿ ವ್ಯತ್ಯಯ

ಬೆಂಗಳೂರು: ಕಳೆದ 10 ದಿನಗಳಲ್ಲಿ ಡೀಸೆಲ್ ದರವು ಒಟ್ಟು ರೂ.7.81 ಹಾಗೂ ಪೆಟ್ರೋಲ್ ದರ ರೂ.7.97 ಏರಿಕೆಯಾದ ಬೆನ್ನಲ್ಲೇ ಕರ್ನಾಟಕದ ಲಾರಿ ಮಾಲೀಕರು ಮತ್ತು ಸಾರಿಗೆ ಸಂಸ್ಥೆಗಳು ಸಾಗಣೆ ದರವನ್ನು ಕನಿಷ್ಠ ಶೇ.10ರಷ್ಟು ಹೆಚ್ಚಿಸುವ ಕುರಿತು ಚಿಂತನೆ ನಡೆಸಿದ್ದಾರೆಂದು ತಿಳಿದುಬಂದಿದೆ.

ಇದರಿಂದ ತರಕಾರಿ, ದಿನಸಿ ವಸ್ತುಗಳು, ಪ್ಲೈವುಡ್, ಕಬ್ಬಿಣ ಸೇರಿದಂತೆ ವಿವಿಧ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗುವ ಸಾಧ್ಯತೆ ಇದೆ.

ಇಂಧನ ದರ ಏರಿಕೆಯಿಂದ ಸಾಗಣೆ ವೆಚ್ಚ ಹೆಚ್ಚಾಗುತ್ತಿರುವ ಕಾರಣ ದರ ಹೆಚ್ಚಳ ಅನಿವಾರ್ಯವಾಗಿದೆ ಎಂದು ಸಾರಿಗೆ ವಲಯದ ಪ್ರತಿನಿಧಿಗಳು ಅಭಿಪ್ರಾಯಪಟ್ಟಿದ್ದಾರೆ.

ಜೂನ್ ಮೊದಲ ವಾರದಿಂದಲೇ ತರಕಾರಿ ಮತ್ತು ಕೃಷಿ ಉತ್ಪನ್ನಗಳ ಚಿಲ್ಲರೆ ಬೆಲೆಯಲ್ಲಿ ಪ್ರತಿ ಕೆಜಿಗೆ ಕನಿಷ್ಠ 50 ಪೈಸೆಯಷ್ಟು ಹೆಚ್ಚಳವಾಗುವ ಸಾಧ್ಯತೆ ಇದೆ ಎಂದು ಕೃಷಿ ವಲಯದ ಪ್ರತಿನಿಧಿಗಳು ಹೇಳಿದ್ದಾರೆ.

ಕರ್ನಾಟಕ ರಾಜ್ಯ ಲಾರಿ ಮಾಲೀಕರ ಹಾಗೂ ಏಜೆಂಟರ ಒಕ್ಕೂಟದ ಅಧ್ಯಕ್ಷ ಜಿ.ಆರ್. ಶಣ್ಮುಗಪ್ಪ ಮಾತನಾಡಿ, ಡೀಸೆಲ್ ದರ ಏರಿಕೆಯಾದಾಗ ಸಾಗಣೆ ವೆಚ್ಚವೂ ಸ್ವಯಂಚಾಲಿತವಾಗಿ ಹೆಚ್ಚಾಗುತ್ತದೆ. ಪ್ರಸ್ತುತ ಪರಿಸ್ಥಿತಿಯಲ್ಲಿ ಸಾಗಣೆ ದರ ಹೆಚ್ಚಳ ಹೊರತುಪಡಿಸಿ ಬೇರೆ ಮಾರ್ಗವಿಲ್ಲ ಎಂದು ಹೇಳಿದ್ದಾರೆ.

ಬುಧವಾರ ಸಾರಿಗೆ ಸಂಸ್ಥೆಗಳ ಸಭೆ ನಡೆಯಲಿದ್ದು, ಅದರಲ್ಲಿ ದರ ಹೆಚ್ಚಳದ ಪ್ರಮಾಣದ ಕುರಿತು ಅಂತಿಮ ನಿರ್ಧಾರ ಕೈಗೊಳ್ಳಲಾಗುತ್ತದೆ. ಇತ್ತೀಚಿನ ಡೀಸೆಲ್ ದರ ಏರಿಕೆಗೆ ಅನುಗುಣವಾಗಿ ಕನಿಷ್ಠ ಶೇ.10ರಷ್ಟು ಸಾಗಣೆ ದರ ಹೆಚ್ಚಳದ ಬಗ್ಗೆ ಚರ್ಚೆ ನಡೆಯುತ್ತಿದೆ ಎಂದು ತಿಳಿಸಿದ್ದಾರೆ.

ಡೀಸೆಲ್ ಮೇಲಿನ ತೆರಿಗೆ ಹೊರೆ ಕುರಿತಂತೆ ಮಾತನಾಡಿ, ಪ್ರತಿ ರೂ.100 ಡೀಸೆಲ್ ವೆಚ್ಚದಲ್ಲಿ ಸುಮಾರು ರೂ.46 ವಿವಿಧ ತೆರಿಗೆಗಳು ಹಾಗೂ ಸೆಸ್‌ಗಳಿಗೆ ಹೋಗುತ್ತಿದೆ. ಸಾರಿಗೆ ಕ್ಷೇತ್ರವು ಜಿಎಸ್‌ಟಿ ಹಾಗೂ ಇತರ ತೆರಿಗೆಗಳ ಮೂಲಕ ಸರ್ಕಾರಕ್ಕೆ ದೊಡ್ಡ ಪ್ರಮಾಣದ ಆದಾಯ ನೀಡುತ್ತಿದ್ದರೂ, ಕಾರ್ಯಾಚರಣಾ ವೆಚ್ಚ ಏರಿಕೆಯ ಸಂದರ್ಭದಲ್ಲಿ ಯಾವುದೇ ನೇರ ಪರಿಹಾರ ಸಿಗುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಇದೇ ವೇಳೆ ಇಂಧನ ಮೇಲಿನ ತೆರಿಗೆಗಳನ್ನು ಕಡಿಮೆ ಮಾಡುವಂತೆ ಸರ್ಕಾರಕ್ಕೆ ಮನವಿ ಮಾಡಿದರು.

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಸಲಹೆಗಾರ ರಮೇಶ್ ಚಂದ್ರ ಲಹೋಟಿ ಮಾತನಾಡಿ, ಮುಂದಿನ ವಾರದಲ್ಲಿಯೂ ಪೆಟ್ರೋಲ್ ಮತ್ತು ಡೀಸೆಲ್ ದರ ಏರಿಕೆಯಾಗುವ ಸಾಧ್ಯತೆ ಇದೆ. ಇದರ ಪರಿಣಾಮವಾಗಿ ಲಾಜಿಸ್ಟಿಕ್ಸ್ ವೆಚ್ಚ ಮತ್ತಷ್ಟು ಹೆಚ್ಚಳವಾಗಲಿದ್ದು, ಜೂನ್ ಮೊದಲ ವಾರದಿಂದ ಚಿಲ್ಲರೆ ಮಾರುಕಟ್ಟೆಯಲ್ಲಿ ತರಕಾರಿ ಸೇರಿದಂತೆ ಹಲವು ಕೃಷಿ ಉತ್ಪನ್ನಗಳ ಬೆಲೆಯಲ್ಲಿ ಪ್ರತಿ ಕೆಜಿಗೆ ಕನಿಷ್ಠ 50 ಪೈಸೆಯಷ್ಟು ಏರಿಕೆ ಕಾಣಬಹುದು.

ಭಾರತ ಸಾರಥಿ
27/05/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ವಿಜಯ್ ಖ್ಯಾತೆ

ಬೆಂಗಳೂರು

ಮೇಕೆದಾಟು ಅಣೆಕಟ್ಟು ಯೋಜನೆಯು ಸುಪ್ರೀಂ ಕೋರ್ಟ್‌ನ ಮೂಲ ತೀರ್ಪಿಗೆ ಸಂಪೂರ್ಣ ವಿರುದ್ಧವಾಗಿದೆ. ಕೋರ್ಟ್‌ನಲ್ಲಿ ಅರ್ಜಿ ವಜಾಗೊಂಡ ತಕ್ಷಣ ನಮ್ಮ ಹೋರಾಟ ಮುಗಿಯುವುದಿಲ್ಲ. ತಮಿಳುನಾಡಿನ ರೈತರ ಹಿತರಕ್ಷಣೆ ಮತ್ತು ನೀರಾವರಿ ಹಕ್ಕುಗಳನ್ನು ಕಾಯ್ದುಕೊಳ್ಳಲು ಲಭ್ಯವಿರುವ ಎಲ್ಲಾ ಪರ್ಯಾಯ ಕಾನೂನು ಮಾರ್ಗಗಳನ್ನು ತಜ್ಞರೊಂದಿಗೆ ಚರ್ಚಿಸಿ ತಕ್ಷಣವೇ ಮುಂದುವರಿಸಿ ಎಂದು ಸಿಎಂ ವಿಜಯ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಆದೇಶ ನೀಡಿದ್ದಾರೆ.

ಈ ಸಭೆಯಲ್ಲಿ ತಮಿಳುನಾಡು ಜಲಸಂಪನ್ಮೂಲ ಇಲಾಖೆಯ ಹಿರಿಯ ಅಧಿಕಾರಿಗಳು, ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ಹಾಗೂ ಕಾವೇರಿ ಕಾನೂನು ಕೋಶದ ಪ್ರಮುಖ ನ್ಯಾಯವಾದಿಗಳು ಉಪಸ್ಥಿತರಿದ್ದರು.

ನಾವು ಕೇವಲ ಪ್ರಚಾರಕ್ಕಾಗಿ ಅಥವಾ ರಾಜಕೀಯ ಗಿಮಿಕ್‌ಗಾಗಿ ಹೋಗಿ ಮೇಕೆದಾಟು ಜಾಗದಲ್ಲಿ ಗುದ್ದಲಿ ಪೂಜೆ ಮಾಡುವುದಿಲ್ಲ. ಯೋಜನೆ ಮರುಪರಿಶೀಲಿಸಿ ಹೊಸ ಸಮಗ್ರ ಯೋಜನಾ ವರದಿ ಸಿದ್ಧಪಡಿಸಲಾಗಿದ್ದು ಸಿದ್ಧಪಡಿಸಲಾಗಿದ್ದು ಕೇಂದ್ರಕ್ಕೆ ಕಳಹಿಸಲಾಗುವುದು. ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಮತ್ತು ಕೇಂದ್ರ ಪರಿಸರ ಇಲಾಖೆಯಿಂದ ಅಂತಿಮ ಕ್ಲಿಯರೆನ್ಸ್ ಸಿಕ್ಕ ತಕ್ಷಣ, ಯಾವುದೇ ವಿಳಂಬವಿಲ್ಲದೆ ಅಧಿಕೃತವಾಗಿ ಗುದ್ದಲಿ ಪೂಜೆ ನೆರವೇರಿಸಿ, ಕಾಮಗಾರಿಯನ್ನು ಆರಂಭಿಸುತ್ತೇವೆ ಎಂದು ಡಿಕೆ ಶಿವಕುಮಾರ್ ಇತ್ತೀಚಿಗೆ ಹೇಳಿದರು.

# ಮಹತ್ವದ ಬದಲಾವಣೆ

ಬೆಂಗಳೂರು

ಹೀಗಾಗಿ ಸಹಜವಾಗಿಯೇ ನಾಯಕತ್ವ ಬದಲಾವಣೆಗೆ ಹೈಕಮಾಂಡ್ ಬ್ರೇಕ್ ಹಾಕುತ್ತಾ ಅಥವಾ ಅಧಿಕಾರ ಹಸ್ತಾಂತರ ಪ್ರಕ್ರಿಯೆಗೆ ಗ್ರೀನ್ ಸಿಗ್ನಲ್ ನೀಡುತ್ತಾ ಎನ್ನುವ ಕುತೂಹಲ ಇದ್ದೇ ಇದೆ.

ಈ ಎಲ್ಲಾ ಬೆಳವಣಿಗೆಗಳ ಮಧ್ಯೆ ಸಚಿವ ಸಂಪುಟದಲ್ಲಿ ಮಹತ್ವದ ಬದಲಾವಣೆಯಾಗಿದೆ. ಹೌದು ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವ ಕೆ.ವೆಂಕಟೇಶ್ ಹಾಗೂ ಸಿಎಂ ಸಿದ್ದರಾಮಯ್ಯ ಹೆಚ್ಚುವರಿ ಖಾತೆಗಳ ಜವಾಬ್ದಾರಿ ವಹಿಸಿಕೊಂಡಿದ್ದಾರೆ. ಈ ಬಗ್ಗೆ ರಾಜಭವನದಿಂದ ಅಧಿಕೃತ ಅಧಿಸೂಚನೆ ಹೊರಡಿಸಲಾಗಿದೆ.

ಯೋಜನೆ ಮತ್ತು ಸಾಂಖ್ಯಿಕ ಸಚಿವ ಡಿ.ಸುಧಾಕರ್ ಅವರು ಇತ್ತೀಚೆಗೆ ಅನಾರೋಗ್ಯದಿಂದ ನಿಧನರಾಗಿದ್ದರು. ಹೀಗಾಗಿ ಈ ಇಲಾಖೆಯ ಹೊಣೆಯನ್ನು ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವ ಕೆ.ವೆಂಕಟೇಶ್ ಅವರಿಗೆ ಯೋಜನೆ ಮತ್ತು ಸಾಂಖ್ಯಿಕ ಖಾತೆಯನ್ನು ಹೆಚ್ಚುವರಿಯಾಗಿ ನೀಡಲಾಗಿದೆ.

ಇನ್ನು ಕೆ.ಎನ್.ರಾಜಣ್ಣ ಅವರ ರಾಜೀನಾಮೆಯಿಂದ ತೆರವಾಗಿದ್ದ ಸಹಕಾರ ಇಲಾಖೆ ಮತ್ತು ಬಿ.ನಾಗೇಂದ್ರ ರಾಜೀನಾಮೆಯಿಂದ ತೆರವಾಗಿರುವ ಯುವ ಜನ ಕ್ರೀಡೆ ಹಾಗೂ ಪರಿಶಿಷ್ಟ ಪಂಗಡ ಕಲ್ಯಾಣ ಇಲಾಖೆ ಖಾತೆಯನ್ನು ಸಿಎಂ ಸಿದ್ದರಾಮಯ್ಯ ಅವರು ಯಾರಿಗೂ ಹಂಚಿಕೆ ಮಾಡದೆ ತಮ್ಮ ಬಳಿಯೇ ಉಳಿಸಿಕೊಂಡಿದ್ದಾರೆ.

# ಗುಣಮಟ್ಟ ಕಾಪಾಡಲು ಗುತ್ತಿಗೆದಾರರಿಗೆ ಸೂಚನೆ

ಕೋಲಾರ



ನಗರದ ಸಿ. ಬೈರೇಗೌಡ ಬಡಾವಣೆಯಲ್ಲಿ ಸುಮಾರು 8 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ಒಕ್ಕಲಿಗ ಸಮಾಜದ ಹೆಣ್ಣು ಮಕ್ಕಳ ಹಾಸ್ಟೆಲ್ ಕಾಮಗಾರಿ ಗುಣಮಟ್ಟದಿಂದ ಕೂಡಿಲ್ಲ ಎಂದು ಆರೋಪಿಸಿದ ಸಮಾಜದ ಮುಖಂಡರು, ಕೂಡಲೇ ನಿಯಮಾನುಸಾರ ಕಾಮಗಾರಿ ನಡೆಸುವಂತೆ ಗುತ್ತಿಗೆದಾರರಿಗೆ ಸೂಚನೆ ನೀಡಬೇಕು. ಅಗತ್ಯವಿದ್ದಲ್ಲಿ ಮರು ಟೆಂಡರ್ ಕರೆಯಬೇಕು ಎಂದು ಪಕ್ಷಾತೀತವಾಗಿ ಒತ್ತಾಯಿಸಿದರು.

ನಗರದ ಹೊರವಲಯದ ಒಲವಿಯಾ ರೆಸಾರ್ಟ್‌ನಲ್ಲಿ ಭಾನುವಾರ ಆಯೋಜಿಸಿದ್ದ ಒಕ್ಕಲಿಗ ಸಮಾಜದ ಮುಖಂಡರ ಸಭೆಯಲ್ಲಿ ಹಾಸ್ಟೆಲ್ ನಿರ್ಮಾಣಕ್ಕೆ ಸಂಬಂಧಿಸಿದ ತೊಡಕುಗಳ ಕುರಿತು ಚರ್ಚೆ ನಡೆಯಿತು.

ಸಭೆಯಲ್ಲಿ ಮಾತನಾಡಿದ ಮುಖಂಡರು, ಹಾಸ್ಟೆಲ್ ನಿರ್ಮಾಣವು ಸಮಾಜದ ಗೌರವ ಮತ್ತು ಘನತೆಯನ್ನು ಹೆಚ್ಚಿಸುವ ಮಹತ್ವದ ಯೋಜನೆಯಾಗಿದೆ. ಆದರೆ ಪ್ರಸ್ತುತ ಗುತ್ತಿಗೆದಾರರು ಕಾಮಗಾರಿಯನ್ನು ಸಮರ್ಪಕ ಗುಣಮಟ್ಟದಲ್ಲಿ ನಿರ್ವಹಿಸುತ್ತಿಲ್ಲ. ಕೂಡಲೇ ಸಂಘದ ರಾಜ್ಯ ನಿರ್ದೇಶಕರು ಹಾಗೂ ಪ್ರಮುಖ ಮುಖಂಡರು ಮುಂದಾಳತ್ವ ವಹಿಸಿ ಕಾಮಗಾರಿಯನ್ನು ಸರಿಯಾದ ದಾರಿಯಲ್ಲಿ ಸಾಗಿಸಬೇಕು ಎಂದು ಒತ್ತಾಯಿಸಿದರು.

ವಿಧಾನ ಪರಿಷತ್ ಸದಸ್ಯ ಎಂ.ಎಲ್. ಅನಿಲ್ ಕುಮಾರ್ ಮಾತನಾಡಿ, "ಇತಿಹಾಸದಲ್ಲಿ ಮೊದಲ ಬಾರಿಗೆ ಸಂಘದ ಆಸ್ತಿಯನ್ನು ಉಳಿಸಲು ಸಮಾಜದವರು ಒಗ್ಗಟ್ಟಾಗಿರುವುದು ಉತ್ತಮ ಬೆಳವಣಿಗೆ. ಹಿಂದೆ ಸಂಘದ ಚುನಾವಣೆಗಳನ್ನು ಪಾರದರ್ಶಕವಾಗಿ ನಡೆಸಲು ಸ್ವಾಮೀಜಿಗಳ ನೇತೃತ್ವದಲ್ಲಿ ಪ್ರಯತ್ನ ಮಾಡಲಾಗಿತ್ತು. ಯಾರಿಗೂ ಹಣ ನೀಡದೇ ಚುನಾವಣೆ ನಡೆಸಿದ ಪರಿಣಾಮ ಇತರೆ ಸಮುದಾಯಗಳೂ ಒಕ್ಕಲಿಗ ಸಮಾಜವನ್ನು ಗೌರವದಿಂದ ಕಾಣುವಂತಾಗಿದೆ," ಎಂದರು.

ಹಾಸ್ಟೆಲ್ ನಿರ್ಮಾಣವು ಸಮಾಜದ ಹೆಣ್ಣು ಮಕ್ಕಳ ಭವಿಷ್ಯ ರೂಪಿಸುವ ಮಹತ್ವದ ಯೋಜನೆಯಾಗಿದ್ದು, ಅದನ್ನು ಸರಿಯಾದ ರೀತಿಯಲ್ಲಿ ನಿರ್ಮಿಸುವುದು ಎಲ್ಲರ ಜವಾಬ್ದಾರಿಯಾಗಿದೆ. ಗುತ್ತಿಗೆದಾರರು ನಿಯಮಾನುಸಾರ ಕೆಲಸ ಮಾಡದಿದ್ದರೆ, ಅವರ ಹೆಸರಿನಲ್ಲಿ ಬೇರೆ ಸಮುದಾಯದವರಿಂದ ಕಾಮಗಾರಿ ಮುಂದುವರಿಸುವ ಬಗ್ಗೆ ಚಿಂತನೆ ನಡೆಸಬೇಕು ಎಂದು ಹೇಳಿದರು.

ಒಕ್ಕಲಿಗ ಸಂಘದ ರಾಜ್ಯ ನಿರ್ದೇಶಕ ಕೋನಪ್ಪರೆಡ್ಡಿ ಮಾತನಾಡಿ, "ಸಂಘದಲ್ಲಿ ನಡೆದ ಹಲವು ಕಾಮಗಾರಿಗಳ ಭ್ರಷ್ಟಾಚಾರವನ್ನು ಪ್ರಶ್ನಿಸಿ ಸಂಘದ ಆಸ್ತಿಯನ್ನು ಉಳಿಸಲು ಪ್ರಯತ್ನಿಸಿದ ಕಾರಣಕ್ಕೆ ನನ್ನನ್ನು ಕಾರ್ಯದರ್ಶಿ ಸ್ಥಾನದಿಂದ ತೆಗೆದುಹಾಕಲಾಯಿತು. ಈಗ ಕೋಲಾರ ಜಿಲ್ಲೆಯ ಒಕ್ಕಲಿಗ ಸಮಾಜದ ಹೆಣ್ಣು ಮಕ್ಕಳಿಗೆ ಈ ಹಾಸ್ಟೆಲ್ ಭವಿಷ್ಯದ ಆಶಾಕಿರಣವಾಗಬೇಕು," ಎಂದರು.

ಹಾಸ್ಟೆಲ್ ಜಾಗವನ್ನು ಮೂರು ಬಾರಿ ನೋಂದಣಿ ಮಾಡಲಾಗಿದ್ದು, ಕೊನೆಗೆ 240 ಸಂಖ್ಯೆಯಲ್ಲಿ ಸಂಘದ ಹೆಸರಿನಲ್ಲಿ ನೋಂದಣಿ ಮಾಡಲಾಗಿದೆ. ಹಿಂದೆ ನೀಡಿದ ಮಾತಿನಂತೆ ಮೂವರು ನಿರ್ದೇಶಕರು ಜವಾಬ್ದಾರಿ ವಹಿಸಿಕೊಂಡು ಹಾಸ್ಟೆಲ್ ನಿರ್ಮಾಣ ಪೂರ್ಣಗೊಳಿಸಿ ಅಲ್ಲಿಂದಲೇ ಸಮಾಜದ ಹೆಣ್ಣು ಮಕ್ಕಳು ಕಾಲೇಜಿಗೆ ತೆರಳುವಂತಾಗಬೇಕು ಎಂದು ಹೇಳಿದರು.

"ಇವತ್ತು ಹಾಸ್ಟೆಲ್ ಹೆಸರಿನಲ್ಲಿ ಗುತ್ತಿಗೆದಾರರು ಹಣ ಮಾಡಿಕೊಂಡಿದ್ದಾರೆ. ಸಭೆಯಲ್ಲಿ ತೀರ್ಮಾನ ಮಾಡಿ ಯಾರು ಸರಿಯಾಗಿ ಕಾಮಗಾರಿ ಮಾಡಬಲ್ಲರೋ ಅವರಿಗೆ ಹೊಣೆಗಾರಿಕೆ ನೀಡೋಣ," ಎಂದು ಅಭಿಪ್ರಾಯಪಟ್ಟರು. ಸಮುದಾಯದ ಮುಖಂಡರಾದ ಆರ್. ಪ್ರಭಾಕರ್ ರೆಡ್ಡಿ, ಸೀಸಂದ್ರ ಗೋಪಾಲಗೌಡ, ಡಿ.ಎಲ್. ನಾಗರಾಜ್ ಹಾಗೂ ಮುರಳಿಗೌಡ ಮಾತನಾಡಿ, "ಬ್ಲಾಕ್ ಲಿಸ್ಟ್‌ನಲ್ಲಿರುವ ಗುತ್ತಿಗೆದಾರರಿಗೆ ಸಮಾಜದ ಹಾಸ್ಟೆಲ್ ನಿರ್ಮಾಣದ ಗುತ್ತಿಗೆ ನೀಡಿರುವುದು ದೊಡ್ಡ ತಪ್ಪು. ಕೂಡಲೇ ಗುತ್ತಿಗೆದಾರರನ್ನು ಬದಲಾವಣೆ ಮಾಡಿ ಮರು ಟೆಂಡರ್ ಕರೆಯಬೇಕು," ಎಂದು ಆಗ್ರಹಿಸಿದರು.

ಸಂಘದ ಹಣ ದುರುಪಯೋಗವಾಗದಂತೆ ನೋಡಿಕೊಳ್ಳುವುದು ಪ್ರತಿಯೊಬ್ಬ ಸದಸ್ಯರ ಕರ್ತವ್ಯವಾಗಿದೆ ಎಂದು ಅವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಒಕ್ಕಲಿಗ ಸಂಘದ ಅಧ್ಯಕ್ಷ ಕೆ.ವಿ. ಶಂಕರಪ್ಪ, ರಾಜ್ಯ ಒಕ್ಕಲಿಗ ಸಂಘದ ನಿರ್ದೇಶಕರಾದ ಯಲುವಹಳ್ಳಿ ರಮೇಶ್, ಡಿ.ಕೆ. ರಮೇಶ್ ಹಾಗೂ ಗೋಪಾಲಕೃಷ್ಣ ಉಪಸ್ಥಿತರಿದ್ದರು.

# ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರ

ಬೆಂಗಳೂರು

ಪಟ್ಟಣದ ಶ್ರೀರಾಘವೇಂದ್ರ ಆಸ್ಪತ್ರೆ ಆವರಣದಲ್ಲಿ ಮೇ 26ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿದೆ ಎಂದು ಆಸ್ಪತ್ರೆಯ ವೈದ್ಯ ಡಾ.ಜಿ.ಕೆ. ಜಯರಾಂ ತಿಳಿಸಿದ್ದಾರೆ.

ಯಶಸ್ವಿನಿ ಸಹಕಾರ ಸದಸ್ಯರ ಆರೋಗ್ಯ ರಕ್ಷಣಾ ಟ್ರಸ್ಟ್, ಶ್ರೀರಾಘವೇಂದ್ರ ಆಸ್ಪತ್ರೆ, ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿಸಿ ಟ್ರಸ್ಟ್ ಹಾಗೂ ನಡೆ ಶಾರದಾ ಕಣ್ಣು ಮತ್ತು ದಂತ ಚಿಕಿತ್ಸೆ ಕೇಂದ್ರಗಳ ಸಹಯೋಗದಲ್ಲಿ ಈ ಶಿಬಿರ ನಡೆಯಲಿದೆ.

ಶಿಬಿರದಲ್ಲಿ ಡಾ.ರಾಘವೇಂದ್ರಬಾಬು, ಡಾ. ಶಾಲಿನಿ ಗೌಡ, ಡಾ. ಸುಹಾಸ್, ಡಾ. ಉಲ್ಲಾಸ್ ಹಾಗೂ ಡಾ. ಪ್ರವೀಣ್ ಕುಮಾರ್ ಭಾಗವಹಿಸಲಿದ್ದಾರೆ.

ಉಚಿತ ಸಮಾಲೋಚನೆ, ರಕ್ತದೊತ್ತಡ ತಪಾಸಣೆ, ಶುಗರ್ ಪರೀಕ್ಷೆ, ಕಣ್ಣಿನ ತಪಾಸಣೆ ಹಾಗೂ ಕಣ್ಣಿನ ಶಸ್ತ್ರಚಿಕಿತ್ಸೆ ಸೇವೆಗಳು ಶಿಬಿರದಲ್ಲಿ ಲಭ್ಯವಿರಲಿವೆ. ಜೊತೆಗೆ ಯಶಸ್ವಿನಿ ಕಾರ್ಡ್ ಹಾಗೂ ಆರೋಗ್ಯ ರಕ್ಷಾ ಕಾರ್ಡ್ ಸೌಲಭ್ಯವೂ ದೊರೆಯಲಿದ್ದು, ಉಚಿತ ಔಷಧಿಗಳನ್ನು ವಿತರಿಸಲಾಗುತ್ತದೆ ಎಂದು ತಿಳಿಸಿದ್ದಾರೆ.

# ಹಾರೋಹಳ್ಳಿ ಜಾತ್ರೆ, ವಿಶೇಷ ಪೂಜೆ ಸಲ್ಲಿಕೆ



ಬೆಂಗಳೂರು

ನಗರದ ಹಾರೋಹಳ್ಳಿ ಜಾತ್ರೆಯ ಪ್ರಯುಕ್ತ ನಲ್ಲಗಂಗಮ್ಮ ದೇವಾಲಯದಲ್ಲಿ ನಗರಸಭೆ ಆಶ್ರಯ ಸಮಿತಿ ಸದಸ್ಯೆ ವೆಂಕಟರತ್ನಮ್ಮ ರಾಜೇಶ್ ನೇತೃತ್ವದಲ್ಲಿ ವಿಶೇಷ ಪೂಜೆ ನೆರವೇರಿಸಲಾಯಿತು.

ಈ ವಿಶೇಷ ಪೂಜೆಯಲ್ಲಿ ಶಾಸಕ ಕೊತ್ತೂರು ಮಂಜುನಾಥ್ ಹಾಗೂ ವಿಧಾನ ಪರಿಷತ್ ಸದಸ್ಯ ಎಂ.ಎಲ್. ಅನಿಲ್ ಕುಮಾರ್ ಭಾಗವಹಿಸಿ ದೇವರ ದರ್ಶನ ಪಡೆದು ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕೋಮುಲ್ ನಿರ್ದೇಶಕ ಚಂಜಿಮಲೆ ರಮೇಶ್, ಜಿಲ್ಲಾ ಗ್ಯಾರಂಟಿ ಸಮಿತಿ ಅಧ್ಯಕ್ಷ ವೈ. ಶಿವಕುಮಾರ್, ಸಿಂಡಿಕೇಟ್ ಸದಸ್ಯ ಸೀಸಂದ್ರ ಗೋಪಾಲಗೌಡ, ವೇಮಗಲ್ ನರಸಾಪುರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಉರಟ ಅಗ್ರಹಾರ ಚೌಡರೆಡ್ಡಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಮೈಲಾಂಡಹಳ್ಳಿ ಮುರಳಿ ಹಾಗೂ ಸೈಯದ್ ಆಫ್ಸರ್ ಉಪಸ್ಥಿತರಿದ್ದರು.

ಮುಖಂಡರಾದ ಹಾರೋಹಳ್ಳಿ ರಾಜೇಶ್, ಕೋಟೆ ಶ್ರೀನಿವಾಸ್, ಚೌಡಪ್ಪ, ಕುಮಾರ್, ರಾಜಕಲ್ಲಹಳ್ಳಿ ಶ್ರೀನಿವಾಸ್, ಜನಪನಹಳ್ಳಿ ನವೀನ್ ಸೇರಿದಂತೆ ಹಲವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ದೀಪೋತ್ಸವ ಸಂಭ್ರಮ: ಸಚಿವ ಕೆ.ಎಚ್.ಮುನಿಯಪ್ಪ ಭಾಗಿ

ಬೆಂಗಳೂರು

ದೀಪೋತ್ಸವ, ದೇವರ ಪೂಜೆಯಿಂದ ಮನಸ್ಸಿಗೆ ನೆಮ್ಮದಿ ಮಾತ್ರವಲ್ಲ, ಜೀವನದಲ್ಲಿ ಯಶಸ್ಸಿನತ್ತ ಸಾಗಲು ಅಗತ್ಯವಾದ ಚೈತನ್ಯವನ್ನೂ ನೀಡುತ್ತದೆ ಎಂದು ರಾಜ್ಯ ಆಹಾರ ಸಚಿವ ಕೆ.ಎಚ್. ಮುನಿಯಪ್ಪ ತಿಳಿಸಿದರು.

ನಗರದ ಹಾರೋಹಳ್ಳಿಯಲ್ಲಿ ನಡೆದ ದೀಪೋತ್ಸವ ಮತ್ತು ಜಾತ್ರೆಯಲ್ಲಿ ಪಾಲ್ಗೊಂಡು ಶುಭ ಕೋರಿದ ಅವರು, ಹಾರೋಹಳ್ಳಿ ನನ್ನೂರು, ಇಲ್ಲಿ ನಾನು ಬದುಕು ಕಂಡುಕೊಂಡಿದ್ದೇನೆ ಎಂದ ಅವರು, ಇಲ್ಲಿನ ಜನತೆಯಲ್ಲಿನ



ಭಕ್ತಿ ದೇವರ ಕಾರ್ಯಗಳು ಹೆಚ್ಚು ಪ್ರಸಿದ್ದಿಗಳಿಸಿವೆ ಎಂದರು.

ದೀಪೋತ್ಸವದ ಮೂಲಕ ಜಿಲ್ಲೆಯಲ್ಲಿ ಒಳ್ಳೆಯ ಮಳೆ,ಬೆಳೆಯಾಗಲಿ, ಜನತೆಗೆ ಉತ್ತಮ ಜೀವನ ಲಭಿಸಲಿ ಎಂದು ದೇವರಲ್ಲಿ ಪ್ರಾರ್ಥಿಸೋಣ ಎಂದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಎಸ್ಸಿ ಘಟಕದ ಅಧ್ಯಕ್ಷ ಕೆ.ಜಯದೇವ್, ನಗರಸಭೆ ಮಾಜಿ ಸದಸ್ಯರಾದ ಎಸ್. ಆರ್.ಮುರಳಿಗೌಡ, ಪ್ರಸಾದ್ ಬಾಬು, ಮುಖಂಡರಾದ ಶ್ರೀಕೃಷ್ಣ, ರವಿ, ನಾರಾಯಣಸ್ವಾಮಿ ಸೇರಿದಂತೆ ಈ ಭಾಗದ ಹಲವಾರು ಹಿರಿಯರು ಭಾಗವಹಿಸಿದ್ದರು.

# ರಾಷ್ಟ್ರಪತಿ ಮುರ್ಮುರಿಂದ ಪದ್ಮ ಪ್ರಶಸ್ತಿ ಪ್ರದಾನ




ಬೆಂಗಳೂರು

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸೋಮವಾರ ರಾಷ್ಟ್ರಪತಿ ಭವನದಲ್ಲಿ ನಡೆದ ನಾಗರಿಕ ಗೌರವ ಪ್ರದಾನ ಸಮಾರಂಭದಲ್ಲಿ ಕಲೆ, ಸಾಹಿತ್ಯ, ಸಾರ್ವಜನಿಕ ಜೀವನ, ವೈದ್ಯಕೀಯ, ಶಿಕ್ಷಣ, ಕ್ರೀಡೆ, ಉದ್ಯಮ ಹಾಗೂ ಸಮಾಜಸೇವೆಯ ವಿವಿಧ ಕ್ಷೇತ್ರಗಳಲ್ಲಿ ಅಪೂರ್ವ ಸೇವೆ ಸಲ್ಲಿಸಿದ ಗಣ್ಯರಿಗೆ ಪದ್ಮ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು.

ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಲ್ಲೊಂದಾದ ಪದ್ಮ ಪ್ರಶಸ್ತಿಗಳು ಸಮಾಜ ಹಾಗೂ ರಾಷ್ಟ್ರದ ಅಭಿವೃದ್ಧಿಗೆ ವಿಶಿಷ್ಟ ಕೊಡುಗೆ ನೀಡಿದ ಸಾಧಕರನ್ನು ಗುರುತಿಸಿ ಗೌರವಿಸುವ ಉದ್ದೇಶ ಹೊಂದಿವೆ. ಈ ವರ್ಷದ ಸಮಾರಂಭದಲ್ಲಿ ಪದ್ಮ ವಿಭೂಷಣ, ಪದ್ಮ ಭೂಷಣ ಮತ್ತು ಪದ್ಮಶ್ರೀ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗಿದ್ದು, ನಿಧನರಾದ ಕೆಲ ಗಣ್ಯರಿಗೂ ಮರಣೋತ್ತರವಾಗಿ ಪ್ರಶಸ್ತಿಗಳನ್ನು ನೀಡಲಾಗಿದೆ.

ಈ ಬಾರಿ ಕೇಂದ್ರ ಸರ್ಕಾರ ಒಟ್ಟು 131 ಪದ್ಮ ಪ್ರಶಸ್ತಿಗಳನ್ನು ಘೋಷಿಸಿದ್ದು, ಅವುಗಳಲ್ಲಿ 5 ಪದ್ಮ ವಿಭೂಷಣ, 13 ಪದ್ಮ ಭೂಷಣ ಮತ್ತು 113 ಪದ್ಮಶ್ರೀ ಪ್ರಶಸ್ತಿಗಳು ಸೇರಿವೆ. ಸಮಾರಂಭದ ಮೊದಲ ಹಂತದಲ್ಲಿ 66 ಗಣ್ಯರಿಗೆ ಪ್ರಶಸ್ತಿಗಳನ್ನು ವಿತರಿಸಲಾಯಿತು.

ಪದ್ಮ ವಿಭೂಷಣ ಪ್ರಶಸ್ತಿ ಪಡೆದವರಲ್ಲಿ ಖ್ಯಾತ ನಟ ಧರ್ಮೇಂದ್ರ ಸಿಂಗ್ ದಿಯೋಲ್ (ಮರಣೋತ್ತರ) ಪ್ರಮುಖರಾಗಿದ್ದಾರೆ. ಆರು ದಶಕಗಳ ಕಾಲ ಭಾರತೀಯ ಚಿತ್ರರಂಗದಲ್ಲಿ ಅಪಾರ ಜನಪ್ರಿಯತೆ ಪಡೆದಿದ್ದ ಅವರು 300ಕ್ಕೂ ಹೆಚ್ಚು ಚಿತ್ರಗಳಲ್ಲಿ ಅಭಿನಯಿಸಿದ್ದರು. 'ಶೋಲೆ' ಚಿತ್ರದಲ್ಲಿನ ಅವರ ಪಾತ್ರ ವಿಶೇಷವಾಗಿ ಜನಮನ ಗೆದ್ದಿತ್ತು.

ಭಾರತೀಯ ಶಾಸ್ತ್ರೀಯ ಸಂಗೀತ ಕ್ಷೇತ್ರಕ್ಕೆ ಅಮೂಲ್ಯ ಕೊಡುಗೆ ನೀಡಿದ ವೈಯೊಲಿನ್ ವಾದಕಿ ಡಾ. ಎನ್. ರಾಜಂ ಅವರಿಗೆ ಪದ್ಮ ವಿಭೂಷಣ ಪ್ರಶಸ್ತಿ ಪ್ರದಾನ ಮಾಡಲಾಯಿತು. "ಗಾಯಕಿ ಅಂಗ" ಶೈಲಿಯನ್ನು ವೈಯೊಲಿನ್‌ನಲ್ಲಿ ರೂಪಿಸಿ ಜಗತ್ತಿನ ಮೆಚ್ಚುಗೆ ಪಡೆದ ಅವರು "ಸಿಂಗಿಂಗ್ ವೈಯೊಲಿನ್" ಎಂದೇ ಪ್ರಸಿದ್ಧರಾಗಿದ್ದಾರೆ.

ಪ್ರಾಚೀನ ಅವಧಾನ ಕಲೆಯನ್ನು ಪುನರುಜ್ಜೀವನಗೊಳಿಸಿ ಜನಪ್ರಿಯಗೊಳಿಸಿದ ಪಂಡಿತ, ಲೇಖಕ ಹಾಗೂ ಸಾಂಸ್ಕೃತಿಕ ಚಿಂತಕ ಶತಾವಧಾನಿ ಡಾ. ಆರ್. ಗಣೇಶ್ ಅವರಿಗೆ

# ಸುಸ್ಥಿರ ಮದ್ಯ ತಯಾರಿಕಾ ಕ್ಷೇತ್ರಕ್ಕೆ ಕರ್ನಾಟಕ ಸರ್ಕಾರದ ಉತ್ತೇಜನ

ಬೆಂಗಳೂರು

ಬೆಂಗಳೂರುನಲ್ಲಿ ನಡೆದ ಉದ್ಯಮಿಗಳ ಸೌಹಾರ್ದ ಕೂಟದಲ್ಲಿ ಕರ್ನಾಟಕ ಸರ್ಕಾರದ ಸುಸ್ಥಿರ ಮದ್ಯ ತಯಾರಿಕಾ ಕ್ಷೇತ್ರದ ಉತ್ತೇಜನಾ ಕ್ರಮಗಳಿಗೆ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿದೆ. ಇಂಡಿಯನ್ ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಶಿವಕುಮಾರ್ ಈಶ್ವರನ್ ಅವರು ಸರ್ಕಾರದ ಹೊಸ ನೀತಿಗಳನ್ನು ಸ್ವಾಗತಿಸಿ, ಕರ್ನಾಟಕವು ದೇಶದ ಪ್ರಮುಖ ಆಲ್ಕೋ-ಬೆವರೇಜ್ ಉತ್ಪಾದನಾ ಹಾಗೂ ಹೊಸತನದ ಕೇಂದ್ರವಾಗಿ ಹೊರಹೊಮ್ಮುತ್ತಿದೆ ಎಂದು ಹೇಳಿದರು.

ರಾಜ್ಯ ಸರ್ಕಾರ ಬೆಂಗಳೂರನ್ನು ಹೊರತುಪಡಿಸಿ ಇತರೆ ಪ್ರದೇಶಗಳಲ್ಲಿಯೂ ಬ್ರೂವರಿ ಮತ್ತು ಮದ್ಯ ತಯಾರಿಕಾ ಕೈಗಾರಿಕೆಗಳ ವಿಸ್ತರಣೆಗೆ ಬೆಂಬಲ ನೀಡಲು ಮುಂದಾಗಿರುವುದು ಉದ್ಯಮ ಕ್ಷೇತ್ರದಲ್ಲಿ ಹೊಸ ನಿರೀಕ್ಷೆ ಮೂಡಿಸಿದೆ. ಸುಸ್ಥಿರತೆ ಆಧಾರಿತ ಬೆಳವಣಿಗೆ, ದೇಶೀಯ ಉತ್ಪಾದನೆ ಹಾಗೂ ತಂತ್ರಜ್ಞಾನ ಆಧಾರಿತ ಕೈಗಾರಿಕಾ ವಿಸ್ತರಣೆಗೆ ಸರ್ಕಾರ ವಿಶೇಷ ಒತ್ತು ನೀಡುತ್ತಿದೆ ಎಂದು ತಿಳಿಸಲಾಗಿದೆ.

ಕಾರ್ಯಕ್ರಮದಲ್ಲಿ ಮಾತನಾಡಿದ ಅಬಕಾರಿ ಸಚಿವ ಆರ್. ಬಿ. ತಿಮ್ಮಾಪುರ, ಕಳೆದ ಒಂದು ವರ್ಷದಲ್ಲಿ ಬ್ರೂವರಿಗಳು, ಡಿಸ್ಟಿಲರಿಗಳು ಮತ್ತು ಆಲ್ಕೋ-ಬೆವ್ ತಯಾರಕರಿಗೆ ವ್ಯಾಪಾರ ಪ್ರಕ್ರಿಯೆ ಸುಲಭಗೊಳಿಸಲು ಹಲವು ಪ್ರಗತಿಪರ ಅಬಕಾರಿ ಹಾಗೂ ನಿಯಂತ್ರಕ ಸುಧಾರಣೆಗಳನ್ನು ಜಾರಿಗೆ ತಂದಿರುವುದಾಗಿ ಹೇಳಿದರು.




ಸರಳೀಕೃತ ಲೇಬಲ್ ಅನುಮೋದನೆ, ಘೋಷಿತ ಬೆಲೆ ಮತ್ತು ಗರಿಷ್ಠ ಚಿಲ್ಲರೆ ದರ ನವೀಕರಣ ವ್ಯವಸ್ಥೆಗಳ ಸುಧಾರಣೆ, ಡಿಜಿಟಲ್ ಅನುಸರಣೆ ಕ್ರಮಗಳು, ವಾರ್ಷಿಕ ಪರವಾನಗಿ ನವೀಕರಣ ವ್ಯವಸ್ಥೆಯ ಸರಳೀಕರಣ ಸೇರಿದಂತೆ ಹಲವು ಕ್ರಮಗಳ ಮೂಲಕ ಉದ್ಯಮ ಸ್ನೇಹಿ ಹಾಗೂ ಪಾರದರ್ಶಕ ವ್ಯವಸ್ಥೆ ನಿರ್ಮಿಸಲಾಗುತ್ತಿದೆ ಎಂದು ತಿಳಿಸಿದರು.

ರಾಜ್ಯ ಸರ್ಕಾರ 2030ರವರೆಗೆ ಉದ್ಯಮಕ್ಕೆ ದೀರ್ಘಕಾಲೀನ ನೀತಿ ಸ್ಥಿರತೆ ಹಾಗೂ ನಿಯಂತ್ರಕ ಪಾರದರ್ಶಕತೆ ಒದಗಿಸಲು ಬದ್ಧವಾಗಿದೆ ಎಂದು ಸಚಿವರು ತಿಳಿಸಿದರು. ಕರ್ನಾಟಕವು ಅಬಕಾರಿ ಆದಾಯದ ಮೂಲಕ ವರ್ಷಕ್ಕೆ ಸುಮಾರು 40 ಸಾವಿರ ಕೋಟಿ ರೂಪಾಯಿ ಆದಾಯ ಗಳಿಸುತ್ತಿದ್ದು, ರಾಜ್ಯದ ಆರ್ಥಿಕತೆ ಮತ್ತು ಕೈಗಾರಿಕಾ ವಲಯದಲ್ಲಿ ಆಲ್ಕೋ-ಬೆವ್ ಕ್ಷೇತ್ರದ ಮಹತ್ವದ ಪಾತ್ರವನ್ನು ಇದು ತೋರಿಸುತ್ತದೆ ಎಂದು ಹೇಳಿದರು.

# ಡಿಜಿಟಲ್ ಪ್ರೆಶಿಯಸ್ ಮೆಟಲ್ ಕ್ಷೇತ್ರದಲ್ಲಿ ಫೋನ್ಪೇ ಪ್ರಮುಖ ಪಾತ್ರ

ಬೆಂಗಳೂರು

ಫೋನ್ಪೇ ಭಾರತದಲ್ಲಿ ಡಿಜಿಟಲ್ ಚಿನ್ನ ಮತ್ತು ಬೆಳ್ಳಿ ವಹಿವಾಟು ಕ್ಷೇತ್ರದಲ್ಲಿ ಪ್ರಮುಖ ವೇದಿಕೆಯಾಗಿ ಹೊರಹೊಮ್ಮಿದ್ದು, ಇದೀಗ "ಡಿಜಿಟಲ್ ಪ್ರೆಶಿಯಸ್ ಮೆಟಲ್ಸ್ ಅಶ್ಯೂರೆನ್ಸ್ ಕೌನ್ಸಿಲ್ ಆಫ್ ಇಂಡಿಯಾ" ಸ್ವಯಂ-ನಿಯಂತ್ರಕ ಸಂಸ್ಥೆಯ ಪ್ರಮುಖ ಸದಸ್ಯ ಸಂಸ್ಥೆಗಳಲ್ಲೊಂದು ಆಗಿದೆ. ಡಿಜಿಟಲ್ ಮೆಟಲ್ ಮಾರುಕಟ್ಟೆಯಲ್ಲಿ ಗ್ರಾಹಕರ ವಿಶ್ವಾಸ, ಪಾರದರ್ಶಕತೆ ಹಾಗೂ ಸುರಕ್ಷತೆಯನ್ನು ಬಲಪಡಿಸುವ ಉದ್ದೇಶದಿಂದ ರಚಿಸಲಾದ ಈ ಸಂಸ್ಥೆಯಲ್ಲಿ ಫೋನ್ಪೇ ಸಕ್ರಿಯವಾಗಿ ಭಾಗವಹಿಸಿದೆ. ಗ್ರಾಹಕರು ಖರೀದಿಸುವ ಪ್ರತಿಯೊಂದು ಡಿಜಿಟಲ್ ಚಿನ್ನದ ಯೂನಿಟ್‌ಗೆ ಸಮಾನ ಪ್ರಮಾಣದ ಭೌತಿಕ ಚಿನ್ನವನ್ನು ಸುರಕ್ಷಿತ ಲಾಕರ್‌ಗಳಲ್ಲಿ ಸಂಗ್ರಹಿಸಿರಬೇಕು ಎಂಬ ಕಟ್ಟುನಿಟ್ಟಿನ ನಿಯಮವನ್ನು ಈ ಸಂಸ್ಥೆ ಅನುಸರಿಸುತ್ತಿದ್ದು, ಫೋನ್ಪೇ ಕೂಡ ಇದೇ ಮಾನದಂಡಗಳಿಗೆ ಬದ್ಧವಾಗಿದೆ. ಡಿಜಿಟಲ್ ಪಾವತಿ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವ ಫೋನ್ಪೇ, ಡಿಜಿಟಲ್ ಗೋಲ್ಡ್ ಸೇವೆಯ ಮೂಲಕ ಗ್ರಾಹಕರಿಗೆ ಸುಲಭ ಹಾಗೂ ಸುರಕ್ಷಿತ ಹೂಡಿಕೆ ಅವಕಾಶ ಒದಗಿಸುತ್ತಿದೆ. ನಿಯಮಿತ ಲೆಕ್ಕಪರಿಶೋಧನೆ, ಗುಣಮಟ್ಟದ ಮಾನದಂಡಗಳು ಹಾಗೂ ಗ್ರಾಹಕರ ದೂರು ಪರಿಹಾರ ವ್ಯವಸ್ಥೆಗಳನ್ನು ಬಲಪಡಿಸುವ ಮೂಲಕ ಡಿಜಿಟಲ್ ಮೆಟಲ್ ಪರಿಸರ ವ್ಯವಸ್ಥೆಯನ್ನು ಮತ್ತಷ್ಟು ವಿಶ್ವಾಸಾರ್ಹವಾಗಿಸಲು ಫೋನ್ಪೇ ತನ್ನ ಕೊಡುಗೆ ನೀಡುತ್ತಿದೆ.

# ಅಡ್ವಾನ್ಸ್ಡ್ ಪ್ರೋಟೀನ್ ಶಾಂಪೂ ಬಿಡುಗಡೆ

ಬೆಂಗಳೂರು

ಮಾರಿಕೊ ಲಿಮಿಟೆಡ್ ತನ್ನ ನಾವೀನ್ಯತೆ ಆಧಾರಿತ ಬೆಳವಣಿಗೆ ತಂತ್ರದ ಭಾಗವಾಗಿ "ಪ್ಯಾರಾಚೂಟ್ ಅಡ್ವಾನ್ಸ್ಡ್ ಪ್ರೋಟೀನ್ ಶಾಂಪೂ" ಬಿಡುಗಡೆ ಮಾಡುವ ಮೂಲಕ ಕೂದಲು ಶುದ್ಧೀಕರಣ ವಿಭಾಗಕ್ಕೆ ಅಧಿಕೃತವಾಗಿ ಪ್ರವೇಶಿಸಿದೆ. ಭಾರತದ ಪ್ರಮುಖ ವೇಗವಾಗಿ ಬಳಕೆಯಾಗುವ ಗ್ರಾಹಕ ವಸ್ತುಗಳ ಕಂಪನಿಗಳಲ್ಲೊಂದಾದ ಮಾರಿಕೊ, ಈ ಹೊಸ ಉತ್ಪನ್ನದ ಮೂಲಕ ಕೂದಲ ರಕ್ಷಣಾ ಕ್ಷೇತ್ರದಲ್ಲಿ ತನ್ನ ಸ್ಥಾನವನ್ನು ಮತ್ತಷ್ಟು ಬಲಪಡಿಸಲು ಮುಂದಾಗಿದೆ.




ಹೊಸ ಪ್ಯಾರಾಚೂಟ್ ಅಡ್ವಾನ್ಸ್ಡ್ ಪ್ರೋಟೀನ್ ಶಾಂಪೂ ಶ್ರೇಣಿಯಲ್ಲಿ ತೆಂಗಿನಕಾಯಿ ಹಾಗೂ ನೈಸರ್ಗಿಕ ಪದಾರ್ಥಗಳ ಪೌಷ್ಟಿಕ ಗುಣಗಳನ್ನು ಒಳಗೊಂಡಿದ್ದು, ಗ್ರಾಹಕರಲ್ಲಿ ಹೆಚ್ಚುತ್ತಿರುವ ನೈಸರ್ಗಿಕ ಉತ್ಪನ್ನಗಳ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ಇದನ್ನು ಅಭಿವೃದ್ಧಿಪಡಿಸಲಾಗಿದೆ. ಕಂಪನಿಯ ಪ್ರಕಾರ, ಈ ಉತ್ಪನ್ನವು ಕೂದಲ ಆರೈಕೆಗೆ ಪೌಷ್ಟಿಕತೆ ಮತ್ತು ಶುದ್ಧೀಕರಣ ಎರಡನ್ನೂ ಒದಗಿಸುವ ಉದ್ದೇಶ ಹೊಂದಿದೆ.

ಈ ಕುರಿತು ಮಾತನಾಡಿದ ಮಾರಿಕೊ ಲಿಮಿಟೆಡ್ ಇಂಡಿಯಾ ಕೋರ್ ಬಿಸಿನೆಸ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆಶಿಶ್ ಗೋಪಾಲ್, ಕಳೆದ ಕೆಲವು ವರ್ಷಗಳಿಂದ ಕಂಪನಿ ವರ್ಗ ವಿಸ್ತರಣೆಯ ಭಾಗವಾಗಿ ಪ್ಯಾರಾಚೂಟ್ ಅಡ್ವಾನ್ಸ್ಡ್ ಬ್ರ್ಯಾಂಡ್ ಅಡಿಯಲ್ಲಿ ವಿವಿಧ ತೆಂಗಿನಕಾಯಿ ಆಧಾರಿತ ಉತ್ಪನ್ನಗಳನ್ನು ಪರಿಚಯಿಸುತ್ತಿದ್ದು, ಈಗ ಕೂದಲು ಶುದ್ಧೀಕರಣ ವಿಭಾಗದಲ್ಲೂ ತನ್ನ ಹೆಜ್ಜೆ ಗುರುತು ಮೂಡಿಸುತ್ತಿದೆ ಎಂದು ಹೇಳಿದರು. ಭಾರತದ ವೈಯಕ್ತಿಕ ಆರೈಕೆ ಮಾರುಕಟ್ಟೆ 10 ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯ ಹೊಂದಿದ್ದು, ಇದು ವಾರ್ಷಿಕವಾಗಿ ಶೇಕಡಾ 9 ರಿಂದ 10ರಷ್ಟು ಬೆಳವಣಿಗೆ ಕಾಣುತ್ತಿದೆ ಎಂದು ಅವರು ತಿಳಿಸಿದರು. ಈ ಹಿನ್ನೆಲೆಯಲ್ಲಿ ಪ್ಯಾರಾಚೂಟ್ ಅಡ್ವಾನ್ಸ್ಡ್ ಶಾಂಪೂ ಬಿಡುಗಡೆಯು ಕಂಪನಿಗೆ ಮಹತ್ವದ ಬೆಳವಣಿಗೆಯ ಅವಕಾಶಗಳನ್ನು ಸೃಷ್ಟಿಸಲಿದೆ ಎಂದು ಅಭಿಪ್ರಾಯಪಟ್ಟರು. ಕೂದಲು ಶುದ್ಧೀಕರಣ ವಿಭಾಗಕ್ಕೆ ಪ್ಯಾರಾಚೂಟ್ ಅಡ್ವಾನ್ಸ್ಡ್ ಪ್ರವೇಶಿಸುವುದರಿಂದ ಕೂದಲ ರಕ್ಷಣೆಯ ಸಂಪೂರ್ಣ ಶ್ರೇಣಿಯಲ್ಲಿ ಬ್ರ್ಯಾಂಡ್‌ನ ಪ್ರಭಾವ ವಿಸ್ತರಿಸುವ ನಿರೀಕ್ಷೆ ಇದೆ.

# ಗೀತಂ ಬೆಂಗಳೂರು ಕ್ಯಾಂಪಸ್‌ನಲ್ಲಿ ಪ್ರವೇಶಾತಿ ಪ್ರಕ್ರಿಯೆ ಆರಂಭ

ಬೆಂಗಳೂರು

ಗೀತಂ ವಿಶ್ವವಿದ್ಯಾಲಯ ತನ್ನ ಬೆಂಗಳೂರು ಕ್ಯಾಂಪಸ್‌ನಲ್ಲಿ 2026-27ನೇ ಶೈಕ್ಷಣಿಕ ವರ್ಷದ ವಿವಿಧ ಪದವಿ ಹಾಗೂ ಸ್ನಾತಕೋತ್ತರ ಕೋರ್ಸ್‌ಗಳ ಪ್ರವೇಶಾತಿ ಪ್ರಕ್ರಿಯೆಯನ್ನು ಅಧಿಕೃತವಾಗಿ ಆರಂಭಿಸಿದೆ. ವಿದ್ಯಾರ್ಥಿಗಳಿಗೆ ಈ ಬಾರಿ ಹಲವು ವಿಶೇಷ ಸೌಲಭ್ಯಗಳನ್ನು ಕಲ್ಪಿಸಲಾಗಿದ್ದು, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಶೇ. 100ರವರೆಗೆ ವಿದ್ಯಾರ್ಥಿವೇತನ ಪಡೆಯುವ ಅವಕಾಶವನ್ನು ಸಂಸ್ಥೆ ಘೋಷಿಸಿದೆ.

ಈ ಶೈಕ್ಷಣಿಕ ವರ್ಷದಲ್ಲಿ ವಿದ್ಯಾರ್ಥಿಗಳು ತಮ್ಮ ದ್ವಿತೀಯ ಪಿಯುಸಿ ಅಥವಾ 12ನೇ ತರಗತಿ ಅಂಕಗಳ ಆಧಾರದ ಮೇಲೆ ನೇರವಾಗಿ ಪದವಿ ಕೋರ್ಸ್‌ಗಳಿಗೆ ಪ್ರವೇಶ ಪಡೆಯಬಹುದಾಗಿದೆ. ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ವಿಶೇಷ ವಿದ್ಯಾರ್ಥಿವೇತನ ಸೌಲಭ್ಯವೂ ಲಭ್ಯವಿದೆ. ಇದೇ ವೇಳೆ ಸ್ನಾತಕೋತ್ತರ ಕೋರ್ಸ್‌ಗಳಿಗೆ ಸೇರ್ಪಡೆಯಾಗುವ ವಿದ್ಯಾರ್ಥಿಗಳಿಗೆ ಅವರ ಪದವಿ ಅಂಕಗಳ ಆಧಾರದ ಮೇಲೆ ಪ್ರವೇಶ ನೀಡಲಾಗುತ್ತದೆ ಎಂದು ಸಂಸ್ಥೆ ತಿಳಿಸಿದೆ.

ಗೀತಂ ವಿಶ್ವವಿದ್ಯಾಲಯವು ಜೂನ್ 14, 2026ರಂದು ರಾಷ್ಟ್ರ ಮಟ್ಟದ ಪ್ರವೇಶ ಪರೀಕ್ಷೆಯಾದ "ಗ್ಯಾಟ್-2026" ಅನ್ನು ದೇಶಾದ್ಯಂತ ಆಯೋಜಿಸಿದೆ.

ಈ ಪರೀಕ್ಷೆಯಲ್ಲಿ ಅತ್ಯುತ್ತಮ ಶ್ರೇಯಾಂಕ ಪಡೆಯುವ ವಿದ್ಯಾರ್ಥಿಗಳಿಗೆ ಶೇ. 100ರಷ್ಟು ವಿದ್ಯಾರ್ಥಿವೇತನ ನೀಡಲಾಗುತ್ತದೆ. ವಿಶೇಷವೆಂದರೆ ಈ ವಿದ್ಯಾರ್ಥಿವೇತನದಲ್ಲಿ ಕಾಲೇಜು ಶುಲ್ಕ ಮಾತ್ರವಲ್ಲದೆ ಉಚಿತ ವಸತಿ ಹಾಗೂ ಉಚಿತ ಆಹಾರ ವೆಚ್ಚವೂ ಒಳಗೊಂಡಿದೆ.

ಪ್ರವೇಶಾತಿಗೆ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ ಜೂನ್ 12, 2026 ಆಗಿದ್ದು, ಆಸಕ್ತ ಹಾಗೂ ಅರ್ಹ ವಿದ್ಯಾರ್ಥಿಗಳು ಗೀತಂ ವಿಶ್ವವಿದ್ಯಾಲಯದ ಅಧಿಕೃತ ಜಾಲತಾಣ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

# ಕುಂದುಕೊರತೆ ಸಭೆ

ಪಾವಗಡ

ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ ಜಿ. ಅವರು ಪಟ್ಟಣದ ಆಫ್ ಬಂಡೆ ಪ್ರದೇಶದಲ್ಲಿ ಆಯೋಜಿಸಿದ್ದ ಅಲೆಮಾರಿ ಸಮುದಾಯದ ಕುಂದುಕೊರತೆ ಸಭೆಯಲ್ಲಿ ಶನಿವಾರ ಭಾಗವಹಿಸಿದರು.

ಕಾರ್ಯಕ್ರಮದಲ್ಲಿ ಅಲೆಮಾರಿ ಸಮುದಾಯದ ಜನರಿಂದ ವಿವಿಧ ಸಮಸ್ಯೆಗಳ ಕುರಿತ ಅಹವಾಲುಗಳನ್ನು ಸ್ವೀಕರಿಸಿ ಮಾತನಾಡಿದ ಅವರು, ಸರ್ಕಾರ ಕೋಟ್ಯಂತರ ರೂಪಾಯಿ ವೆಚ್ಚದಲ್ಲಿ ಅಲೆಮಾರಿ ಸಮುದಾಯಗಳ ಅಭಿವೃದ್ಧಿಗಾಗಿ ಅನೇಕ ಯೋಜನೆಗಳು ಹಾಗೂ ಕಾರ್ಯಕ್ರಮಗಳನ್ನು ಜಾರಿಗೊಳಿಸಿದೆ ಎಂದು ಹೇಳಿದರು.

"ಅಲೆಮಾರಿ ಸಮುದಾಯಗಳು ಅಭಿವೃದ್ಧಿ ಹೊಂದಬೇಕಾದರೆ ಶಿಕ್ಷಣ ಅತ್ಯಗತ್ಯ. ಅಲೆಮಾರಿ ಅಭಿವೃದ್ಧಿ ನಿಗಮದ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಲು ಈ ರೀತಿಯ ಕಾರ್ಯಕ್ರಮಗಳು ಸಹಕಾರಿಯಾಗುತ್ತವೆ. ಜೊತೆಗೆ ಜನರ ಸಮಸ್ಯೆಗಳನ್ನು ಅರಿಯಲು ಇದು ಉತ್ತಮ ವೇದಿಕೆಯಾಗಿದೆ," ಎಂದು ಹೇಳಿದರು.

ಅಲೆಮಾರಿ ಸಮುದಾಯಗಳ ಅಭಿವೃದ್ಧಿಗಾಗಿ ಪಕ್ಷಾತೀತ ಹಾಗೂ ನಿಷ್ಪಕ್ಷಪಾತವಾಗಿ ಕೆಲಸ ಮಾಡಲಾಗುವುದು. ಸರ್ಕಾರಿ ಸೌಲಭ್ಯಗಳು ನೇರವಾಗಿ ಸಮುದಾಯದ ಜನರಿಗೆ ತಲುಪುವಂತೆ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಸಭೆಯಲ್ಲಿ ಅಂಬೇಡ್ಕರ್ ಕಾರ್ಡ್ ಹಾಗೂ ಅಂಬೇಡ್ಕರ್ ಸಹಾಯಹಸ್ತ ಕಾರ್ಡ್‌ಗಳ ತಾಲ್ಲೂಕುವಾರು ಪ್ರಗತಿ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದ ಅವರು, ಅಲೆಮಾರಿ ಅಭಿವೃದ್ಧಿ ನಿಗಮದಿಂದ ತಾಲ್ಲೂಕಿಗೆ ಬಂದಿರುವ ನಿವೇಶನಗಳ ಸಂಖ್ಯೆಯ ವಿವರಗಳನ್ನೂ ಪರಿಶೀಲಿಸಿದರು.

ಆಧಾರ್ ಕಾರ್ಡ್, ಪಡಿತರ ಚೀಟಿ ಹಾಗೂ ಜಾತಿ ಪ್ರಮಾಣಪತ್ರ ಇಲ್ಲದ ಅಲೆಮಾರಿ ಸಮುದಾಯದ ಜನರನ್ನು ಶೀಘ್ರವಾಗಿ ಗುರುತಿಸಿ ಪಟ್ಟಿ ಸಿದ್ಧಪಡಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಕಾರ್ಯಕ್ರಮದ ಬಳಿಕ ಅಲೆಮಾರಿ ಸಮುದಾಯದವರ ಜೋಪಡಿಗಳಿಗೆ ಭೇಟಿ ನೀಡಿದ ಪಲ್ಲವಿ ಜಿ., ಅಡುಗೆ ಮಾಡುವ ಹಾಗೂ ಮಲಗುವ ಸ್ಥಳಗಳನ್ನು ಪರಿಶೀಲಿಸಿದರು. ಮಹಿಳೆಯರೊಂದಿಗೆ ಮಾತನಾಡಿ ಅವರ ಬದುಕಿನ ಸ್ಥಿತಿ, ಮಕ್ಕಳ ಶಿಕ್ಷಣ, ನಿವೇಶನ ಹಾಗೂ ಹಕ್ಕುಪತ್ರಗಳ ಕುರಿತು ಮಾಹಿತಿ ಪಡೆದುಕೊಂಡರು. ಈ ವೇಳೆ ಮಹಿಳೆಯರು ತೆಲುಗು ಭಾಷೆಯಲ್ಲಿ ನಿವೇಶನದ ಜೊತೆಗೆ ವಾಸಕ್ಕೆ ಜಾಗ ಒದಗಿಸುವಂತೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ವಿಮುಕ್ತ ಬುಡಕಟ್ಟು ಒಕ್ಕೂಟದ ಜಂಟಿ ನಿರ್ದೇಶಕ ಏಕಲವ್ಯ ಆನಂದ್, ಪುರಸಭೆ ಮುಖ್ಯಾಧಿಕಾರಿ ಜಾಫರ್ ಷರೀಫ್, ಜೆಡಿಎಸ್ ಮುಖಂಡ ತಿಮ್ಮಾರೆಡ್ಡಿ, ಸೊಗಡು ವೆಂಕಟೇಶ್, ಸಿಡಿಪಿಒ ಸುನಿತಾ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ದಿನೇಶ್, ಇಒ ಮಧುಸೂದನ್, ಕಂದಾಯ ಅಧಿಕಾರಿ ರಾಜಗೋಪಾಲ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಲ್ಲಿದ್ದಲು ಗಣಿ ಸ್ಫೋಟ: 82 ಜನರು ಸಾವು

ಬೀಜಿಂಗ್ (ಚೀನಾ)

ಉತ್ತರ ಚೀನಾದ ಕಲ್ಲಿದ್ದಲು ಗಣಿಯಲ್ಲಿ ಸಂಭವಿಸಿದ ಅನಿಲ ಸ್ಫೋಟದಲ್ಲಿ ಕನಿಷ್ಠ 82 ಜನರು ಸಾವನ್ನಪ್ಪಿದ್ದಾರೆ ಎಂದು ಅಲ್ಲಿನ ಮಾಧ್ಯಮ ಶನಿವಾರ ವರದಿ ಮಾಡಿದೆ. ಇದು ಇತ್ತೀಚಿನ ವರ್ಷಗಳಲ್ಲಿ ಚೀನಾದಲ್ಲಿ ನಡೆದ ಅತಿದೊಡ್ಡ ಕೈಗಾರಿಕಾ ವಿಪತ್ತುಗಳಲ್ಲಿ ಒಂದಾಗಿದೆ.

ಶಾಂಕ್ಸಿ ಪ್ರಾಂತ್ಯದ ಲಿಯುಶೆನ್ಯು ಕಲ್ಲಿದ್ದಲು ಗಣಿಯಲ್ಲಿ ಶುಕ್ರವಾರ ಸಂಜೆ 7:29ಕ್ಕೆ ಸ್ಫೋಟ ಸಂಭವಿಸಿದೆ ಎಂದು ರಾಜ್ಯ ಸುದ್ದಿ ಸಂಸ್ಥೆ ಕ್ಸಿನ್ಹುವಾ ವರದಿ ಮಾಡಿದೆ. ಆ ಸಮಯದಲ್ಲಿ ಒಟ್ಟು 247 ಕಾರ್ಮಿಕರು ನೆಲದಡಿಯಲ್ಲಿದ್ದರು. ಅವರಲ್ಲಿ ಹೆಚ್ಚಿನವರನ್ನು ಶನಿವಾರ ಬೆಳಗ್ಗೆ ಮೇಲೆ ತರಲಾಯಿತು ಎಂದು ಕ್ಸಿನ್ಹುವಾ ತಿಳಿಸಿದೆ.

ಘಟನೆಯಲ್ಲಿ ಕನಿಷ್ಠ 82 ಜನರು ಸಾವನ್ನಪ್ಪಿದ್ದಾರೆ. ಪತ್ತೆಯಾಗದ ಒಂಬತ್ತು ಜನರಿಗಾಗಿ ರಕ್ಷಣಾ ಕಾರ್ಯಕರ್ತರು ಇನ್ನೂ ತೀವ್ರವಾಗಿ ಹುಡುಕುತ್ತಿದ್ದಾರೆ ಎಂದು ಹೇಳಿದೆ.

ಚೀನಾದ ಸರ್ಕಾರಿ ಮಾಧ್ಯಮವಾಗಿರುವ ಸಿಸಿಟಿವಿ ಪ್ರಕಟಿಸಿದ ದೃಶ್ಯಗಳಲ್ಲಿ ಹೆಲ್ಮೆಟ್ ಧರಿಸಿದ ರಕ್ಷಣಾ ಕಾರ್ಯಕರ್ತರು ಸ್ಥಳದಲ್ಲಿ ಸ್ಟ್ರೆಚರ್‌ಗಳನ್ನು ಹೊತ್ತೊಯ್ಯುತ್ತಿರುವುದು ಕಂಡುಬಂದಿದೆ. ಅಲ್ಲದೇ, ಆಂಬ್ಯುಲೆನ್ಸ್‌ಗಳೂ ಗೋಚರಿಸುತ್ತಿವೆ.

ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರು, ಗಾಯಾಳುಗಳಿಗೆ ಸೂಕ್ತ ಚಿಕಿತ್ಸೆ ನೀಡುವಂತೆ ಸೂಚಿಸಿದ್ದಾರೆ. ಘಟನೆಯ ಬಗ್ಗೆ ಸಂಪೂರ್ಣ ತನಿಖೆಗೆ ಆದೇಶ ಮಾಡಿದ್ದಾರೆ ಎಂದು ಕ್ಸಿನ್ಹುವಾ ಹೇಳಿದೆ.

'ಈ ಅಪಘಾತದಿಂದ ಪಾಠಗಳನ್ನು ಕಲಿಯಬೇಕು, ಕೆಲಸದ ಸ್ಥಳದ ಸುರಕ್ಷತೆಯ ಬಗ್ಗೆ ನಿರಂತರವಾಗಿ ಜಾಗರೂಕರಾಗಿರಬೇಕು. ಪ್ರಮುಖ ಮತ್ತು ದುರಂತ ಅಪಘಾತಗಳ ಸಂಭವವನ್ನು ದೃಢನಿಶ್ಚಯದಿಂದ ತಡೆಯಬೇಕು ಮತ್ತು ನಿಗ್ರಹಿಸಬೇಕು' ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಆದೇಶ ನೀಡಿದ್ದಾರೆ.

ಗಣಿಯಲ್ಲಿ ಹೆಚ್ಚು ವಿಷಕಾರಿ, ವಾಸನೆಯಿಲ್ಲದ ಅನಿಲವಾದ ಇಂಗಾಲದ ಮಾನಾಕ್ಸೈಡ್ ಮಟ್ಟವು "ಮಿತಿ ಮೀರಿದೆ" ಎಂದು ಕಂಡುಬಂದ ನಂತರ ನಾಲ್ಕು ಸಾವುಗಳು ಮತ್ತು ಡಜನ್ಗಟ್ಟಲೆ ಜನರು ಸಿಲುಕಿದ್ದಾರೆ ಎಂದು ರಾಜ್ಯ ಮಾಧ್ಯಮಗಳು ಆರಂಭದಲ್ಲಿ ವರದಿ ಮಾಡಿದ್ದವು.

ಚೀನಾದ ಬಡ ಪ್ರಾಂತ್ಯಗಳಲ್ಲಿ ಒಂದಾದ ಶಾಂಕ್ಸಿ, ದೇಶದ ಕಲ್ಲಿದ್ದಲು ಗಣಿಗಾರಿಕೆ ರಾಜಧಾನಿಯಾಗಿದೆ. ಇತ್ತೀಚಿನ ದಶಕಗಳಲ್ಲಿ ದೇಶದಲ್ಲಿ ಗಣಿ ಸುರಕ್ಷತೆ ಸುಧಾರಿಸಿದೆ.

ಆದರೆ, ಸುರಕ್ಷತಾ ಪ್ರೋಟೋಕಾಲ್‌ಗಳು ಸಡಿಲವಾಗಿರುವುದರಿಂದಾಗಿ ಮತ್ತು ನಿಯಮಗಳು ಅಸ್ಪಷ್ಟವಾಗಿರುವುದರಿಂದಾಗಿ ಇನ್ನೂ ಅಲ್ಲಲ್ಲಿ ಇಂತಹ

# ಕೆಸ್ತೂರು ವಿಎಸ್‌ಎಸ್‌ಎನ್ ಚುನಾವಣೆಯಲ್ಲಿ ಕಾಂಗ್ರೆಸ್ ಮಾತು ತಪ್ಪಿದೆ: ಹರೀಶ್‌ಗೌಡ

ದೊಡ್ಡಬಳ್ಳಾಪುರ

ಕೆಸ್ತೂರು ವಿಎಸ್‌ಎಸ್‌ಎನ್ ಅಧ್ಯಕ್ಷ ಸ್ಥಾನ ನೀಡುವುದಾಗಿ ಭರವಸೆ ನೀಡಿ ಕಾಂಗ್ರೆಸ್ ಪಕ್ಷ ಜೆಡಿಎಸ್‌ಗೆ ಮೋಸ ಮಾಡಿದೆ ಎಂದು ತಾಲೂಕು ಜೆಡಿಎಸ್ ಅಧ್ಯಕ್ಷ ಎಸ್.ಎಂ. ಹರೀಶ್ ಗೌಡ ಆರೋಪಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ತಾಲೂಕು ಜೆಡಿಎಸ್ ಘಟಕ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚುನಾವಣೆಗೆ ಮುನ್ನ ಜೆಡಿಎಸ್ ಅಭ್ಯರ್ಥಿಗಳನ್ನು ಬಳಸಿಕೊಂಡು ಅಧಿಕಾರದ ಚುಕ್ಕಾಣಿ ಹಿಡಿದ ಕಾಂಗ್ರೆಸ್ ಈಗ ಅಧಿಕಾರ ಹಸ್ತಾಂತರಿಸದೆ ತನ್ನ ನಿಲುವು ತೋರಿದೆ ಎಂದು ಟೀಕಿಸಿದರು. "ಇನ್ನು ಮುಂದೆ ಸ್ಥಳೀಯ ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಜೆಡಿಎಸ್ ಯಾವುದೇ ಕಾರಣಕ್ಕೂ ಬೆಂಬಲ ನೀಡುವುದಿಲ್ಲ," ಎಂದು ಸ್ಪಷ್ಟಪಡಿಸಿದರು.

ತಾಲೂಕಿನಲ್ಲಿ ಜೆಡಿಎಸ್ ಭದ್ರಕೋಟೆಯೆಂದು ಪರಿಗಣಿಸಲ್ಪಡುವ ಕೆಸ್ತೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಿಎಸ್‌ಎಸ್‌ಎನ್ ಚುನಾವಣೆಯಲ್ಲಿ ಕಾಂಗ್ರೆಸ್ ಮತ್ತು ಜೆಡಿಎಸ್ ಮೈತ್ರಿ ಮಾಡಿಕೊಂಡಿದ್ದವು. ಜೆಡಿಎಸ್‌ನಿಂದ ನಾಲ್ವರು ನಿರ್ದೇಶಕರು ಜಯಗಳಿಸಿ ಕಾಂಗ್ರೆಸ್‌ಗೆ ಬೆಂಬಲ ನೀಡಿದ್ದರು. ಚುನಾವಣೆಯ ವೇಳೆ ನೀಡಿದ ಮಾತಿನಂತೆ ಪ್ರಸ್ತುತ ಜೆಡಿಎಸ್ ಸದಸ್ಯರಿಗೆ ಅಧಿಕಾರ ನೀಡಬೇಕಾಗಿತ್ತು. ಆದರೆ ಕಾಂಗ್ರೆಸ್ ತನ್ನ ಸ್ಥಾನ ಬಲಪಡಿಸಿಕೊಳ್ಳಲು ಜೆಡಿಎಸ್ ಸದಸ್ಯರನ್ನು ಕಡೆಗಣಿಸಿ ಅಧಿಕಾರ ಪಡೆದಿದೆ ಎಂದು ಆರೋಪಿಸಿದರು.



"ವಿಎಸ್‌ಎಸ್‌ಎನ್ ನಿರ್ದೇಶಕರಾದ ಅಶ್ವತ್ಥ್ ನಾರಾಯಣ್ ಮತ್ತು ರಾಮಮೂರ್ತಿ ಅವರಿಗೆ ನೀಡಿದ್ದ ಮಾತನ್ನು ಕಾಂಗ್ರೆಸ್ ತಪ್ಪಿದೆ. ಜೆಡಿಎಸ್‌ಗೆ ಸಲ್ಲಬೇಕಿದ್ದ ಅಧಿಕಾರವನ್ನು ಕುತಂತ್ರದಿಂದ ಪಡೆದುಕೊಂಡಿದೆ," ಎಂದು ಹರೀಶ್ ಗೌಡ ಹೇಳಿದರು. ಕೆಸ್ತೂರು ವಿಎಸ್‌ಎಸ್‌ಎನ್ ಚುನಾವಣೆಯಲ್ಲಿ ತನ್ನ ಶಕ್ತಿ ಹೆಚ್ಚಿಸಿಕೊಳ್ಳಲು ಕಾಂಗ್ರೆಸ್ ಜೆಡಿಎಸ್ ಜೊತೆ ಮೈತ್ರಿ ಮಾಡಿಕೊಂಡಿತ್ತು. ಚುನಾವಣೆ ಗೆದ್ದ ಬಳಿಕ ಬೆಂಬಲ ನೀಡಿದ ಜೆಡಿಎಸ್ ನಿರ್ದೇಶಕರಿಗೆ ಅಧಿಕಾರ ಹಂಚಿಕೆ ಮಾಡುವ ಭರವಸೆ ನೀಡಲಾಗಿತ್ತು. ಆದರೆ ಅಧಿಕಾರ ಹಸ್ತಾಂತರದ ಸಮಯ ಬಂದಾಗ ಜೆಡಿಎಸ್ ಸದಸ್ಯರನ್ನು ಕಡೆಗಣಿಸಿ ಅಧಿಕಾರ ಕಸಿದುಕೊಳ್ಳಲಾಗಿದೆ ಎಂದು ಅವರು ದೂರಿದರು.

"ದೊಡ್ಡಬಳ್ಳಾಪುರ ಜೆಡಿಎಸ್ ಈ ನಡೆಗೆ ತೀವ್ರ ಖಂಡನೆ ವ್ಯಕ್ತಪಡಿಸುತ್ತದೆ. ಮುಂದಿನ ಚುನಾವಣೆಗಳಲ್ಲಿ ಕಾಂಗ್ರೆಸ್ ವಿರುದ್ಧ ಸ್ಪರ್ಧಿಸಿ ಜೆಡಿಎಸ್ ತನ್ನ ಶಕ್ತಿ ಪ್ರದರ್ಶಿಸಲಿದೆ," ಎಂದು ಹೇಳಿದರು.

ಎನ್‌ಡಿಎ ಮೈತ್ರಿ ಕುರಿತು ಮಾತನಾಡಿದ ಅವರು, "ರಾಜ್ಯ ವರಿಷ್ಠರಿಂದ ಲೋಕಸಭೆ ಚುನಾವಣೆಯಲ್ಲಿ ಮಾತ್ರ ಮೈತ್ರಿ ಪಾಲನೆ ಮಾಡಲು ಸೂಚನೆ ಇದೆ. ಸ್ಥಳೀಯ ಚುನಾವಣೆಗಳಲ್ಲಿ ಮೈತ್ರಿ ಕಡ್ಡಾಯ ಎಂದು ಯಾವುದೇ ಆದೇಶ ಬಂದಿಲ್ಲ. ಸ್ಥಳೀಯ ಅಗತ್ಯಕ್ಕೆ ಅನುಗುಣವಾಗಿ ಮೈತ್ರಿ ಮಾಡಿಕೊಳ್ಳಲು ಅವಕಾಶ ಇದೆ," ಎಂದು ಹೇಳಿದರು.

ತಾಲೂಕಿನಲ್ಲಿ ನಡೆಯುತ್ತಿರುವ ಪಕ್ಷ ವಿರೋಧಿ ಚಟುವಟಿಕೆಗಳನ್ನು ರಾಜ್ಯ ನಾಯಕತ್ವ ಗಮನಿಸುತ್ತಿದೆ. ಸೂಕ್ತ ಸಮಯದಲ್ಲಿ ಕ್ರಮ ಕೈಗೊಳ್ಳಲಿದೆ ಎಂದು ಹೇಳಿದರು.

ಕಳೆದ ನಾಲ್ಕು ತಿಂಗಳ ಹಿಂದೆ ತಾಲೂಕಿಗೆ ಆಗಮಿಸಿದ್ದ ಕೋರ್ ಕಮಿಟಿ ಅಧ್ಯಕ್ಷ ಕೃಷ್ಣಾರೆಡ್ಡಿ ಕಾರ್ಯಕರ್ತರ ಅಭಿಪ್ರಾಯ ಸಂಗ್ರಹಿಸಿದ್ದರು. ನೂತನ ಜಿಲ್ಲಾಧ್ಯಕ್ಷ ಮಂಜುನಾಥ್ ಹಲವು ಸಭೆಗಳನ್ನು ನಡೆಸಿ ತಾಲೂಕು ಘಟಕದ ಹೊಸ ಪದಾಧಿಕಾರಿಗಳನ್ನು ಆಯ್ಕೆ ಮಾಡಿದ್ದಾರೆ ಎಂದು ಹೇಳಿದರು.

"ಕೆಲವರು ಕೋರ್ ಕಮಿಟಿ ಅಧ್ಯಕ್ಷರು, ಜಿಲ್ಲಾಧ್ಯಕ್ಷರು ಮತ್ತು ತಾಲೂಕು ಸಮಿತಿ ಸದಸ್ಯರ ವಿರುದ್ಧ ಏಕವಚನದಲ್ಲಿ ಮಾತನಾಡುತ್ತಿರುವ ಮಾಹಿತಿ ರಾಜ್ಯ ಸಮಿತಿಗೆ ತಿಳಿದಿದೆ. ರಾಜ್ಯ ಯುವ ನಾಯಕ ನಿಖಿಲ್ ಕುಮಾರಸ್ವಾಮಿ ಅವರ ಕಾರ್ಯಕ್ರಮ ಹಾಳು ಮಾಡಲು ಮಾಡಿದ ಪ್ರಯತ್ನಗಳ ಬಗ್ಗೆಯೂ ವರಿಷ್ಠರಿಗೆ ಮಾಹಿತಿ ಇದೆ. ಸಮಯ ಬಂದಾಗ ಸೂಕ್ತ ನಿರ್ಧಾರ ಕೈಗೊಳ್ಳಲಾಗುತ್ತದೆ," ಎಂದು ಹೇಳಿದರು.

ಕೆಸ್ತೂರು ವಿಎಸ್‌ಎಸ್‌ಎನ್ ನಿರ್ದೇಶಕ ರಾಮಮೂರ್ತಿ ಮಾತನಾಡಿ, "ನಾನು ಜೆಡಿಎಸ್‌ನ ನಿಷ್ಠಾವಂತ ಕಾರ್ಯಕರ್ತ. ಚುನಾವಣೆಯ ವೇಳೆ ಕಾಂಗ್ರೆಸ್‌ಗೆ ಮೂರು ವರ್ಷ ಹಾಗೂ ಜೆಡಿಎಸ್‌ಗೆ ಎರಡು ವರ್ಷ ಅಧಿಕಾರ ಎಂಬ ಒಪ್ಪಂದವಾಗಿತ್ತು. ಅದರಂತೆ ಕೇವಲ ಆರು ತಿಂಗಳು ಅಧ್ಯಕ್ಷ ಸ್ಥಾನ ಬಿಡುವಂತೆ ಜೆಡಿಎಸ್ ಮುಖಂಡ ಹುಸ್ಕೂರ್ ಆನಂದ್ ಅವರನ್ನು ಕೇಳಿದ್ದೆ. ಅವರು ಒಪ್ಪಿದ್ದರು," ಎಂದರು.

ಆದರೆ ನಂತರದ ಅಧ್ಯಕ್ಷರ ಚುನಾವಣೆಯಲ್ಲಿ ತಮ್ಮ ಗಮನಕ್ಕೂ ತರದೆ ಕಾಂಗ್ರೆಸ್ ಅಭ್ಯರ್ಥಿಗೆ ಬೆಂಬಲ ನೀಡಲಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. "ಸ್ವಂತ ಪಕ್ಷದವರೇ ನಮಗೆ ಮೋಸ ಮಾಡಿದರೆ ನಾವು ಯಾರನ್ನು ಕೇಳಬೇಕು? ಜೆಡಿಎಸ್ ಕಾರ್ಯಕರ್ತರನ್ನು ಉಳಿಸುವ ನಿಟ್ಟಿನಲ್ಲಿ ರಾಜ್ಯ ನಾಯಕತ್ವ ತೀರ್ಮಾನ ಕೈಗೊಳ್ಳಬೇಕು," ಎಂದು ಮನವಿ ಮಾಡಿದರು.

ವಿಎಸ್‌ಎಸ್‌ಎನ್ ನಿರ್ದೇಶಕ ಮಂಡಿಬ್ಯಾಡರಹಳ್ಳಿ ಅಶ್ವತ್ಥ್ ನಾರಾಯಣ್ ಮಾತನಾಡಿ, ಕಾಂಗ್ರೆಸ್ ಜೊತೆ ಮೈತ್ರಿ ಮಾಡಿಕೊಂಡಿದ್ದು ಸತ್ಯ ಎಂದು ಒಪ್ಪಿಕೊಂಡರು. "ಚುನಾವಣೆಯ ಬಳಿಕ ಹೆಚ್ಚು ಮತಗಳಿಂದ ಗೆದ್ದಿದ್ದ ರಾಮಮೂರ್ತಿಯನ್ನು ಅಧ್ಯಕ್ಷರನ್ನಾಗಿ ಮಾಡಬೇಕೆಂದು ಕೇಳಿದ್ದೆವು. ಆಗ ಮೊದಲು ನಮಗೆ ಅವಕಾಶ ನೀಡಿ ನಂತರ ರಾಮಮೂರ್ತಿಯನ್ನು ಮಾಡೋಣ ಎಂದು ಹೇಳಿದ್ದರು. ಆದರೆ ನಂತರ ಕಾಂಗ್ರೆಸ್‌ಗೆ ಮಾತು ಕೊಟ್ಟಿದ್ದೇನೆ ಎಂದು ಹೇಳಿ ನಮ್ಮ ಮತಗಳನ್ನು ಕಾಂಗ್ರೆಸ್ ಪರ ಬಳಸಿದರು," ಎಂದು ಆರೋಪಿಸಿದರು.

"ಈಗ ಮತ್ತೆ ರಾಮಮೂರ್ತಿಗೆ ಅವಕಾಶ ನೀಡದೆ ಕಾಂಗ್ರೆಸ್ ಬೆಂಬಲಿಸಿ ಸ್ವಪಕ್ಷದವರನ್ನೇ ವಂಚಿಸಿದ್ದಾರೆ. ನಮ್ಮವರೇ ವಂಚಿಸಿದರೆ ನ್ಯಾಯಕ್ಕಾಗಿ ಯಾರ ಬಳಿಗೆ ಹೋಗಬೇಕು?" ಎಂದು ಪ್ರಶ್ನಿಸಿದರು. ಸುದ್ದಿಗೋಷ್ಠಿಯಲ್ಲಿ ತಾಲೂಕು ಜೆಡಿಎಸ್ ಮುಖಂಡರಾದ ತ.ನ. ಪ್ರಭುದೇವ್, ಕೆಂಪರಾಜ್, ಪ್ರಭಾಕರ್, ನಾಗರಾಜ್, ಪ್ರವೀಣ್, ಅಶ್ವತ್ಥ್ ನಾರಾಯಣ್ ಸೇರಿದಂತೆ ಹಲವು ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

# 5 ಲಕ್ಷ ಸಸಿ ನೆಡುವ ಮಹತ್ವಾಕಾಂಕ್ಷಿ ಯೋಜನೆ

ಚಿಕ್ಕಬಳ್ಳಾಪುರ

ರಾಜ್ಯದಲ್ಲೇ ಮಾದರಿಯಾಗುವ ಗುರಿಯೊಂದಿಗೆ ಚಿಕ್ಕಬಳ್ಳಾಪುರ ಜಿಲ್ಲೆಯನ್ನು ಸಸಿ ನೆಡುವ ಅಭಿಯಾನದ ಪೈಲಟ್ ಯೋಜನೆಯಾಗಿ ಆಯ್ಕೆ ಮಾಡಲಾಗಿದ್ದು, ಮಿಯಾವಾಕಿ ವಿಧಾನದಲ್ಲಿ 5 ಲಕ್ಷ ಸಸಿಗಳನ್ನು ನೆಡುವ ಯೋಜನೆ ಕೈಗೆತ್ತಿಕೊಳ್ಳಲಾಗಿದೆ ಎಂದು ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯ ಆಡಳಿತಾತ್ಮಕ ನ್ಯಾಯಾಧೀಶ ಹಂಚಾಟೆ ಸಂಜೀವಕುಮಾರ್ ತಿಳಿಸಿದರು.

ಪರಿಸರ ದಿನಾಚರಣೆ ಅಂಗವಾಗಿ ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ 5 ಲಕ್ಷಕ್ಕೂ ಹೆಚ್ಚು ಗಿಡಗಳನ್ನು ನೆಡುವ ಕುರಿತು ಜಿಲ್ಲಾ ನ್ಯಾಯಾಲಯ ಸಭಾಂಗಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಮೂಲಕ ರಾಜ್ಯದಾದ್ಯಂತ 5 ಕೋಟಿ ಸಸಿಗಳನ್ನು ನೆಡುವ ಮಹತ್ವದ ಅಭಿಯಾನಕ್ಕೆ ಚಾಲನೆ ನೀಡಲಾಗಿದೆ ಎಂದು ಹೇಳಿದರು.

"ಚಿಕ್ಕಬಳ್ಳಾಪುರವು ಗ್ರೀನ್ ರಿಂಗ್ ಬೆಂಗಳೂರು ಕಾರಿಡಾರ್ ವ್ಯಾಪ್ತಿಯಲ್ಲಿ ಬರುತ್ತದೆ. ಈ ಕಾರಿಡಾರ್ ವಿಧಾನಸೌಧದಿಂದ ಸುಮಾರು 50 ಕಿಲೋ ಮೀಟರ್ ವೈಮಾನಿಕ ಅಂತರದೊಳಗಿನ ಪ್ರದೇಶಗಳನ್ನು ಒಳಗೊಂಡಿದೆ. ಈ ಯೋಜನೆಯಡಿ ವಿಸ್ತರಿಸುತ್ತಿರುವ ಬೆಂಗಳೂರು ಸುತ್ತಮುತ್ತ ಜೀವ ವೈವಿಧ್ಯತೆ ಹೆಚ್ಚಿಸುವುದು, ಅಂತರ್ಜಲ ಮರುಪೂರಣ ವೃದ್ಧಿಸುವುದು ಹಾಗೂ ಧೂಳು ಮತ್ತು ವಾಯುಮಾಲಿನ್ಯ ಕಡಿಮೆ ಮಾಡುವ ಉದ್ದೇಶದಿಂದ ರಾಜ್ಯದಲ್ಲಿ 5 ಕೋಟಿ ಸಸಿಗಳನ್ನು ನೆಡಲಾಗುತ್ತಿದೆ," ಎಂದು ವಿವರಿಸಿದರು.

ಚಿಕ್ಕಬಳ್ಳಾಪುರ ಜಿಲ್ಲೆಗೆ ಹೆಚ್ಚಿನ ಅರಣ್ಯ ಪ್ರದೇಶಗಳ ಅಗತ್ಯ ತುರ್ತಾಗಿದೆ. ಜಿಲ್ಲೆ ಗಂಭೀರ ಪರಿಸರ ಒತ್ತಡ ಎದುರಿಸುತ್ತಿದ್ದು, ಅಂತರ್ಜಲ ಮಟ್ಟ ಗಣನೀಯವಾಗಿ ಕುಸಿದಿದೆ ಎಂದು ಅವರು ಹೇಳಿದರು.



"2023ರ ಫೆಬ್ರವರಿಯಲ್ಲಿ ಜಿಲ್ಲೆಯ ಸರಾಸರಿ ಅಂತರ್ಜಲ ಮಟ್ಟ ಭೂಮಿಯ ಮೇಲ್ಮೈಯಿಂದ 17.52 ಮೀಟರ್ ಆಳದಲ್ಲಿತ್ತು. ಆದರೆ 2024ರ ಫೆಬ್ರವರಿಗೆ ಅದು 35.66 ಮೀಟರ್ ಆಳಕ್ಕೆ ಕುಸಿದಿದ್ದು, ಸರಾಸರಿ 18.14 ಮೀಟರ್ ಕುಸಿತ ದಾಖಲಾಗಿದೆ," ಎಂದು ಮಾಹಿತಿ ನೀಡಿದರು.

ಸಂವಿಧಾನ ನಮಗೆ ಹಕ್ಕುಗಳನ್ನು ನೀಡಿದಂತೆ ಕರ್ತವ್ಯಗಳನ್ನೂ ನಿರ್ದಿಷ್ಟಪಡಿಸಿದೆ. ಪರಿಸರ ಸಂರಕ್ಷಣೆ ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ ಎಂದು ಡಾ. ಬಿ.ಆರ್. ಅಂಬೇಡ್ಕರ್ ಒತ್ತಿ ಹೇಳಿದ್ದಾರೆ ಎಂದು ಸ್ಮರಿಸಿದರು.

"ಇಂದಿನ ಮತ್ತು ಮುಂದಿನ ಪೀಳಿಗೆಯ ಉಳಿವಿಗಾಗಿ ಪರಿಸರ ಸಂರಕ್ಷಣೆ ಅತ್ಯವಶ್ಯಕ. ಗಿಡಗಳನ್ನು ನೆಟ್ಟು ಅವುಗಳನ್ನು ಪೋಷಿಸುವ ಹೊಣೆಗಾರಿಕೆ ನಮ್ಮೆಲ್ಲರ ಮೇಲಿದೆ. ಚಿಕ್ಕಬಳ್ಳಾಪುರ ನ್ಯಾಯಾಂಗ ಮತ್ತು ಜಿಲ್ಲಾಡಳಿತ ಸೇರಿ 5 ಲಕ್ಷ ಸಸಿಗಳನ್ನು ನೆಟ್ಟು ಬೆಳೆಸುವ ಕಾರ್ಯಕ್ಕೆ ಮುಂದಾಗಿರುವುದು ಶ್ಲಾಘನೀಯ," ಎಂದರು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಟಿ.ಪಿ. ರಾಮಲಿಂಗೇಗೌಡ ಮಾತನಾಡಿ, ರಾಜ್ಯದಲ್ಲಿ 5 ಕೋಟಿ ಗಿಡಗಳನ್ನು ನೆಟ್ಟು ಪರಿಸರ ಸಂರಕ್ಷಣೆ ಮಾಡುವ ಉದ್ದೇಶದಿಂದ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರವು ಧರೆ ಫೌಂಡೇಶನ್ ಜೊತೆ ಒಪ್ಪಂದ ಮಾಡಿಕೊಂಡಿದೆ ಎಂದು ತಿಳಿಸಿದರು.

"ಶಿಡ್ಲಘಟ್ಟ ತಾಲ್ಲೂಕಿನ ಅಪ್ಪೇಗೌಡನಹಳ್ಳಿಯ ಇಂದಿರಾ ಗಾಂಧಿ ವಸತಿ ಶಾಲೆಯಲ್ಲಿ ಕಳೆದ ಏಪ್ರಿಲ್‌ನಲ್ಲಿ ಗಿಡ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿತ್ತು. ಅದರ ಮುಂದುವರಿದ ಭಾಗವಾಗಿ ಸರ್ ಎಂ. ವಿಶ್ವೇಶ್ವರಯ್ಯ ಸ್ಮಾರಕದ ಬಳಿ 5 ಗುಂಟೆ ಜಮೀನಿನಲ್ಲಿ ಗಿಡ ನೆಡುವ ಕಾರ್ಯ ಆರಂಭಿಸಲಾಗಿದೆ," ಎಂದರು.

ಮುಂದಿನ ದಿನಗಳಲ್ಲಿ ಜಿಲ್ಲೆಯ ವಿವಿಧೆಡೆ ಈ ಯೋಜನೆ ಅನುಷ್ಠಾನಗೊಳ್ಳಲಿದ್ದು, ಒಟ್ಟು 5 ಲಕ್ಷ ಗಿಡಗಳನ್ನು ನೆಟ್ಟು ಬೆಳೆಸುವ ಗುರಿ ಹೊಂದಲಾಗಿದೆ ಎಂದು ಹೇಳಿದರು.

"ಕೇವಲ ಗಿಡ ನೆಡುವುದರಿಂದ ಸಾಲದು. ಅವು ಬೆಳೆಯುವವರೆಗೆ ಕನಿಷ್ಠ ಮೂರು ವರ್ಷ ಸಂರಕ್ಷಣೆ ಅಗತ್ಯ. ಜಿಲ್ಲಾಡಳಿತ, ಅರಣ್ಯ ಇಲಾಖೆ ಹಾಗೂ ಸಾಮಾಜಿಕ ಅರಣ್ಯ ಇಲಾಖೆಯ ಸಹಕಾರದೊಂದಿಗೆ ಗಿಡಗಳನ್ನು ಉಳಿಸಿ ಬೆಳೆಸಲಾಗುವುದು," ಎಂದು ತಿಳಿಸಿದರು.

ಈ ಕಾರ್ಯಕ್ಕೆ ವಕೀಲರು, ಪತ್ರಕರ್ತರು, ಶಿಕ್ಷಕರು, ವಿದ್ಯಾರ್ಥಿಗಳು, ಸರ್ಕಾರೇತರ ಸಂಸ್ಥೆಗಳು ಹಾಗೂ ಸಾರ್ವಜನಿಕರು ಸಹಕರಿಸಬೇಕು ಎಂದು ಮನವಿ ಮಾಡಿದರು. ಜಿಲ್ಲಾಧಿಕಾರಿ ಜಿ. ಪ್ರಭು ಮಾತನಾಡಿ, "ಈ ವರ್ಷ ಮುಂಗಾರು ಅವಧಿಯಲ್ಲಿ 5 ಲಕ್ಷ ಗಿಡಗಳನ್ನು ನೆಡುವುದಕ್ಕೆ ಜಿಲ್ಲಾಡಳಿತ ಸಕಲ ಸಿದ್ಧತೆ ಮಾಡಿಕೊಂಡಿದೆ," ಎಂದರು.

ಸರ್ಕಾರಿ ಶಾಲೆ–ಕಾಲೇಜುಗಳ ಆವರಣ, ಸರ್ಕಾರಿ ಆಸ್ಪತ್ರೆಗಳು, ಮುಜರಾಯಿ ಇಲಾಖೆಯ ಆಸ್ತಿಗಳು, ದೇವಸ್ಥಾನಗಳ ಆವರಣ, ಸ್ಮಶಾನಗಳು, ಕೆರೆಗಳ ಸುತ್ತಮುತ್ತ ಹಾಗೂ ತ್ಯಾಜ್ಯ ವಿಲೇವಾರಿ ಘಟಕಗಳ ವ್ಯಾಪ್ತಿಯಲ್ಲಿ ಗಿಡಗಳನ್ನು ನೆಡುವ ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದರು.

"ಜಿಲ್ಲಾಡಳಿತದ ಕಾರ್ಯಕ್ರಮದ ಜೊತೆಗೆ ಕಾನೂನು ಸೇವಾ ಪ್ರಾಧಿಕಾರದ ಸಹಯೋಗದಲ್ಲಿ ಹೆಚ್ಚುವರಿಯಾಗಿ 5 ಲಕ್ಷ ಸಸಿಗಳನ್ನು ಬೆಳೆಸುವ ಅರ್ಥಪೂರ್ಣ ಕಾರ್ಯಕ್ರಮ ಅನುಷ್ಠಾನಗೊಳ್ಳಲಿದೆ. ಜಿಲ್ಲೆಯಲ್ಲಿ ಈ ವರ್ಷ ನೆಡಲಿರುವ 10 ಲಕ್ಷ ಗಿಡಗಳಲ್ಲಿ ಕನಿಷ್ಠ ಶೇ. 80ರಷ್ಟು ಗಿಡಗಳನ್ನು ಉಳಿಸಿ ಬೆಳೆಸುವ ಗುರಿ ಹೊಂದಿದ್ದೇವೆ," ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರಥಮ ಹೆಚ್ಚುವರಿ ಜಿಲ್ಲಾ ನ್ಯಾಯಾಧೀಶ ಕಾಂತರಾಜ್, ಹಿರಿಯ ಸಿವಿಲ್ ನ್ಯಾಯಾಧೀಶೆ ಬಿ. ಶಿಲ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಅಭಿಲಾಷ್, ಧರೆ ಫೌಂಡೇಶನ್ ಪ್ರತಿನಿಧಿ ವೃಷಾಂಕ್ ಭಟ್, ಬಾರ್ ಕೌನ್ಸಿಲ್ ಸದಸ್ಯ ಹರೀಶ್ ಕುಮಾರ್, ವಕೀಲರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ನಗರಸಭೆ ಉಪಾಧ್ಯಕ್ಷ ಸ್ಥಾನಕ್ಕೆ ಚುನಾವಣೆ

ದೊಡ್ಡಬಳ್ಳಾಪುರ

ನಗರಸಭೆ ಉಪಾಧ್ಯಕ್ಷರಾಗಿದ್ದ ರೈಲ್ವೇ ಸ್ಟೇಷನ್ ಮಲ್ಲೇಶ್ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿರುವ ಹಿನ್ನೆಲೆಯಲ್ಲಿ ತೆರವಾದ ಉಪಾಧ್ಯಕ್ಷ ಸ್ಥಾನಕ್ಕೆ ಮೇ 25ರಂದು ಚುನಾವಣೆ ನಡೆಯಲಿದೆ. ಜಿಲ್ಲಾಧಿಕಾರಿಗಳ ಆದೇಶದನ್ವಯ ಚುನಾವಣಾ ಪ್ರಕ್ರಿಯೆ ನಡೆಯಲಿದೆ.

ದೊಡ್ಡಬಳ್ಳಾಪುರ ನಗರಸಭೆಯ ಉಪಾಧ್ಯಕ್ಷ ಸ್ಥಾನ ಸಾಮಾನ್ಯ ವರ್ಗಕ್ಕೆ ಮೀಸಲಾಗಿದ್ದು, ಪ್ರಸ್ತುತ ಉಪಾಧ್ಯಕ್ಷರಾಗಿದ್ದ ಎಂ. ಮಲ್ಲೇಶ್ ಅವರು ಮೈತ್ರಿ ಒಪ್ಪಂದದಂತೆ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

ಕರ್ನಾಟಕ ನಗರಪಾಲಿಕೆ ಚುನಾವಣಾ ನಿಯಮಾವಳಿಗಳ ಅನ್ವಯ ಮೇ 25ರ ಸೋಮವಾರ ಮಧ್ಯಾಹ್ನ 1 ಗಂಟೆಗೆ ನಗರಸಭೆ ಕಚೇರಿಯಲ್ಲಿ ಚುನಾಯಿತ ಸದಸ್ಯರ ಸಮ್ಮುಖದಲ್ಲಿ ಉಪಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಯಲಿದೆ.

ನಗರಸಭೆ ಚುನಾವಣೆಯ ನಂತರ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು ಮೈತ್ರಿ ಮಾಡಿಕೊಂಡು ಅಧಿಕಾರ ಹಿಡಿದಿದ್ದವು. ಒಪ್ಪಂದದಂತೆ ಬಿಜೆಪಿ ಸುಮಾರು ನಾಲ್ಕೂವರೆ ವರ್ಷಗಳ ಕಾಲ ಅಧ್ಯಕ್ಷ ಸ್ಥಾನದಲ್ಲಿ ಆಡಳಿತ ನಡೆಸಿದ್ದು, ಉಳಿದ ಕೆಲವೇ ತಿಂಗಳ ಅವಧಿಗೆ ಜೆಡಿಎಸ್‌ಗೆ ಅಧ್ಯಕ್ಷ ಸ್ಥಾನ ಬಿಟ್ಟುಕೊಟ್ಟು ಉಪಾಧ್ಯಕ್ಷ ಸ್ಥಾನವನ್ನು ಬಿಜೆಪಿ ಉಳಿಸಿಕೊಳ್ಳಲಿದೆ.

ಪ್ರಸ್ತುತ ಉಪಾಧ್ಯಕ್ಷ ಸ್ಥಾನಕ್ಕಾಗಿ ಬಿಜೆಪಿಯಲ್ಲಿ ಪದ್ಮನಾಭ್ (ಪದ್ದಿ), ವೆಂಕಟೇಶ್ (ಬಂತಿ) ಹಾಗೂ ಲಕ್ಷ್ಮೀಪತಿ ಅವರ ನಡುವೆ ತೀವ್ರ ಪೈಪೋಟಿ ಆರಂಭವಾಗಿದೆ. ಆಶ್ಚರ್ಯಕರ ಸಂಗತಿಯೆಂದರೆ, ಈ ಮೂವರು ಆಕಾಂಕ್ಷಿಗಳೂ ಶಾಸಕ ಧೀರಜ್ ಮುನಿರಾಜ್ ಅವರ ಆಪ್ತ ಬಳಗದಲ್ಲಿ ಗುರುತಿಸಿಕೊಂಡವರಾಗಿದ್ದಾರೆ. ಹೀಗಾಗಿ ಉಪಾಧ್ಯಕ್ಷ ಅಭ್ಯರ್ಥಿ ಆಯ್ಕೆ ಪ್ರಕ್ರಿಯೆ ಶಾಸಕ ಧೀರಜ್ ಮುನಿರಾಜ್ ಅವರಿಗೆ ಸ್ವಲ್ಪ ಮಟ್ಟಿನ ತಲೆನೋವಾಗುವ ಸಾಧ್ಯತೆ ಇದೆ ಎಂದು ರಾಜಕೀಯ ವಲಯದಲ್ಲಿ ಚರ್ಚೆಯಾಗುತ್ತಿದೆ.

# ಗಾಣಕಲ್ ನಟರಾಜ್ ಅಪ್ರಬುದ್ಧ: ಸಬ್ಬಕೆರೆ ಶಿವಲಿಂಗಪ್ಪ

ರಾಮನಗರ

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಗಾಣಕಲ್ ನಟರಾಜು, ಅಪ್ರಬುದ್ಧರಂತೆ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಬರೆದುಕೊಟ್ಟಿರುವುದನ್ನು ಮಾಧ್ಯಮದ ಮುಂದೆ ಹೇಳುವ ಬದಲು, ಬೈರಮಂಗಲಕ್ಕೆ ಡಿಸಿಎಂ ಜೊತೆಗೂಡಿ ಬರಲಿ, ಸ್ಥಳೀಯ ರೈತರನ್ನು ಮಾತನಾಡಿಸಲಿ ಎಂದು ರಾಮನಗರ ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಸಬ್ಬಕೆರೆ ಶಿವಲಿಂಗಪ್ಪ ಸವಾಲು ಹಾಕಿದರು.

ನಗರದ ಜೆಡಿಎಸ್ ಕಚೇರಿಯಲ್ಲಿ ಶುಕ್ರವಾರ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಿಖಿಲ್ ಕುಮಾರಸ್ವಾಮಿ ವಿರುದ್ಧ ಗಾಣಕಲ್ ನಟರಾಜು ನೀಡಿದ್ದ ಹೇಳಿಕೆಗೆ ಪ್ರತ್ಯುತ್ತರ ನೀಡಿದರು. ಪಕ್ಷದ ಯುವ ಘಟಕದ ರಾಜ್ಯಾಧ್ಯಕ್ಷ ಬಿಡದಿ ಸ್ಮಾರ್ಟ್ ಸಿಟಿ ಯೋಜನೆ ಕುರಿತು ಹೇಳಿರುವ ಹೇಳಿಕೆಯಲ್ಲಿ ಡಿಸಿಎಂ ಡಿ.ಕೆ.ಶಿವಕುಮಾರ್ ವಿರುದ್ಧ ಏಕವಚನದ ಪದ ಬಳಕೆ ಮಾಡಿಲ್ಲ. ಈ ಬಗ್ಗೆ ಮಾಧ್ಯಮದ ವರದಿಗಳನ್ನು ತೆಗೆದು ನೋಡಿಕೊಳ್ಳಲಿ. ಗಾಣಕಲ್ ನಟರಾಜು ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಬೈರಮಂಗಲಕ್ಕೆ ಆಗಮಿಸಲಿ, ಯಾರು ಯಾರಿಗೆ ಘೇರಾವ್ ಹಾಕುತ್ತಾರೆ ಎಂಬುದು ತಿಳಿಯಲಿದೆ. ನಾವು ನಿಖಿಲ್ ಕುಮಾರಸ್ವಾಮಿ ಅವರನ್ನು ಕರೆದುಕೊಂಡು ಬರುತ್ತೇವೆ ಎಂದು ಸವಾಲೆಸೆದರು.

ಬಿಡದಿ ಸ್ಮಾರ್ಟ್ ಸಿಟಿ ಯೋಜನೆ ಘೋಷಣೆಯಾಗುವ ಮುನ್ನ ಬೈರಮಂಗಲ ಕಂಚುಗಾರನಹಳ್ಳಿ ವ್ಯಾಪ್ತಿಯಲ್ಲಿ ಒಟ್ಟು 2 ಸಾವಿರ ಗೋಮಾಳ ಜಮೀನು ಇತ್ತು. ಈಗ ಕೇವಲ 700 ಎಕರೆಗೆ ಬಂದಿದೆ. ಈ ಬಗ್ಗೆ ಮೊದಲು ಮಾಹಿತಿ ನೀಡಲಿ. ಬಾಕಿ ಉಳಿದ ಗೋಮಾಳ ಜಮೀನುಗಳ ಬಗ್ಗೆ ದಾಖಲಾತಿ ಪಡೆಯಲಾಗುತ್ತಿದೆ. ಎಲ್ಲವನ್ನು ಶೀಘ್ರದಲ್ಲಿಯೇ ಬಿಡುಗಡೆ ಮಾಡುತ್ತೇವೆ. ಈ ಬಗ್ಗೆ ಉತ್ತರ ಕೊಡಬೇಕು ಎಂದು ಆಗ್ರಹಿಸಿದರು. ಬಿಡದಿ ಸ್ಮಾರ್ಟ್ ಸಿಟಿ ಯೋಜನೆ ಸಂಬಂಧ ಎಲ್ಲರನ್ನು ಎತ್ತಿಕಟ್ಟುವುದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ಶೋಭೆ ತರುವುದಿಲ್ಲ. ಇದರ ಬದಲು ಬೈರಮಂಗಳ ಕಂಚುಗಾರನಹಳ್ಳಿ ಸುತ್ತಮುತ್ತಲಿನ ರೈತರ ಹಿತ ಕಾಯುವ ಕೆಲಸ ಮಾಡಲಿ ಎಂದರು. ಜೆಡಿಎಸ್ ವಕ್ತಾರ ನರಸಿಂಹಮೂರ್ತಿ ಮಾತನಾಡಿ, ಡಿಸಿಎಂ ಡಿ.ಕೆ.ಶಿವಕುಮಾರ್ ಅವರೇ ಕೊತ್ವಾಲ ಶಿಷ್ಯರಾಗಿ ಮಾತನಾಡಬೇಡಿ, ನೀವು ರಾಜ್ಯದ ಉಪಮುಖ್ಯಮಂತ್ರಿ ಎಂಬುದನ್ನು ಮರೆಯಬೇಡಿ, ಕೊತ್ವಾಲ್ ಗರಡಿಯಲ್ಲಿ ಎಂದರು.

# ಮುಂಗಾರು ಪೂರ್ವ ಸಿದ್ಧತೆಗೆ ಕಟ್ಟುನಿಟ್ಟಿನ ಸೂಚನೆ

ಚಿಕ್ಕಬಳ್ಳಾಪುರ

ಈ ತಿಂಗಳ ಅಂತ್ಯದೊಳಗೆ ಮುಂಗಾರು ಪ್ರವೇಶಿಸುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಮಳೆಯಿಂದಾಗುವ ಹಾನಿಗಳನ್ನು ತಡೆಗಟ್ಟಲು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡು 24ಥ7 ಮಾದರಿಯಲ್ಲಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಜಿ. ಪ್ರಭು ಅವರು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯ ನ್ಯಾಯಾಲಯ ಸಭಾಂಗಣದಲ್ಲಿ ನಡೆದ "ಮಳೆಹಾನಿ ಹಾಗೂ ಬೆಳೆಹಾನಿ ಕುರಿತು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳ ವಿಡಿಯೋ ಸಂವಾದ ಸಭೆ"ಯಲ್ಲಿ ಮಾತನಾಡಿದ ಅವರು, ಕಳೆದ ಎರಡು ದಿನಗಳ ಹಿಂದೆ ಜಿಲ್ಲೆಯಾದ್ಯಂತ ಸುರಿದ ಪೂರ್ವ ಮುಂಗಾರು ಮಳೆಯಿಂದ ವಿವಿಧೆಡೆ ತೋಟಗಾರಿಕಾ ಬೆಳೆಗಳಿಗೆ ಹಾನಿಯಾಗಿದೆ ಎಂದು ತಿಳಿಸಿದರು.

ಗೌರಿಬಿದನೂರು ತಾಲ್ಲೂಕಿನಲ್ಲಿ ಹೆಚ್ಚು ಮಳೆಯಾಗಿದ್ದು, ಜಿಲ್ಲೆಯಲ್ಲಿ 20 ಹೆಕ್ಟೇರ್ ಬಾಳೆ, 1.60 ಹೆಕ್ಟೇರ್ ಅಡಿಕೆ, 1.20 ಹೆಕ್ಟೇರ್ ಟೊಮೆಟೊ ಹಾಗೂ 2 ಹೆಕ್ಟೇರ್ ತರಕಾರಿ ಬೆಳೆ ನಾಶವಾಗಿದೆ ಎಂದು ಮಾಹಿತಿ ನೀಡಿದರು.




"ತಾಲ್ಲೂಕು ತಹಶೀಲ್ದಾರರು ಖುದ್ದಾಗಿ ರೈತರ ಜಮೀನುಗಳಿಗೆ ಭೇಟಿ ನೀಡಿ ಸಂತ್ರಸ್ತರಿಗೆ ಸಾಂತ್ವನ ಹೇಳಬೇಕು. ತೋಟಗಾರಿಕೆ ಇಲಾಖೆ ಹಾಗೂ ಇತರೆ ಇಲಾಖೆಗಳ ಅಧಿಕಾರಿಗಳೊಂದಿಗೆ ಜಂಟಿ ಸಮೀಕ್ಷೆ ನಡೆಸಿ ಪರಿಹಾರಧನ ವಿತರಣೆಗೆ ತುರ್ತು ಕ್ರಮ ಕೈಗೊಳ್ಳಬೇಕು," ಎಂದು ಸೂಚಿಸಿದರು.

ಮುಂದಿನ ದಿನಗಳಲ್ಲಿ ಜಿಲ್ಲೆಯ ಯಾವುದೇ ಭಾಗದಲ್ಲಿ ಮಳೆಹಾನಿ ಸಂಭವಿಸಿದರೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಸ್ಥಳೀಯ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಕಾಲೋಚಿತ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಮಳೆಹಾನಿ ತಡೆಗಟ್ಟುವ ನಿಟ್ಟಿನಲ್ಲಿ ತಾಲ್ಲೂಕು ಮಟ್ಟದಲ್ಲಿ ಟಾಸ್ಕ್‌ಫೋರ್ಸ್ ಸಮಿತಿ ಸಭೆಗಳನ್ನು ನಡೆಸಿ ಸ್ಥಳೀಯ ಸಿಬ್ಬಂದಿಗೆ ಅಗತ್ಯ ಸೂಚನೆ ನೀಡುವಂತೆ ತಹಶೀಲ್ದಾರರಿಗೆ ನಿರ್ದೇಶನ ನೀಡಿದರು. ಈಗಾಗಲೇ ಜಿಲ್ಲೆಯಲ್ಲಿ ಸಿಡಿಲು ಬಡಿದು ಇಬ್ಬರು ಮೃತಪಟ್ಟಿರುವುದನ್ನು ಉಲ್ಲೇಖಿಸಿದ ಅವರು, ಮುಂಗಾರು ಅವಧಿಯಲ್ಲಿ ಸಿಡಿಲಿನ ಅಪಾಯ ಹೆಚ್ಚಿರುವುದರಿಂದ ಜನರಲ್ಲಿ ಜಾಗೃತಿ ಮೂಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ಅಂಗನವಾಡಿಗಳು, ಶಾಲಾ–ಕಾಲೇಜುಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು, ವಿದ್ಯುತ್ ಪರಿವರ್ತಕಗಳು, ವಿದ್ಯುತ್ ಕಂಬಗಳು ಸೇರಿದಂತೆ ಸಾರ್ವಜನಿಕ ಆಸ್ತಿಗಳಿಗೆ ಹಾನಿಯಾದಲ್ಲಿ ತಕ್ಷಣ ವರದಿ ಸಲ್ಲಿಸಿ ತುರ್ತು ದುರಸ್ತಿ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು. "ವಿದ್ಯುತ್ ಕಂಬಗಳು ಹಾಗೂ ಪರಿವರ್ತಕಗಳು ಹಾಳಾದಲ್ಲಿ ತುರ್ತಾಗಿ ದುರಸ್ತಿ ಮಾಡಿಸಬೇಕು. ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಂಡು ಸದಾ ಸನ್ನದ್ಧರಾಗಿರಬೇಕು," ಎಂದು ಹೇಳಿದರು.

ಈ ವರ್ಷದ ಕೃಷಿ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಪೂರೈಕೆಯ ರೂಪುರೇಷೆಗಳನ್ನು ಸಿದ್ಧಪಡಿಸಿ ಮುಂಗಾರು ಪೂರ್ವದಲ್ಲೇ ರೈತರಿಗೆ ಮಾಹಿತಿ ನೀಡುವಂತೆ ಜಂಟಿ ಕೃಷಿ ನಿರ್ದೇಶಕರಿಗೆ ಸೂಚಿಸಿದರು. "ಎಫ್‌ಐಡಿ ಆಧಾರಿತವಾಗಿ ರಸಗೊಬ್ಬರ ವಿತರಣೆ ಮಾಡಿ, ಅಗತ್ಯ ಪ್ರಮಾಣದಲ್ಲಿ ಆಮದು ಹಾಗೂ ಪೂರೈಕೆಗೆ ಕಾಲೋಚಿತ ಕ್ರಮ ಕೈಗೊಳ್ಳಬೇಕು," ಎಂದು ತಿಳಿಸಿದರು.

ನಗರಗಳನ್ನು ಸಂಪರ್ಕಿಸುವ ಪ್ರಮುಖ ರಸ್ತೆ ಹಾಗೂ ಇತರೆ ರಸ್ತೆ ಇಕ್ಕೆಲಗಳಲ್ಲಿ ಶೇಖರಿಸಿರುವ ಪ್ಲಾಸ್ಟಿಕ್ ಮತ್ತು ತ್ಯಾಜ್ಯ ವಸ್ತುಗಳನ್ನು ಒಂದು ವಾರದೊಳಗೆ ತೆರವುಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು. ಖಾಲಿ ನಿವೇಶನಗಳಲ್ಲಿ ಬೆಳೆದಿರುವ ಗಿಡಗಂಟಿಗಳು ಹಾಗೂ ಘನ ತ್ಯಾಜ್ಯವನ್ನು ಸ್ಥಳೀಯಾಡಳಿತ ಸಂಸ್ಥೆಗಳ ಮೂಲಕ ತೆರವುಗೊಳಿಸಿ, ಅದರ ವೆಚ್ಚವನ್ನು ಸಂಬಂಧಪಟ್ಟ ನಿವೇಶನ ಮಾಲೀಕರಿಂದ ವಸೂಲಿ ಮಾಡುವಂತೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ವೈ. ನವೀನ್ ಭಟ್ ಮಾತನಾಡಿ, "ಮಳೆಯ ಸಂದರ್ಭದಲ್ಲಿ ನೀರು ಸರಾಗವಾಗಿ ಹರಿದುಹೋಗಲು ರಾಜಕಾಲುವೆಗಳು ಹಾಗೂ ಚರಂಡಿಗಳನ್ನು ತುರ್ತಾಗಿ ಸ್ವಚ್ಛಗೊಳಿಸಬೇಕು. ಗಿಡ, ಹುಲ್ಲು ಹಾಗೂ ತ್ಯಾಜ್ಯ ವಸ್ತುಗಳನ್ನು ತೆರವು ಮಾಡಬೇಕು," ಎಂದು ಸೂಚಿಸಿದರು.

ಪ್ರತಿ ಗ್ರಾಮ ಅಥವಾ ವಾರ್ಡ್ ಮಟ್ಟದಲ್ಲಿ ಸ್ವಚ್ಛತಾ ಕಾರ್ಯಕ್ಕಾಗಿ ವಿಶೇಷ ತಂಡ ರಚಿಸಿ ತ್ಯಾಜ್ಯ ವಿಲೇವಾರಿ ಹಾಗೂ ಸ್ವಚ್ಛತಾ ಕಾರ್ಯ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಭೆಯಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

27/05/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಕೌಶಲ್ಯಾಭಿವೃದ್ಧಿ ತರಬೇತಿ ನೀಡುವಂತೆ ಸೂಚನೆ

ಕೋಲಾರ

ಹಳೆಯ ಮತ್ತು ಸಾಂಪ್ರದಾಯಿಕ ತರಬೇತಿಗಳನ್ನೇ ಮುಂದುವರೆಸುವ ಬದಲು, ಪ್ರಸ್ತುತ ಮಾರುಕಟ್ಟೆ ಮತ್ತು ಕೈಗಾರಿಕೆಗಳ ಬೇಡಿಕೆಗೆ ಅನುಗುಣವಾಗಿ ಯುವಜನತೆಗೆ ಕೌಶಲ್ಯ ತರಬೇತಿ ನೀಡುವಂತೆ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇಂದು ಜಿಲ್ಲಾಧಿಕಾರಿಗಳ ಕೇಸ್ವಾನ್ ಸಭಾಂಗಣ ದಲ್ಲಿ ನಡೆದ ಜಿಲ್ಲಾ ಕೌಶಲ್ಯಾಭಿವೃದ್ಧಿ ಸಮಿತಿ ಹಾಗೂ ದೀನ್ ದಯಾಳ್ ಅಂತ್ಯೋದಯ ಯೋಜನೆ (ನಲ್ಮ್) ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡುತ್ತಿದ್ದರು.

ಯಾವುದೇ ಇಲಾಖೆಗಳು ತರಬೇತಿ ಕಾರ್ಯಕ್ರಮಗಳನ್ನು ರೂಪಿಸುವ ಮೊದಲು ಕಡ್ಡಾಯವಾಗಿ ಮಾರುಕಟ್ಟೆ ಅಧ್ಯಯನ ಮಾಡಬೇಕು ಮತ್ತು ಉದ್ಯೋಗದಾತರೊಂದಿಗೆ ಸಂಪರ್ಕ ಹೊಂದಿರಬೇಕು ಎಂದು ಅವರು ತಾಕೀತು ಮಾಡಿದರು.

ಕೃಷಿ, ತೋಟಗಾರಿಕೆ ಮತ್ತು ಪಶುಪಾಲನೆ ಇಲಾಖೆಗಳು ಕೇವಲ ಕುರಿ ಸಾಕಾಣಿಕೆ ಅಥವಾ ಸಾಂಪ್ರದಾಯಿಕ ಬೆಳೆಗಳ ತರಬೇತಿಗೆ ಸೀಮಿತವಾಗಬಾರದು. ರೈತರು ಬೆಳೆದ ಉತ್ಪನ್ನಗಳಿಗೆ ಮೌಲ್ಯವರ್ಧನೆ, ಪ್ಯಾಕೇಜಿಂಗ್ ಮತ್ತು ಬ್ರ್ಯಾಂಡಿಂಗ್ ಕುರಿತು ತರಬೇತಿ ನೀಡಿ, ಅವರಿಗೆ ಮಾರುಕಟ್ಟೆ ಸಂಪರ್ಕ ಕಲ್ಪಿಸಬೇಕು. ಜೇನು ಕೃಷಿ, ನರ್ಸರಿ ನಿರ್ವಹಣೆ ಹಾಗೂ ರೇಷ್ಮೆ ಗೂಡಿನ ಹಾರ ತಯಾರಿಕೆಯಂತಹ ಬೇಡಿಕೆ ಇರುವ ಕ್ಷೇತ್ರಗಳತ್ತ ಗಮನಹರಿಸಬೇಕು ಎಂದು ಸೂಚಿಸಿದರು.

ಕೇವಲ ಪದವಿ, ಸ್ನಾತಕೋತ್ತರ ಅಥವಾ ಪಿಎಚ್.ಡಿ ಪಡೆದಿದ್ದರೂ ಯುವಜನತೆಯಲ್ಲಿ ಬೋಧನಾ ಕೌಶಲ್ಯ ಮತ್ತು ಸಂವಹನ ಕೌಶಲ್ಯಗಳ ತೀವ್ರ ಕೊರತೆಯಿದೆ ಎಂದು ಜಿಲ್ಲಾಧಿಕಾರಿಗಳು ಕಳವಳ ವ್ಯಕ್ತಪಡಿಸಿದರು. ಶಿಕ್ಷಣ ಸಂಸ್ಥೆಗಳು ಕೇವಲ ಪಠ್ಯಕ್ಕೆ ಸೀಮಿತವಾಗದೆ, ವಿದ್ಯಾರ್ಥಿಗಳಿಗೆ ಸಾಫ್ಟ್ ಸ್ಕಿಲ್ಸ್, ಸಾರ್ವಜನಿಕ ಸಂಪರ್ಕ ಹಾಗೂ ಲೈಫ್ ಸ್ಕಿಲ್ಸ್ ಕಲಿಸುವ ನಿಟ್ಟಿನಲ್ಲಿ ತರಬೇತಿಗಳನ್ನು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಕೈಗಾರಿಕಾ ಇಲಾಖೆ ಮತ್ತು ಐಟಿಐ ತರಬೇತಿ ಸಂಸ್ಥೆಗಳು ಸಮನ್ವಯದಿಂದ ಕೆಲಸ ಮಾಡಬೇಕು. ಕೈಗಾರಿಕೆಗಳಿಗೆ ನೇರವಾಗಿ ಬೇಕಾಗುವ ಸಿಎನ್.ಸಿ ಆಪರೇಟರ್, ವೆಲ್ಡಿಂಗ್, ಲಿಕ್ವಿಡ್ ಸ್ಪ್ರೇ ಪೇಂಟಿಂಗ್ ನಂತಹ ತರಬೇತಿಗಳನ್ನು ನೀಡಬೇಕು. ಬೆಂಗಳೂರಿಗೆ ಅತಿ ಸಮೀಪವಿದ್ದರೂ ಜಿಲ್ಲೆಯಲ್ಲಿ ಹೋಟೆಲ್ ಮ್ಯಾನೇಜ್ಮೆಂಟ್ ಕೋರ್ಸ್ ಗಳ ಕೊರತೆ ಇದ್ದು, ಆತಿಥ್ಯ ರಂಗದಲ್ಲಿ ಹೌಸ್ ಕೀಪಿಂಗ್, ಎಫ್&ಬಿ ಮ್ಯಾನೇಜರ್, ರಿಸೆಪ್ಷನಿಸ್ಟ್ ಮುಂತಾದ ಹುದ್ದೆಗಳಿಗೆ ತರಬೇತಿ ನೀಡಿ ಉದ್ಯೋಗಾವಕಾಶ ಸೃಷ್ಟಿಸುವಂತೆ ಸಲಹೆ ನೀಡಿದರು.

ಬೀದಿ ಬದಿ ವ್ಯಾಪಾರಿಗಳಿಗೆ ಗುರುತಿನ ಚೀಟಿ ನೀಡುವುದು ಹಾಗೂ ಅವರಿಗೆ ಸ್ವಚ್ಛತೆ ಮತ್ತು ಮೂಲಸೌಕರ್ಯವಿರುವ ನಿರ್ದಿಷ್ಟ ವೆಂಡಿಂಗ್ ವಲಯಗಳನ್ನು ಕಲ್ಪಿಸುವ ಬಗ್ಗೆ ಚರ್ಚಿಸಲಾಯಿತು.

"ಯಾವುದೇ ತರಬೇತಿಯು ಮಾರುಕಟ್ಟೆಯೊಂದಿಗೆ ಸಂಪರ್ಕ ಹೊಂದಿಲ್ಲದಿದ್ದರೆ, ಆ ತರಬೇತಿಯು ಸಂಪೂರ್ಣ ವಿಫಲವಾಗುತ್ತದೆ. ಅಧಿಕಾರಿಗಳು 'ಔಟ್ ಆಫ್ ದಿ ಬಾಕ್ಸ್' ಯೋಚಿಸಿ, ಪ್ರಾಯೋಗಿಕ ಮತ್ತು ಉದ್ಯೋಗ ಸೃಷ್ಟಿಸುವ ಯೋಜನೆಗಳನ್ನು ಮಾತ್ರ ತರಬೇಕು" ಎಂದು ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ಅವರು ಕಟ್ಟುನಿಟ್ಟಾಗಿ ಆದೇಶಿಸಿದರು.

ಸಭೆಯಲ್ಲಿ ಜಿಲ್ಲಾ ಕೌಶಲ್ಯ ಅಭಿವೃದ್ಧಿ ಅಧಿಕಾರಿ ಶ್ರೀನಿವಾಸ್, ಜಿಲ್ಲಾ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪನಿರ್ದೇಶಕ ಮಲ್ಲಿಕಾರ್ಜುನ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ನಾರಾಯಣ ಸ್ವಾಮಿ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕಿ ಆಸ್ಮಾ ಪರ್ವೀನ್ ತಾಜ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಗೀತಮ್ಮ ಸೇರಿದಂತೆ ಜಿಲ್ಲಾಮಟ್ಟದ ಹಿರಿಯ

# ಅಕ್ರಮ ಹಾಸ್ಟೆಲ್‌ಗಳ ಮೇಲೆ ಹದ್ದಿನ ಕಣ್ಣು: ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ

ಕೋಲಾರ

ಜಿಲ್ಲೆಯಲ್ಲಿ ಮಾದಕ ವಸ್ತುಗಳ (ಡ್ರಗ್ಸ್) ಹಾವಳಿಯನ್ನು ಸಂಪೂರ್ಣವಾಗಿ ಬೇರುಸಹಿತ ಕಿತ್ತುಹಾಕಲು ಜಿಲ್ಲಾಡಳಿತ ಕಠಿಣ ಹೆಜ್ಜೆ ಇರಿಸಿದ್ದು, ನಗರ ಪ್ರದೇಶಗಳಲ್ಲಿನ ಖಾಲಿ ನಿವೇಶನಗಳಲ್ಲಿ ಗಾಂಜಾ ಗಿಡಗಳು ಕಂಡುಬಂದರೆ ನೇರವಾಗಿ ಆಯಾ ನಿವೇಶನಗಳ ಮಾಲೀಕರ ವಿರುದ್ಧವೇ ಕ್ರಿಮಿನಲ್ ಪ್ರಕರಣ (ಎಫ್‌ಐಆರ್) ದಾಖಲಿಸಲಾಗುವುದು ಎಂದು ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ಅವರು ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದ್ದಾರೆ.

ಇಂದು ಜಿಲ್ಲಾಧಿಕಾರಿಗಳ ಕೇಸ್ವಾನ್ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಎನ್ಕೋರ್ಡ್ ಸಮಿತಿ ಸಭೆಯಲ್ಲಿ ಡ್ರಗ್ಸ್ ನಿಯಂತ್ರಣ ಕುರಿತು ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಿ ಅವರು ಮಾತನಾಡಿದರು.

ಇತ್ತೀಚೆಗೆ ನಗರದ ಖಾಲಿ ನಿವೇಶನವೊಂದರಲ್ಲಿ ಗಾಂಜಾ ಗಿಡಗಳು ಪತ್ತೆಯಾಗಿರುವ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಜಿಲ್ಲಾಧಿಕಾರಿಗಳು, ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ಖಾಲಿ ಬಿಟ್ಟಿರುವ ನಿವೇಶನಗಳನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ಮಾಲೀಕರ ಜವಾಬ್ದಾರಿಯಾಗಿದೆ. ಇಂತಹ ಜಾಗಗಳು ಅಕ್ರಮ ಚಟುವಟಿಕೆಗಳಿಗೆ ತಾಣವಾಗುತ್ತಿವೆ. ಹೀಗಾಗಿ ನಗರ ಸ್ಥಳೀಯ ಸಂಸ್ಥೆಗಳು ತಕ್ಷಣವೇ ತಮ್ಮ ವ್ಯಾಪ್ತಿಯಲ್ಲಿರುವ ಖಾಲಿ ನಿವೇಶನಗಳ ಮಾಲೀಕರಿಗೆ ಜಾಗವನ್ನು ಸ್ವಚ್ಛಗೊಳಿಸುವಂತೆ ನೋಟಿಸ್ ಜಾರಿ ಮಾಡಬೇಕು. ಒಂದು ವೇಳೆ ಸ್ವಚ್ಛಗೊಳಿಸದ ಜಾಗದಲ್ಲಿ ಗಾಂಜಾ ಬೆಳೆದಿರುವುದು ಕಂಡುಬಂದರೆ, ಮಾಲೀಕರೇ ಅದಕ್ಕೆ ಹೊಣೆಗಾರರಾಗಲಿದ್ದು, ಅವರ ಮೇಲೆಯೇ ಎಫ್‌ಐಆರ್ ದಾಖಲಿಸುವಂತೆ ಪೊಲೀಸ್ ಇಲಾಖೆಗೆ ಸ್ಪಷ್ಟ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ವಿಶೇಷವಾಗಿ ಕೆಜಿಎಫ್ ಸೇರಿದಂತೆ ವಿವಿಧೆಡೆ ನರ್ಸಿಂಗ್, ಫಾರ್ಮಸಿ ಮುಂತಾದ ಕೋರ್ಸ್ ವ್ಯಾಸಂಗ ಮಾಡುತ್ತಿರುವ ಹೊರರಾಜ್ಯದ ವಿದ್ಯಾರ್ಥಿಗಳು



ಉಳಿದುಕೊಳ್ಳುವ ಪಿಜಿ ಹಾಗೂ ಖಾಸಗಿ ಹಾಸ್ಟೆಲ್‌ಗಳ ಮೇಲೆ ನಿಗಾ ಇಡುವಂತೆ ಡಿಸಿ ಸೂಚಿಸಿದರು.

ಯಾವುದೇ ಮೂಲಭೂತ ಸೌಕರ್ಯಗಳಿಲ್ಲದೆ, ಕನಿಷ್ಠ ಗಾಳಿ–ಬೆಳಕಿನ ವ್ಯವಸ್ಥೆಯೂ ಇಲ್ಲದ ಕಟ್ಟಡಗಳಲ್ಲಿ ವಿದ್ಯಾರ್ಥಿಗಳನ್ನು ಕೂಡಿಹಾಕಲಾಗುತ್ತಿದೆ. ಇಂತಹ ಕಡೆ ಡ್ರಗ್ಸ್ ಜಾಲಗಳು ಸುಲಭವಾಗಿ ನುಸುಳುವ ಸಾಧ್ಯತೆ ಇರುತ್ತದೆ. ಹೀಗಾಗಿ ಅಧಿಕಾರಿಗಳು ತಕ್ಷಣವೇ ಇಂತಹ ಹಾಸ್ಟೆಲ್‌ಗಳಿಗೆ ದಿಢೀರ್ ಭೇಟಿ ನೀಡಿ ಪರಿಶೀಲಿಸಬೇಕು, ನಿಯಮಬಾಹಿರವಾಗಿ ನಡೆಯುತ್ತಿರುವ ಹಾಸ್ಟೆಲ್‌ಗಳ ಮಾನ್ಯತೆ ರದ್ದುಪಡಿಸಿ, ಬೀಗ ಜಡಿಯುವಂತೆ ಕಠಿಣ ನಿರ್ದೇಶನ ನೀಡಿದರು.

ಮಾದಕ ವಸ್ತುಗಳ ಜಾಲ ಕೇವಲ ಶಾಲಾ–ಕಾಲೇಜುಗಳಿಗೆ ಸೀಮಿತವಾಗಿಲ್ಲ, ಕೈಗಾರಿಕಾ ಪ್ರದೇಶಗಳಿಗೂ ವ್ಯಾಪಿಸುತ್ತಿದೆ. ವೇಮಗಲ್, ನರಸಾಪುರ, ಮಾಲೂರು ಕೈಗಾರಿಕಾ ಪ್ರದೇಶಗಳಲ್ಲಿರುವ ಕಾರ್ಖಾನೆಗಳ ಆಡಳಿತ ಮಂಡಳಿಗಳು ಮತ್ತು ಮಾನವ ಸಂಪನ್ಮೂಲ ವಿಭಾಗದೊಂದಿಗೆ ಸಭೆ ನಡೆಸಿ, ಕಾರ್ಮಿಕರಲ್ಲಿ ಜಾಗೃತಿ ಮೂಡಿಸಬೇಕು. ಪ್ರತಿಯೊಂದು ಕಾರ್ಖಾನೆಯಲ್ಲೂ 'ಮಾದಕ ವಸ್ತು ವಿರೋಧಿ ಸಮಿತಿ' ರಚಿಸುವಂತೆ ಕಾರ್ಮಿಕ ಇಲಾಖೆಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಯಾವುದೇ ಮೂಲಭೂತ ಸೌಕರ್ಯಗಳಿಲ್ಲದೆ, ಕನಿಷ್ಠ ಗಾಳಿ–ಬೆಳಕಿನ ವ್ಯವಸ್ಥೆಯೂ ಇಲ್ಲದ ಕಟ್ಟಡಗಳಲ್ಲಿ ವಿದ್ಯಾರ್ಥಿಗಳನ್ನು ಕೂಡಿಹಾಕಲಾಗುತ್ತಿದೆ. ಇಂತಹ ಕಡೆ ಡ್ರಗ್ಸ್ ಜಾಲಗಳು ಸುಲಭವಾಗಿ ನುಸುಳುವ ಸಾಧ್ಯತೆ ಇರುತ್ತದೆ. ಹೀಗಾಗಿ ಅಧಿಕಾರಿಗಳು ತಕ್ಷಣವೇ ಇಂತಹ ಹಾಸ್ಟೆಲ್‌ಗಳಿಗೆ ದಿಢೀರ್ ಭೇಟಿ ನೀಡಿ ಪರಿಶೀಲಿಸಬೇಕು.

ಸಂಜೆ ಮತ್ತು ರಾತ್ರಿ ವೇಳೆಯಲ್ಲಿ ನಗರದ ಉದ್ಯಾನವನಗಳು (ಉದಾಹರಣೆಗೆ ವಿಶ್ವೇಶ್ವರಯ್ಯ ಪಾರ್ಕ್) ಡ್ರಗ್ಸ್ ಪೆಡ್ಲರ್‌ಗಳು ಮತ್ತು ದುಷ್ಕರ್ಮಿಗಳ ತಾಣವಾಗುತ್ತಿವೆ ಎಂಬ ದೂರುಗಳ ಹಿನ್ನೆಲೆಯಲ್ಲಿ, ತಕ್ಷಣವೇ ಪಾರ್ಕ್‌ಗಳಲ್ಲಿ ವಿದ್ಯುತ್ ದೀಪಗಳನ್ನು ಅಳವಡಿಸಲು ನಗರಸಭೆಗೆ ಸೂಚಿಸಲಾಯಿತು. ಕತ್ತಲಿರುವ ಪ್ರದೇಶಗಳಲ್ಲಿ ಪೊಲೀಸರು ಗಸ್ತು ಹೆಚ್ಚಿಸಬೇಕು ಎಂದು ನಿರ್ದೇಶಿಸಿದರು.

ಆರೋಹಣ್ ಫೌಂಡೇಶನ್ ನಂತಹ ಸ್ವಯಂಸೇವಾ ಸಂಸ್ಥೆಗಳ ಸಹಯೋಗದೊಂದಿಗೆ ಕಾಲೇಜು ವಿದ್ಯಾರ್ಥಿಗಳನ್ನು ಒಳಗೊಂಡ 'ಪೊಲೀಸ್ ಮಾರ್ಷಲ್ಸ್' ಪಡೆಯನ್ನು ರಚಿಸಿ, ಅವರ ಮೂಲಕ ಮಾದಕ ವಸ್ತುಗಳ ವಿರುದ್ಧ ಜಾಗೃತಿ ಹಾಗೂ ಮಾಹಿತಿ ಸಂಗ್ರಹಿಸುವ ವಿನೂತನ ಪ್ರಯೋಗವನ್ನು ಪ್ರಶಂಸಿಸಿದ ಜಿಲ್ಲಾಧಿಕಾರಿಗಳು, ಎನ್‌ಸಿಸಿ ಮತ್ತು ಎನ್‌ಎಸ್‌ಎಸ್ ವಿದ್ಯಾರ್ಥಿಗಳನ್ನು ಟ್ರಾಫಿಕ್ ನಿರ್ವಹಣೆಗೂ ಬಳಸಿಕೊಳ್ಳುವ ಮೂಲಕ ಅವರಲ್ಲಿ ಶಿಸ್ತು ಮತ್ತು ಜವಾಬ್ದಾರಿ ಬೆಳೆಸುವಂತೆ ಸಲಹೆ ನೀಡಿದರು.

ಗಾಂಜಾ ಪೂರೈಕೆ ಸ್ಥಗಿತಗೊಂಡಾಗ ವ್ಯಸನಿಗಳಲ್ಲಿ ವಿಥ್‌ಡ್ರಾವಲ್ ಸಿಂಡ್ರೋಮ್ (ವಾಂತಿ, ನಡುಕ, ಇತ್ಯಾದಿ) ಕಾಣಿಸಿಕೊಳ್ಳುತ್ತದೆ. ಇಂತಹ ಲಕ್ಷಣಗಳೊಂದಿಗೆ ಸರ್ಕಾರಿ ಅಥವಾ ಖಾಸಗಿ ಆಸ್ಪತ್ರೆಗಳಿಗೆ ಬರುವ ರೋಗಿಗಳ ಬಗ್ಗೆ ಆರೋಗ್ಯ ಇಲಾಖೆ ನಿಗಾ ವಹಿಸಬೇಕು ಮತ್ತು ಮಾಹಿತಿಯನ್ನು ಕಲೆಹಾಕಿ ಅವರಿಗೆ ಸೂಕ್ತ ಪುನರ್ವಸತಿ ಕಲ್ಪಿಸಲು ಮಾನಸಿಕ ಆರೋಗ್ಯ ಕಾಯ್ದೆಯಡಿ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ಸೂಚಿಸಿದರು.

ಇದುವರೆಗೆ ದಾಖಲಾಗಿರುವ 38 ಪ್ರಕರಣಗಳ (18 ಕನ್ಸಂಪ್ಷನ್ ಮತ್ತು 20 ಪೆಡ್ಲಿಂಗ್) ಪ್ರಗತಿ ವರದಿಯನ್ನು ಪೊಲೀಸ್ ವರಿಷ್ಠಾಧಿಕಾರಿಗಳು ಮಂಡಿಸಿದರು. ಆಂಧ್ರಪ್ರದೇಶದ ಕುಪ್ಪಂ ಗಡಿಯಿಂದ ಸಣ್ಣ ಸಣ್ಣ ಪ್ಯಾಕೆಟ್‌ಗಳಲ್ಲಿ ಗಾಂಜಾ ಸರಬರಾಜು ಆಗುತ್ತಿರುವುದನ್ನು ತಡೆಯಲು ಗಡಿ ಭಾಗದಲ್ಲಿ ತಪಾಸಣೆ ತೀವ್ರಗೊಳಿಸುವಂತೆ ಸಭೆಯಲ್ಲಿ ನಿರ್ಣಯಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕನ್ನಿಕಾ ಸಿಕ್ರಿವಾಲ್, ಕೆಜಿಎಫ್ ಪೊಲೀಸ್ ವರಿಷ್ಠಾಧಿಕಾರಿ ಶಿವಂಶು ರಜಪೂತ, ಆರೋಗ್ಯ ಇಲಾಖೆ ಕುಟುಂಬ ಕಲ್ಯಾಣ ಅಧಿಕಾರಿ ಡಾ ಶ್ರೀನಿವಾಸ್, ಶಿಕ್ಷಣ ಇಲಾಖೆ ಉಪನಿರ್ದೇಶಕಿ ಆಸ್ಮಾ ಪರ್ವೀನ್ ತಾಜ್, ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು

# ಜೆಡಿಎಸ್ ಗ್ರೇಟರ್ ಬೆಂಗಳೂರು ಸಮಿತಿಗೆ ನೇಮಕ

ಬೆಂಗಳೂರು

ಜೆಡಿಎಸ್ ಪಕ್ಷದ ರಾಜ್ಯದ ಅಧ್ಯಕ್ಷರು ಹಾಗೂ ಕೇಂದ್ರದ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರ ಮಾರ್ಗದರ್ಶನದ ಮೇರೆಗೆ ಜೆಡಿಎಸ್ ರಾಜ್ಯ ಕೋರ್ ಕಮಿಟಿ ಅಧ್ಯಕ್ಷ ಎಂ. ಕೃಷ್ಣಾರೆಡ್ಡಿ ಹಾಗೂ ಗ್ರೇಟರ್ ಬೆಂಗಳೂರು ಜೆಡಿಎಸ್ ಅಧ್ಯಕ್ಷ ಹೆಚ್‌ಎಂ ರಮೇಶ್ ಗೌಡರು ನೂತನ ಪದಾಧಿಕಾರಿಗಳನ್ನು ನೇಮಿಸಿ ಆದೇಶ ಪತ್ರಗಳನ್ನು ಹಸ್ತಾಂತರ ಮಾಡಿದರು.



ಪಕ್ಷದ ಕಚೇರಿ ಜೆಪಿ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಅವರು ಮುಂದಿನ ಪದಾಧಿಕಾರಿಗಳಿಗೆ ನೇಮಕಾತಿ ಪತ್ರಗಳನ್ನು ನೀಡಿದರು.

ಮಹಿಳಾ ವಿಭಾಗದ ಅಧ್ಯಕ್ಷರಾಗಿ ಶೈಲಾ ಸಂತೋಜಿ ರಾವ್, ಯುವ ಜನತಾದಳ ಅಧ್ಯಕ್ಷರಾಗಿ ಆರ್. ಸ್ಯಾಮಿಯಲ್, ಕಾರ್ಮಿಕ ವಿಭಾಗದ ಅಧ್ಯಕ್ಷರಾಗಿ ಎಂ ಗೋಪಾಲ್, ಸೇವಾದ ವಿಭಾಗದ ಅಧ್ಯಕ್ಷರಾಗಿ ಪಿ.ಮಹೇಶ್, ಪರಿಶಿಷ್ಟ ಪಂಗಡ ವಿಭಾಗದ ಅಧ್ಯಕ್ಷರಾಗಿ ವಿ.ಜನಾರ್ದನ್, ಮಾಹಿತಿ ತಂತ್ರಜ್ಞಾನ ವಿಭಾಗದ ಅಧ್ಯಕ್ಷರಾಗಿ ಫಣಿರಾಜ್ ಹಿರಿಯಣ್ಣ ಗೌಡ, ಮುಸ್ಲಿಂ ಅಲ್ಪಸಂಖ್ಯಾತರ ವಿಭಾಗದ ಅಧ್ಯಕ್ಷರಾಗಿ ಅಫ್ರೋಜ್ ಬೇಗ್, ಕ್ರೈಸ್ತ ಅಲ್ಪಸಂಖ್ಯಾತರ ವಿಭಾಗದ ಅಧ್ಯಕ್ಷರಾಗಿ ಚಂದ್ರನ್ ಚಾರ್ಲ್ಸ್, ಕಾನೂನು ವಿಭಾಗದ ಅಧ್ಯಕ್ಷರಾಗಿ ಆದಿತ್ಯ ಎನ್.ರಾಜ್, ಈ ವಿಭಾಗದ ಕಾರ್ಯಾಧ್ಯಕ್ಷರನ್ನಾಗಿ ವಿನಯ್ ಕುಮಾರ್, ಮಹಾಪ್ರದಾನ ಕಾರ್ಯದರ್ಶಿಯಾಗಿ ಚೇತನ್ ಸೂರ್ಯ ಮತ್ತು ವೈದ್ಯಕೀಯ ವಿಭಾಗದ ಅಧ್ಯಕ್ಷರಾಗಿ ಡಾ. ಎಂ.ಭರದ್ವಾಜ್ ಅವರನ್ನು ನೇಮಕ ಮಾಡಲಾಗಿದೆ.

ಕಾರ್ಯಾಧ್ಯಕ್ಷರಾಗಿ ಟಿ.ಆರ್. ತುಳಸಿ ರಾಮ್, ಮಹಾಪ್ರದಾನ ಕಾರ್ಯದರ್ಶಿಯಾಗಿ ಎಸ್ ರಮೇಶ್, ಹಿರಿಯ ಉಪಾಧ್ಯಕ್ಷರುಗಳಾಗಿ ಬಿ.ಅಂದಾನಪ್ಪ, ಕೆ.ಬಾಗೇಗೌಡ, ಹೆಚ್.ಎಂ. ರಾಮಯ್ಯ ಮತ್ತು ಶ್ರೀರಾಮೇಗೌಡ ಎನ್ ಕೃಷ್ಣಪ್ಪ, ಉಪಾಧ್ಯಕ್ಷರಾಗಿ ಬಿ. ಭದ್ರೇಗೌಡ, ಹೆಚ್.ಜಿ. ಉಮೇಶ್, ಲಕ್ಷ್ಮೀನಾರಾಯಣ್, ಸುರೇಶ್ ನಾಗವಾರ, ಎ.ರುದ್ರಪ್ಪ, ತಾರಾ ಲೋಕೇಶ್, ಎಂ. ಚಂದ್ರೇಗೌಡ ಅವರುಗಳನ್ನು; ಪ್ರಧಾನ ಕಾರ್ಯದರ್ಶಿಗಳಾಗಿ ಆರ್. ಅಭಿಷೇಕ್, ಶ್ವೇತಾ ಯಾದವ್, ಕೆ.ಬಿ. ಶ್ರೀನಿವಾಸ್, ಹೆಚ್.ಪಿ. ರತ್ನ ರಾಜೇಗೌಡ ಅವರನ್ನು ನೇಮಿಸಿ ಗ್ರೇಟರ್ ಬೆಂಗಳೂರು ಜೆಡಿಎಸ್ ಅಧ್ಯಕ್ಷ ಹೆಚ್.ಎಂ. ರಮೇಶ್ ಗೌಡರು ಆದೇಶ ಪತ್ರಗಳನ್ನು ಪಕ್ಷದ ಕಚೇರಿಯಲ್ಲಿ ಹಸ್ತಾಂತರ ಮಾಡಿದರು

ಪಕ್ಷದ ರಾಷ್ಟ್ರೀಯ ಅಧ್ಯಕ್ಷರು ಹಾಗೂ ಮಾಜಿ ಪ್ರಧಾನಿಗಳಾದ ಹೆಚ್.ಡಿ. ದೇವೇಗೌಡರು ಹಾಗೂ ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು ಬೆಂಗಳೂರು ಚುನಾವಣೆಗೆ ಬಿರುಸಿನ ತಯಾರಿ ನಡೆಸುವಂತೆ ಸ್ಪಷ್ಟವಾಗಿ ಸೂಚಿಸಿದ್ದಾರೆ. ಹೀಗಾಗಿ ನೂತನ ಪದಾಧಿಕಾರಿಗಳು ಹಾಗೂ ನಗರದ ಎಲ್ಲಾ ಮುಖಂಡರು, ಕಾರ್ಯಕರ್ತರು ಸಮರ್ಪಣಾ ಭಾವದಿಂದ ಪಕ್ಷದ ಗೆಲುವಿಗೆ ದುಡಿಮೆ ಮಾಡಬೇಕು ಎಂದು ಅವರು ನಿರ್ದೇಶನ ನೀಡಿದರು.

ನೂತನ ಪದಾಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು; ವಾರ್ಡ್ ಹಾಗೂ ಮತಗಟ್ಟೆ ಮಟ್ಟದಲ್ಲಿ ಪದಾಧಿಕಾರಿಗಳು ಅತ್ಯಂತ ಉತ್ತಮವಾಗಿ ಪಕ್ಷವನ್ನು ಸಂಘಟಿಸಬೇಕು.

ಈಗಾಗಲೇ ಪಕ್ಷದ ರಾಜ್ಯಾಧ್ಯಕ್ಷರು ಕೆಲ ಸೂಚನೆಗಳನ್ನು ನೀಡಿ ಅವುಗಳನ್ನು ಅನುಷ್ಠಾನಕ್ಕೆ ತರಬೇಕು ಎಂದು ಸ್ಪಷ್ಟವಾಗಿ ಆದೇಶ ಮಾಡಿದ್ದಾರೆ ಎಂದರು.

# 'ಮೋದಿಯವರ ನಾಯಕತ್ವದಲ್ಲಿ ಯುವಜನರಿಗೆ ಹೆಚ್ಚು ಅವಕಾಶ'




ಬೆಂಗಳೂರು

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ದೂರದೃಷ್ಟಿಯ ನಾಯಕತ್ವದಲ್ಲಿ, ಭಾರತವು ಸೆಮಿಕಂಡಕ್ಟರ್ ಕ್ಷೇತ್ರ, ಡಿಜಿಟಲ್ ನಾವೀನ್ಯತೆ ಮತ್ತು ಕೌಶಲ್ಯಾಭಿವೃದ್ಧಿ ಕ್ಷೇತ್ರಗಳಲ್ಲಿ ಹೊಸ ಮೈಲುಗಲ್ಲುಗಳನ್ನು ತಲುಪುತ್ತಿದೆ. ಈ ಮೂಲಕ ನಮ್ಮ ಯುವಜನತೆಗೆ ಹಿಂದೆಂದೂ ಕಾಣದಂತಹ ಅವಕಾಶಗಳು ಸೃಷ್ಟಿಯಾಗಿವೆ ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನವೀನ್ ಅವರು ತಿಳಿಸಿದ್ದಾರೆ.

'ಯೂತ್ ಫಾರ್ ನೇಷನ್' ಆಯೋಜಿಸಿದ್ದ "ಯುವ ಮನಸ್ಸುಗಳೊಂದಿಗೆ ಸಂವಾದ" ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ವಿಕಸಿತ ಭಾರತದ ಸಂಕಲ್ಪವನ್ನು ಸಾಕಾರಗೊಳಿಸುವಲ್ಲಿ ಯುವಜನತೆಯ ಪಾತ್ರ ಮತ್ತು ಯುವ ನಾಯಕತ್ವದ ಪ್ರಾಮುಖ್ಯತೆಯ ಕುರಿತು ಅವರೊಂದಿಗೆ ಅರ್ಥಪೂರ್ಣ ಚರ್ಚೆಗಳನ್ನು ನಡೆಸಿದರು.

ಕರ್ನಾಟಕದ ಕಾಂಗ್ರೆಸ್ ಸರ್ಕಾರವು ಯುವಜನರ ಆಕಾಂಕ್ಷೆಗಳಿಗೆ ದ್ರೋಹ ಬಗೆದಿದೆ. ಕಾಂಗ್ರೆಸ್ ಆಡಳಿತದಲ್ಲಿ ಮಿತಿಮೀರಿದ ಭ್ರಷ್ಟಾಚಾರ ಮತ್ತು ದುರಾಡಳಿತವು, ಭಾರತದ ಯುವಜನತೆಯ ಭವಿಷ್ಯ ಮತ್ತು ಸಾಮರ್ಥ್ಯದ ಬಗ್ಗೆ ಕಾಂಗ್ರೆಸ್ ಪಕ್ಷಕ್ಕಿರುವ ಸಂಪೂರ್ಣ ದೂರದೃಷ್ಟಿಯ ಕೊರತೆಯನ್ನು ಬಟಾಬಯಲು ಮಾಡಿದೆ ಎಂದು ಅವರು ನುಡಿದರು. ಶಾಸಕ ಹಾಗೂ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ, ಯುವ ಮೋರ್ಚಾ ರಾಷ್ಟ್ರೀಯ ಅಧ್ಯಕ್ಷ ತೇಜಸ್ವಿ ಸೂರ್ಯ, ಪ್ರಮುಖರು

# 'ರಾಜ್ಯ ಸರ್ಕಾರ ವ್ಯಾಟ್ ಕಡಿಮೆ ಮಾಡಲಿ'

ಬೆಂಗಳೂರು

ಪೆಟ್ರೋಲ್ ದರ ಏರಿಕೆಯಿಂದ ವಾರ್ಷಿಕ ಸುಮಾರು 6 ಸಾವಿರ ಕೋಟಿ ರೂಪಾಯಿ ಹೆಚ್ಚುವರಿ ಆದಾಯ ಗಳಿಸುತ್ತಿರುವ ಕಾಂಗ್ರೆಸ್ ಸರ್ಕಾರ ವ್ಯಾಟ್ ಕಡಿಮೆ ಮಾಡದೆ ಕೇಂದ್ರ ಸರ್ಕಾರದ ಮೇಲೆ ಆರೋಪ ಮಾಡುತ್ತಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪೆಟ್ರೋಲ್ ದರ ಏರಿಕೆ ವಿಚಾರದಲ್ಲಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ರಾಜಕಾರಣ ಮಾಡುತ್ತಿದ್ದಾರೆ ಎಂದು ಟೀಕಿಸಿದರು.



"ಯುದ್ಧ ಪರಿಸ್ಥಿತಿಯಿಂದಾಗಿ ಕೆಲವು ದೇಶಗಳು ಪೆಟ್ರೋಲ್ ಬಳಕೆಗೆ ನಿರ್ಬಂಧ ಹೇರಿದ್ದರೂ ಪ್ರಧಾನಿ ನರೇಂದ್ರ ಮೋದಿ ಅಂತಹ ಕ್ರಮ ಕೈಗೊಂಡಿಲ್ಲ. ಕರ್ನಾಟಕದಲ್ಲಿ ಪೆಟ್ರೋಲ್ ದರ ಲೀಟರ್‌ಗೆ 107.70 ರೂಪಾಯಿ ಇದ್ದರೆ, ದೆಹಲಿಯಲ್ಲಿ 99.50 ರೂಪಾಯಿ, ಗುಜರಾತ್‌ನಲ್ಲಿ 99.10 ರೂಪಾಯಿ, ಉತ್ತರ ಪ್ರದೇಶದಲ್ಲಿ 99.50 ರೂಪಾಯಿ ಹಾಗೂ ಹರ್ಯಾಣದಲ್ಲಿ 99.70 ರೂಪಾಯಿ ಇದೆ. ರಾಜ್ಯದಲ್ಲಿ ಮಾತ್ರ ದರ ಹೆಚ್ಚಾಗಿದೆ," ಎಂದು ಹೇಳಿದರು. ರಾಜ್ಯ ಸರ್ಕಾರ ಪೆಟ್ರೋಲ್ ಮೇಲಿನ ವ್ಯಾಟ್ ಹೆಚ್ಚಳ ಮಾಡಿದ್ದು, ಅದನ್ನು ಕಡಿಮೆ ಮಾಡದೆ ಕೇಂದ್ರ ಸರ್ಕಾರದ ಮೇಲೆ ಹೊಣೆ ಹಾಕುತ್ತಿದೆ ಎಂದು ಆರೋಪಿಸಿದರು.

"ದರ ಏರಿಕೆಯಿಂದ ಕೇಂದ್ರ ಸರ್ಕಾರಕ್ಕೆ ಹೆಚ್ಚುವರಿ ಆದಾಯ ಬರುವುದಿಲ್ಲ. ರಾಜ್ಯ ಸರ್ಕಾರಕ್ಕೆ ಮಾತ್ರ ವರ್ಷಕ್ಕೆ ಸುಮಾರು 6 ಸಾವಿರ ಕೋಟಿ ರೂಪಾಯಿ ಹೆಚ್ಚುವರಿ ಆದಾಯ ಬರುತ್ತಿದೆ. ಅದನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಲಾಗುತ್ತಿದೆ," ಎಂದು ದೂರಿದರು.

"ಪ್ರತಿ ಲೀಟರ್ ಪೆಟ್ರೋಲ್ ಮಾರಾಟದಿಂದ ರಾಜ್ಯ ಸರ್ಕಾರಕ್ಕೆ 1.15 ರೂಪಾಯಿ ಹೆಚ್ಚುವರಿ ಆದಾಯ ಬರುತ್ತಿದೆ. ಜನರ ಬಗ್ಗೆ ಕಾಳಜಿ ಇದ್ದರೆ ರಾಜ್ಯ ಸರ್ಕಾರವೇ ತೆರಿಗೆ ಇಳಿಕೆ ಮಾಡಬೇಕು. ಇಲ್ಲವಾದರೆ ಹೆಚ್ಚುವರಿ ಆದಾಯ ಪಡೆಯುತ್ತಿರುವ ಬಗ್ಗೆ ಜನರಿಗೆ ಸ್ಪಷ್ಟನೆ ನೀಡಬೇಕು," ಎಂದರು.

ದರ ಏರಿಕೆಯ ವಿರುದ್ಧ ಕಾಂಗ್ರೆಸ್ ಹೋರಾಟ ನಡೆಸುವುದು ಜನರಿಗೆ ಮಾಡುವ ವಂಚನೆ ಎಂದು ಹೇಳಿದರು.

ಅಳಂದ ಕೋಮು ಗಲಭೆ ಪ್ರಕರಣದಲ್ಲಿ ಮುಸ್ಲಿಮರ ವಿರುದ್ಧ ದಾಖಲಾಗಿದ್ದ ಪ್ರಕರಣಗಳನ್ನು ವಾಪಸ್ ಪಡೆಯಲಾಗಿದೆ ಎಂದು ಆರೋಪಿಸಿದ ಅವರು, ಭಟ್ಕಳದಲ್ಲಿ ಹಿಂದೂಗಳು ನಿರ್ಮಿಸಿದ್ದ ಮೂರಿನ ಕಟ್ಟೆಯನ್ನು ಧ್ವಂಸ ಮಾಡಿದವರ ವಿರುದ್ಧವೂ ಕ್ರಮ ಕೈಗೊಂಡಿಲ್ಲ ಎಂದು ಟೀಕಿಸಿದರು.

"ಮತಬ್ಯಾಂಕ್ ರಾಜಕಾರಣಕ್ಕಾಗಿ ಇಂತಹ ಘಟನೆಗಳಿಗೆ ಪ್ರೋತ್ಸಾಹ ಸಿಗುತ್ತಿದೆ. ಪೊಲೀಸರ ಮೇಲೆ ಹಲ್ಲೆ ನಡೆದರೂ ಕ್ರಮ ಕೈಗೊಂಡಿಲ್ಲ. ಪ್ರಕರಣದ ಬಗ್ಗೆ ನಿಷ್ಪಕ್ಷಪಾತ ತನಿಖೆ ನಡೆಸಬೇಕು. ಪೊಲೀಸರ ಮೇಲೆ ಹಲ್ಲೆ ನಡೆಸಿದವರನ್ನು ಗೂಂಡಾ ಕಾಯ್ದೆಯಡಿ ಬಂಧಿಸಬೇಕು," ಎಂದು ಆಗ್ರಹಿಸಿದರು. ಈ ಪ್ರಕರಣದ ನೈತಿಕ ಹೊಣೆ ಹೊತ್ತು ಗೃಹ ಸಚಿವರಾದ ಡಾ. ಜಿ. ಪರಮೇಶ್ವರ್

# ಮುಂಗಾರು ಎದುರಿಸಲು ಸಕಲ ಸಿದ್ಧತೆ

ಕೋಲಾರ

ಮುಂಬರುವ ಮುಂಗಾರು ಮಳೆಗಾಲವನ್ನು ಸಮರ್ಥವಾಗಿ ಎದುರಿಸಲು ಜಿಲ್ಲಾಡಳಿತ ಸಂಪೂರ್ಣ ಸಜ್ಜಾಗಬೇಕು. ವಿಪತ್ತು ನಿರ್ವಹಣೆ ವಿಚಾರದಲ್ಲಿ ಅಧಿಕಾರಿಗಳು ಯಾವುದೇ ರೀತಿಯ ನಿರ್ಲಕ್ಷ್ಯ ತೋರಿದರೆ, ಅಂಥವರ ವಿರುದ್ಧ ಮುಲಾಜಿಲ್ಲದೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು ಎಂದು ಜಿಲ್ಲಾಧಿಕಾರಿ ಡಾ. ಎಂ.ಆರ್. ರವಿ ಅವರು ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದರು.

ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ 'ಜಿಲ್ಲಾ ವಿಪತ್ತು ನಿರ್ವಹಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.



ಸಭೆಯಲ್ಲಿ ಮುಂಗಾರು ಹಂಗಾಮಿಗೆ ಕೈಗೊಳ್ಳಬೇಕಾದ ಸಿದ್ಧತೆಗಳು, ಕುಡಿಯುವ ನೀರಿನ ನಿರ್ವಹಣೆ, ಮಳೆ ಹಾನಿ ಪರಿಹಾರ ಹಾಗೂ ಕೃಷಿ ಚಟುವಟಿಕೆಗಳ ಕುರಿತು ಎಳೆಎಳೆಯಾಗಿ ಚರ್ಚಿಸಲಾಯಿತು.

ಜಿಲ್ಲೆಯಲ್ಲಿ ಮಳೆಯ ಪ್ರಮಾಣದ ಬಗ್ಗೆ ಮಾಹಿತಿ ಪಡೆದ ಜಿಲ್ಲಾಧಿಕಾರಿಗಳು, ಏಪ್ರಿಲ್ ತಿಂಗಳಲ್ಲಿ ಶೇ. 76 ರಷ್ಟು ಮಳೆ ಕೊರತೆಯಾಗಿತ್ತು. ಮೇ ತಿಂಗಳಲ್ಲಿ ವಾಡಿಕೆಯಂತೆ 50.1 ಮಿ.ಮೀ. ಮಳೆಯಾಗಬೇಕಿತ್ತು, ಆದರೆ 47.3 ಮಿ.ಮೀ. ಮಳೆಯಾಗಿದ್ದು ಶೇ. 6 ರಷ್ಟು ಕೊರತೆಯಾಗಿದೆ ಎಂದು ತಿಳಿಸಿದರು. ಇತ್ತೀಚೆಗೆ ಸುರಿದ ಮಳೆಯಿಂದಾಗಿ ಸಂಭವಿಸಿದ ಅನಾಹುತಗಳ ಬಗ್ಗೆ ಚರ್ಚಿಸಿದ ಅವರು, ಮಳೆಯಿಂದಾಗಿ ಮೃತಪಟ್ಟ ಇಬ್ಬರು ವ್ಯಕ್ತಿಗಳ ಕುಟುಂಬಗಳಿಗೆ ತಲಾ 5 ಲಕ್ಷ ರೂ. ಹಾಗೂ 2 ಜಾನುವಾರುಗಳ ಸಾವಿಗೆ ತಲಾ 30 ಸಾವಿರ ರೂ. ಪರಿಹಾರವನ್ನು ವಿತರಿಸಲಾಗಿದೆ. ಅಲ್ಲದೆ, ಭಾಗಶಃ ಹಾನಿಗೀಡಾದ 5 ಮನೆಗಳಿಗೆ ತಲಾ 5,200 ರೂ. ಪರಿಹಾರ ನೀಡಲಾಗಿದೆ. ಮಳೆಯಿಂದಾಗಿ 31 ವಿದ್ಯುತ್ ಕಂಬಗಳು ಹಾಗೂ 2 ಟ್ರಾನ್ಸ್ ಫಾರ್ಮರ್ ಗಳಿಗೆ ಹಾನಿಯಾಗಿದ್ದು, ತಕ್ಷಣವೇ ದುರಸ್ತಿ ಮಾಡುವಂತೆ ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಿದರು.

ಮಳೆಯಿಂದಾಗಿ ಜಿಲ್ಲೆಯಲ್ಲಿ ಒಟ್ಟು 902 ಹೆಕ್ಟೇರ್ ತೋಟಗಾರಿಕಾ ಬೆಳೆ ಮತ್ತು 538 ಹೆಕ್ಟೇರ್ ಕೃಷಿ ಬೆಳೆ ಹಾನಿಯಾಗಿದೆ. ಈ ಕುರಿತು ಜಂಟಿ ಸಮೀಕ್ಷೆ ಕಾರ್ಯವನ್ನು ಆದಷ್ಟು ಬೇಗ ಪೂರ್ಣಗೊಳಿಸಬೇಕು. ಕಂದಾಯ, ಕೃಷಿ ಹಾಗೂ ತೋಟಗಾರಿಕಾ ಇಲಾಖೆ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ, ಹಾನಿಯ ವರದಿಯನ್ನು 'ಪರಿಹಾರ ತಂತ್ರಾಂಶ'ದಲ್ಲಿ ಶೀಘ್ರವಾಗಿ ಡೇಟಾ ಎಂಟ್ರಿ ಮಾಡಬೇಕು, ಇದರಿಂದ ರೈತರಿಗೆ ತ್ವರಿತವಾಗಿ ಪರಿಹಾರ ತಲುಪಿಸಲು ಸಾಧ್ಯವಾಗುತ್ತದೆ ಎಂದು ತಾಕೀತು ಮಾಡಿದರು.

ಬೇಸಿಗೆ ಹಾಗೂ ಮುಂಗಾರು ಪೂರ್ವದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ತೀವ್ರ ಮುನ್ನೆಚ್ಚರಿಕೆ ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಕೋಲಾರ ನಗರದ 9 ವಾರ್ಡ್ ಗಳು ಮತ್ತು ಮಾಲೂರು ಪಟ್ಟಣದ 4 ವಾರ್ಡ್ ಗಳಲ್ಲಿರುವ ನೀರಿನ ಸಮಸ್ಯೆಯನ್ನು ತಕ್ಷಣವೇ ಬಗೆಹರಿಸಬೇಕು. ಟ್ಯಾಂಕರ್ ಮೂಲಕ ನೀರು ಪೂರೈಸುವುದನ್ನು ಕೇವಲ ತುರ್ತು ಸಂದರ್ಭಗಳಿಗೆ ಮಾತ್ರ ಸೀಮಿತಗೊಳಿಸಿ, ಹೊಸ ಕೊಳವೆಬಾವಿಗಳನ್ನು ಕೊರೆಯಿಸುವುದು ಅಥವಾ ಪೈಪ್‌ಲೈನ್ ವಿಸ್ತರಣೆ ಮಾಡುವ ಮೂಲಕ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು. ಇದಕ್ಕಾಗಿ ಟಾಸ್ಕ್ ಫೋರ್ಸ್ ಅನುದಾನವನ್ನು ಸದ್ಬಳಕೆ ಮಾಡಿಕೊಳ್ಳಬೇಕು.

ಜಿಲ್ಲೆಯಾದ್ಯಂತ ಇರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸುಸ್ಥಿತಿಯಲ್ಲಿಡಬೇಕು ಮತ್ತು ಕೆಟ್ಟುನಿಂತಿರುವ ಘಟಕಗಳನ್ನು ತಕ್ಷಣವೇ ದುರಸ್ತಿಗೊಳಿಸಬೇಕು. ಕುಡಿಯುವ ನೀರು ಪೂರೈಕೆಯಲ್ಲಿ ವ್ಯತ್ಯಯವಾದರೆ ಆಯಾ ಭಾಗದ ಸಂಬಂಧಪಟ್ಟ ಅಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಎಚ್ಚರಿಸಿದರು.

ಮುಂಗಾರು ಬಿತ್ತನೆಗೆ ರೈತರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ನೋಡಿಕೊಳ್ಳುವುದು ಕೃಷಿ ಇಲಾಖೆಯ ಜವಾಬ್ದಾರಿಯಾಗಿದೆ. ಎಲ್ಲಾ ರೈತ ಸಂಪರ್ಕ ಕೇಂದ್ರಗಳಲ್ಲಿ ಅಗತ್ಯವಿರುವಷ್ಟು ಬಿತ್ತನೆ ಬೀಜಗಳನ್ನು ಮುಂಚಿತವಾಗಿಯೇ ದಾಸ್ತಾನು ಮಾಡಿಕೊಳ್ಳಬೇಕು. ಎಲ್ಲೆಡೆ ನಕಲಿ ಬಿತ್ತನೆ ಬೀಜಗಳ ಮಾರಾಟ ಜಾಲದ ಮೇಲೆ ಹದ್ದಿನ ಕಣ್ಣಿಡಬೇಕು ಮತ್ತು ಅಂಥವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಪ್ರಸ್ತುತ ಜಿಲ್ಲೆಯಲ್ಲಿ ಯೂರಿಯಾ, ಡಿಎಪಿ ಸೇರಿದಂತೆ 11,770 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನಿದೆ. ರೈತರಿಗೆ ಕೊರತೆಯಾಗದಂತೆ ಇದನ್ನು ವಿತರಿಸಬೇಕು ಹಾಗೂ ರೈತರಲ್ಲಿ ನ್ಯಾನೋ ಯೂರಿಯಾ ಮತ್ತು ಜೈವಿಕ ಗೊಬ್ಬರದ ಬಳಕೆಯನ್ನು ಹೆಚ್ಚಿಸಲು ಅರಿವು ಮೂಡಿಸಬೇಕು ಎಂದು ಕೃಷಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಪಶುಸಂಗೋಪನಾ ಇಲಾಖೆಯ ಪ್ರಗತಿ ಪರಿಶೀಲಿಸಿದ ಜಿಲ್ಲಾಧಿಕಾರಿಗಳು, ಜಾನುವಾರುಗಳಿಗೆ ಕಾಲುಬಾಯಿ ಜ್ವರ ಲಸಿಕೆ ಹಾಕುವ ಕಾರ್ಯವು ಶೇ. 85ರಷ್ಟು ಮುಗಿದಿದೆ. ಉಳಿದ ಶೇ. 15ರಷ್ಟು ಲಸಿಕಾ ಕಾರ್ಯವನ್ನು ಅಭಿಯಾನದ ಮಾದರಿಯಲ್ಲಿ ತ್ವರಿತವಾಗಿ ಪೂರ್ಣಗೊಳಿಸಬೇಕು. ಲಂಪಿ ಸ್ಕಿನ್ ಕಾಯಿಲೆಗೆ ಈಗಾಗಲೇ ಶೇ. 100ರಷ್ಟು ಲಸಿಕೆ ಹಾಕಲಾಗಿದ್ದು, ಮುಂಬರುವ ದಿನಗಳಲ್ಲಿ ಜಾನುವಾರುಗಳಿಗೆ ಸಾಂಕ್ರಾಮಿಕ ರೋಗಗಳು ಹರಡದಂತೆ ಕಟ್ಟೆಚ್ಚರ ವಹಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಪ್ರವೀಣ್. ಪಿ. ಬಾಗೇವಾಡಿ, ಅಪರ ಜಿಲ್ಲಾಧಿಕಾರಿ ಎಸ್. ಎಂ. ಮಂಗಳ, ಉಪವಿಭಾಗಾಧಿಕಾರಿ ಜಂಬಗಿ ರೇಣುಕಾಪ್ರಸಾದ್ ದಿಲೀಪ್, ಕೃಷಿ ಜಂಟಿ ನಿರ್ದೇಶಕಿ ಜಾವೇದಾ ಖಾನಮ್, ಗ್ರಾಮೀಣಾಭಿವೃದ್ಧಿ ಇಲಾಖೆ ಅಭಿಯಂತರರು ರಘು, ಜಿಲ್ಲಾ ಭೂ ವಿಜ್ಞಾನ ಅಧಿಕಾರಿ ತಿಪ್ಪೆಸ್ವಾಮಿ, ಎಲ್ಲಾ ತಹಸೀಲ್ದಾರ್‌ಗಳು ಎಲ್ಲಾ ತಾಲ್ಲೂಕಿನ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಜಿನುಗು ಕುಂಟೆಗೆ ಬಿದ್ದು ಇಬ್ಬರು ಮಕ್ಕಳು ಸಾವು

ಟೇಕಲ್

ಮಾಲೂರು ಹಾಗೂ ಬಂಗಾರಪೇಟೆ ಗಡಿಭಾಗದ ಮಾಸ್ತಿ ಹೋಬಳಿಯ ದಿನ್ನಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೊತ್ತೂರು ಗ್ರಾಮದಲ್ಲಿ ಇಬ್ಬರು ಮಕ್ಕಳು ಜಿನುಗು ಕುಂಟೆಗೆ ಬಿದ್ದು ಸಾವನ್ನಪ್ಪಿರುವ ದುರ್ಘಟನೆ ಸೋಮವಾರ ಸಂಜೆ ಮಾಸ್ತಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಮೃತ ಮಕ್ಕಳನ್ನು ದೇವಕಿರಣ್ (12) ಹಾಗೂ ವಿನುತ್ (10) ಎಂದು ಗುರುತಿಸಲಾಗಿದೆ. ಗ್ರಾಮದ ಕೊತ್ತೂರಿನಲ್ಲಿ ವೆಂಕಟೇಶ್ ಎಂಬ ರೈತರು ತಮ್ಮ ಜಮೀನಿನಲ್ಲಿ ನೀರು ಜಿನುಗುತ್ತಿದ್ದ ಹಿನ್ನೆಲೆಯಲ್ಲಿ ಹಳ್ಳ ತೋಡಿ ಜಿನುಗು ಕುಂಟೆ ನಿರ್ಮಿಸಿದ್ದರು. ಜಾನುವಾರುಗಳಿಗೆ ನೀರು ಕುಡಿಯಲು ಹಾಗೂ ಕೃಷಿ ಚಟುವಟಿಕೆಗಳಿಗೆ ಆ ನೀರನ್ನು ಬಳಸಲಾಗುತ್ತಿತ್ತು ಎಂದು ತಿಳಿದುಬಂದಿದೆ.

ಮೃತರಾದ ಇಬ್ಬರು ಮಕ್ಕಳು ಒಂದೇ ಕುಟುಂಬದ ಸಹೋದರರಾಗಿದ್ದು, ಶಾಲೆಗೆ ರಜೆ ಇರುವ ಹಿನ್ನೆಲೆಯಲ್ಲಿ ಜಿನುಗು ಕುಂಟೆಗೆ ಈಜಲು ಹೋಗಿದ್ದರು. ಈ ವೇಳೆ ಕಾಲು ಜಾರಿ ನೀರಿಗೆ ಬಿದ್ದು ಆಕಸ್ಮಿಕವಾಗಿ ಸಾವನ್ನಪ್ಪಿದ್ದಾರೆ ಎಂದು ತಿಳಿದುಬಂದಿದೆ.

ಜಿನುಗು ಕುಂಟೆಯ ಮಾಲೀಕರಾದ ವೆಂಕಟೇಶಪ್ಪ ಅವರ ಪುತ್ರ ಅಶ್ವಥಪ್ಪನ ಮಗ ವಿನುತ್ ಮೂರನೇ ತರಗತಿಯಲ್ಲಿ ಓದುತ್ತಿದ್ದು, ಬಂಗಾರಪೇಟೆಯ ವಸತಿ ನಿಲಯದಲ್ಲಿ ಶಿಕ್ಷಣ ಪಡೆಯುತ್ತಿದ್ದ ಎಂದು ತಿಳಿದುಬಂದಿದೆ.

# ಘನತ್ಯಾಜ್ಯ ನಿರ್ವಹಣೆಗೆ ನಾಗರಿಕ ಸಂಘಟನೆಗಳ ಸಲಹೆ ಸ್ವೀಕಾರ

ಬೆಂಗಳೂರು

ಬೆಂಗಳೂರು ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಯನ್ನು ಮತ್ತಷ್ಟು ಬಲಪಡಿಸುವ ಹಾಗೂ ಕಸದ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಪಾಲಿಕೆ ಆಯುಕ್ತರಾದ ಕೆ. ಎನ್. ರಮೇಶ್ ಅವರ ಅಧ್ಯಕ್ಷತೆಯಲ್ಲಿ ಸ್ವಯಂಸೇವಾ ಸಂಸ್ಥೆಗಳು ಹಾಗೂ ನಾಗರಿಕ ವೇದಿಕೆಗಳ ಪ್ರಮುಖರೊಂದಿಗೆ ಮಹತ್ವದ ಸಭೆ ನಡೆಯಿತು.

ಸಭೆಯಲ್ಲಿ ಬಿಎಸ್‌ಡಬ್ಲ್ಯುಎಂಎಲ್ ರಾಯಭಾರಿ ಹಾಗೂ ನಟ ಅನಿರುದ್ಧ ಜಟ್ಕರ್, ಕುಮಾರಸ್ವಾಮಿ ಬಡಾವಣೆಯ ನಾಗರಿಕ ಕಾರ್ಯಪಡೆ ಸದಸ್ಯ ಶ್ರೀನಾಥ್, ಜೆ.ಪಿ. ನಗರದ "ವುಮೆನ್ ಆಫ್ ವಿಸ್ಡಮ್" ಸಂಘಟನೆ, ಎಚ್‌ಎಸ್‌ಆರ್ ಬಡಾವಣೆಯ ನಾಗರಿಕ ವೇದಿಕೆ ಸೇರಿದಂತೆ ಹಲವು ನಾಗರಿಕ ಸಂಘಟನೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.



ಸಭೆಯಲ್ಲಿ ನಾಗರಿಕ ಸಂಘಟನೆಗಳು ತಮ್ಮ ತಮ್ಮ ಬಡಾವಣೆಗಳಲ್ಲಿ ಅನುಷ್ಠಾನಗೊಳಿಸಿರುವ ಘನತ್ಯಾಜ್ಯ ಸಂಗ್ರಹಣೆ ಹಾಗೂ ನಿರ್ವಹಣಾ ಕ್ರಮಗಳ ಕುರಿತು ಸಮಗ್ರ ಮಾಹಿತಿ ಹಂಚಿಕೊಂಡು, ಪಾಲಿಕೆಯೊಂದಿಗೆ ಸಮನ್ವಯ ಸಾಧಿಸಿ ನಗರ ಸ್ವಚ್ಛತೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿ ನಿರ್ವಹಿಸಲು ಹಲವು ಸಲಹೆಗಳನ್ನು ನೀಡಿದರು.

ಜೆ.ಪಿ. ನಗರದಲ್ಲಿ "ವುಮೆನ್ ಆಫ್ ವಿಸ್ಡಮ್" ಸಂಸ್ಥೆಯ ಸಕ್ರಿಯ ಪ್ರಯತ್ನದಿಂದ ಮಿಶ್ರ ತ್ಯಾಜ್ಯ ಮುಕ್ತ ವಾತಾವರಣ ನಿರ್ಮಾಣವಾಗಿದ್ದು, ಶೇ.100 ರಷ್ಟು ಕಸ ವಿಂಗಡಣೆ ಯಶಸ್ವಿಯಾಗಿ ನಡೆಯುತ್ತಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು. ಅರವಾಣಿ ತಂಡದ ಮೂಲಕ ಗೋಡೆ ಚಿತ್ರಗಳನ್ನು ಬಿಡಿಸಿ ಸಾರ್ವಜನಿಕರಲ್ಲಿ ಸ್ವಚ್ಛತೆ ಮತ್ತು ತ್ಯಾಜ್ಯ ವಿಂಗಡಣೆ ಕುರಿತು ಜಾಗೃತಿ ಮೂಡಿಸಿರುವ ಕಾರ್ಯವನ್ನು ಸಭೆಯಲ್ಲಿ ಶ್ಲಾಘಿಸಲಾಯಿತು. ಇದೇ ಮಾದರಿಯನ್ನು ನಗರದ ಎಲ್ಲಾ ಅಪಾರ್ಟ್‌ಮೆಂಟ್‌ಗಳು ಹಾಗೂ ಪಿಜಿ ವಸತಿಗಳಲ್ಲೂ ಕಡ್ಡಾಯವಾಗಿ ಜಾರಿಗೊಳಿಸಬೇಕು ಎಂದು ಸಲಹೆ ನೀಡಲಾಯಿತು.

ನಗರದ ವಿವಿಧ ಕಸದ ಸಮಸ್ಯೆ ಇರುವ ಪ್ರದೇಶಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿ ಕಟ್ಟುನಿಟ್ಟಿನ ನಿಗಾವಹಿಸಬೇಕು ಎಂದು ನಾಗರಿಕ ಸಂಘಟನೆಗಳು ಒತ್ತಾಯಿಸಿದವು. ಜೊತೆಗೆ ಸಂಜೆ ವೇಳೆಯಲ್ಲೂ ಕಸ ಸಂಗ್ರಹಣೆ ನಡೆಸುವುದರಿಂದ ರಸ್ತೆ ಬದಿಯಲ್ಲಿ ಕಸ ಸುರಿಯುವ ಸಮಸ್ಯೆಯನ್ನು ತಡೆಯಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಸಭೆಯಲ್ಲಿ ಘನತ್ಯಾಜ್ಯ ನಿರ್ವಹಣೆಯಲ್ಲಿ ನಾಗರಿಕರ ಭಾಗವಹಿಸುವಿಕೆ ಹೆಚ್ಚಿಸುವುದು, ಮೂಲದಲ್ಲಿಯೇ ಕಸ ವಿಂಗಡಣೆ ಕಡ್ಡಾಯಗೊಳಿಸುವುದು ಹಾಗೂ ಸಾರ್ವಜನಿಕ ಜಾಗೃತಿ ಕಾರ್ಯಕ್ರಮಗಳನ್ನು ಇನ್ನಷ್ಟು ಬಲಪಡಿಸುವ ಕುರಿತು ಚರ್ಚೆ ನಡೆಯಿತು. ನಗರವನ್ನು ಸ್ವಚ್ಛ ಮತ್ತು ಪರಿಸರ ಸ್ನೇಹಿಯಾಗಿ ರೂಪಿಸುವಲ್ಲಿ ನಾಗರಿಕರು ಹಾಗೂ ಪಾಲಿಕೆ ಸಮನ್ವಯದಿಂದ ಕಾರ್ಯನಿರ್ವಹಿಸಬೇಕೆಂದು ಅಭಿಪ್ರಾಯ ವ್ಯಕ್ತವಾಯಿತು.

# 'ಪಡಿತರ ವಿತರಣೆಯಲ್ಲಿ ವ್ಯತ್ಯಾಸವಾಗದಂತೆ ಕ್ರಮ'

ದೇವನಹಳ್ಳಿ

ಪಡಿತರ ವಿತರಣೆಯಲ್ಲಿ ಯಾವುದೇ ರೀತಿಯ ವ್ಯತ್ಯಾಸವಾಗದಂತೆ ಅರ್ಹ ಫಲಾನುಭವಿಗಳಿಗೆ ಸಂಪೂರ್ಣ ಆಹಾರ ಧಾನ್ಯಗಳನ್ನು ವಿತರಿಸಲಾಗುವುದು ಎಂದು ಆಹಾರ ಸಚಿವರಾದ ಕೆ. ಹೆಚ್. ಮುನಿಯಪ್ಪ ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ಯೋಜನೆಯಡಿ ಪ್ರತಿ ಫಲಾನುಭವಿಗೆ ತಲಾ 5 ಕೆ.ಜಿ. ಅಕ್ಕಿ ನೀಡಲಾಗುತ್ತಿದ್ದು, ಅದರ ಜೊತೆಗೆ ರಾಜ್ಯ ಸರ್ಕಾರವು ಹೆಚ್ಚುವರಿಯಾಗಿ ರಾಗಿ ಹಾಗೂ ಅಕ್ಕಿಯನ್ನು ವಿತರಿಸುತ್ತಿದೆ ಎಂದು ಹೇಳಿದರು.

ಪ್ರಸ್ತುತ 6 ಕೆ.ಜಿ. ರಾಗಿ ಮತ್ತು 4 ಕೆ.ಜಿ. ಅಕ್ಕಿ ವಿತರಿಸುವ ಪ್ರಕ್ರಿಯೆ ನಡೆಯುತ್ತಿದೆ ಎಂದು ಮಾಹಿತಿ ನೀಡಿದರು.

ರಾಗಿ ವಿತರಣೆಯಲ್ಲಿನ ವಿಳಂಬಕ್ಕೆ ಸಂಬಂಧಿಸಿದಂತೆ ಸ್ಪಷ್ಟನೆ ನೀಡಿದ ಸಚಿವರು, "ವಾಸ್ತವವಾಗಿ ಅಕ್ಟೋಬರ್‌ನಿಂದ ರಾಗಿ ವಿತರಣೆಯನ್ನು ಆರಂಭಿಸಲು ಯೋಜಿಸಲಾಗಿತ್ತು. ಆದರೆ ನಮ್ಮಲ್ಲಿ ರಾಗಿಯ ದಾಸ್ತಾನು ಹೆಚ್ಚಾಗಿರುವುದರಿಂದ ಅದನ್ನು ಮುಂಚಿತವಾಗಿ ಜನರಿಗೆ ತಲುಪಿಸಬೇಕೆಂಬ ಉದ್ದೇಶದಿಂದ ವಿತರಣೆ ಆರಂಭಿಸಲಾಯಿತು," ಎಂದರು.

"ಗುಣಮಟ್ಟ ಕಾಪಾಡುವ ಉದ್ದೇಶದಿಂದ ರಾಗಿಯನ್ನು ಶುಚಿಗೊಳಿಸಿ, ಸರಿಯಾದ ರೀತಿಯಲ್ಲಿ ಚೀಲಗಳಲ್ಲಿ ತುಂಬಿ ವಿತರಿಸುವ ಪ್ರಕ್ರಿಯೆಯಲ್ಲಿ ಸ್ವಲ್ಪ ವಿಳಂಬವಾಗಿದೆ. ಆದರೂ ಫಲಾನುಭವಿಗಳಿಗೆ ಯಾವುದೇ ತಿಂಗಳ ಪಡಿತರ ತಪ್ಪುವುದಿಲ್ಲ. ಬಾಕಿ ಇರುವ ಪಡಿತರವನ್ನು ಮುಂದಿನ ತಿಂಗಳುಗಳಿಗೆ ಸೇರಿಸಿ ಸಂಪೂರ್ಣವಾಗಿ ವಿತರಿಸಲಾಗುವುದು," ಎಂದು ಭರವಸೆ ನೀಡಿದರು.

ಇಂದಿರಾ ಕಿಟ್ ಯೋಜನೆಗೂ ಈ ಪ್ರಕ್ರಿಯೆಗೂ ಯಾವುದೇ ಸಂಬಂಧವಿಲ್ಲ ಎಂದು ಸ್ಪಷ್ಟಪಡಿಸಿದ ಅವರು, ಆಹಾರ ಧಾನ್ಯಗಳನ್ನು ಸರಿಯಾದ ಸಮಯಕ್ಕೆ ಗ್ರಾಹಕರಿಗೆ ತಲುಪಿಸಲು ಸರ್ಕಾರ ಕ್ರಮ ಕೈಗೊಂಡಿದೆ ಎಂದು ತಿಳಿಸಿದರು.

"ರಾಗಿಯನ್ನು ಶುಚಿಗೊಳಿಸುವ ಕಾರ್ಯದಲ್ಲಿ ತಡವಾಗಿದ್ದು, ಸರಿಯಾದ ಕ್ರಮದಲ್ಲಿ ಚೀಲ ತುಂಬುವ ಕಾರ್ಯ ಪೂರ್ಣಗೊಳಿಸಿ

# ಬೀದಿದೀಪ ದೂರು ದಾಖಲಿಸಲು ಸಹಾಯವಾಣಿ

ಬೆಂಗಳೂರು

ಬೆಂಗಳೂರು ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯ ರಾಜರಾಜೇಶ್ವರಿ ನಗರ (ವಲಯ–1) ಹಾಗೂ ಮಲ್ಲೇಶ್ವರಂ (ವಲಯ–2) ಪ್ರದೇಶಗಳಲ್ಲಿ ಬೀದಿ ದೀಪಗಳ ನಿರ್ವಹಣೆ ಕುರಿತು ಯಾವುದೇ ದೂರುಗಳಿದ್ದಲ್ಲಿ ಸಾರ್ವಜನಿಕರು ಕೆಳಕಂಡ ದೂರವಾಣಿ ಸಂಖ್ಯೆಗಳ ಮೂಲಕ ಸಂಪರ್ಕಿಸಿ ದೂರು ದಾಖಲಿಸಬಹುದಾಗಿದೆ ಎಂದು ನಗರ ಪಾಲಿಕೆ ತಿಳಿಸಿದೆ.

**ರಾಜರಾಜೇಶ್ವರಿ ನಗರ ವಲಯ-1**

ರಾಜರಾಜೇಶ್ವರಿ ನಗರ ವಿಧಾನಸಭಾ ಕ್ಷೇತ್ರ : 8073918395, 9611899159, ಯಶವಂತಪುರ ವಿಧಾನಸಭಾ ಕ್ಷೇತ್ರ : 8073918395, 9611899159, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ : 8073918395, 9611899159

**ಮಲ್ಲೇಶ್ವರಂ ವಲಯ-2**

ಮಹಾಲಕ್ಷ್ಮೀಪುರಂ ವಿಧಾನಸಭಾ ಕ್ಷೇತ್ರ : 9900408003, 7391048464, ಮಲ್ಲೇಶ್ವರಂ ವಿಧಾನಸಭಾ ಕ್ಷೇತ್ರ : 9900408003, 7391048464, ರಾಜಾಜಿನಗರ ವಿಧಾನಸಭಾ ಕ್ಷೇತ್ರ : 9900408003, 7391048464 ಪದ್ಮನಾಭನಗರ ವಿಧಾನಸಭಾ ಕ್ಷೇತ್ರ : 8001038330, 9686196776, ಬಸವನಗುಡಿ ವಿಧಾನಸಭಾ ಕ್ಷೇತ್ರ : 8001038330, 9686196776, ವಿಜಯನಗರ ವಿಧಾನಸಭಾ ಕ್ಷೇತ್ರ : 8001038330, 9686196776, ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರ : 8001038330, 9686196776, ಹೆಚ್ಚಿನ ಮಾಹಿತಿಗಾಗಿ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ನಾಗೇಶ್ ಅವರನ್ನು 9480688528 ಸಂಖ್ಯೆಯಲ್ಲಿ ಸಂಪರ್ಕಿಸಬಹುದಾಗಿದೆ.

# ಇಲಾಖೆಗಳ ಸಮನ್ವಯತೆಗೆ ಜಿಲ್ಲಾಧಿಕಾರಿ ಸೂಚನೆ




ತುಮಕೂರು

ಮುಂಗಾರು ಅವಧಿಯಲ್ಲಿ ಸಾರ್ವಜನಿಕರ ಸುರಕ್ಷತೆ, ಆರೋಗ್ಯ ಹಾಗೂ ಮೂಲಸೌಕರ್ಯ ಸಂರಕ್ಷಣೆಗಾಗಿ ಇಲಾಖಾವಾರು ಸಮನ್ವಯದೊಂದಿಗೆ ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ನಡೆದ ತುಮಕೂರು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯ ಕ್ಷತೆವಹಿಸಿ ಮಾತನಾಡಿದ ಅವರು, ವಿಪತ್ತು ನಿರ್ವಹಣೆ ಕುರಿತಂತೆ ತುರ್ತು ಸಂದರ್ಭದಲ್ಲಿ ಜಿಲ್ಲಾ ಸಹಾಯವಾಣಿ ಸಂಖ್ಯೆ 7304975519, 0816–2213402ಕ್ಕೆ ಕರೆ ಮಾಡಲು ತಿಳಿಸಿದರು.

ಮುಂಗಾರು ಹಂಗಾಮಿನ ಹಿನ್ನೆಲೆಯಲ್ಲಿ ರೈತರಿಗೆ ಅಗತ್ಯವಿರುವ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಸಮರ್ಪಕ ಲಭ್ಯತೆ ಖಚಿತಪಡಿಸಿಕೊಳ್ಳುವಂತೆ ಕೃಷಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಮಳೆಯಿಂದ ಉಂಟಾಗುವ ಹಾನಿಗಳ ಕುರಿತು ತಾಲ್ಲೂಕುವಾರು ಮಾಹಿತಿ ಸಂಗ್ರಹಿಸಿ, ಮಾನವ ಹಾನಿ, ಜಾನುವಾರು ಹಾನಿ, ಮನೆ ಹಾನಿ ಸೇರಿದಂತೆ ಕೃಷಿ ಮತ್ತು ತೋಟಗಾರಿಕೆ ಬೆಳೆ ಹಾನಿಗಳ ವಿವರಗಳನ್ನು ತ್ವರಿತವಾಗಿ ದಾಖಲಿಸಿ ಪರಿಹಾರ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸರಬರಾಜು ವ್ಯತ್ಯಯವಾಗದಂತೆ ಅಗತ್ಯ ಕ್ರಮವಹಿಸುವಂತೆ ಸಂಬಂಧಿತ ಇಲಾಖೆಗಳ ಅಧಿಕಾರಿಗಳಿಗೆ ಸೂಚಿಸಿದ ಅವರು, ಸಾರ್ವಜನಿಕರಿಗೆ ಪೂರೈಕೆಯಾಗುವ ಕುಡಿಯುವ ನೀರಿನ ಗುಣಮಟ್ಟವನ್ನು ನಿಯಮಿತವಾಗಿ ಪರೀಕ್ಷಿಸುವುದರ ಜೊತೆಗೆ, ಸರ್ಕಾರಿ ವಸತಿ ನಿಲಯಗಳು ಹಾಗೂ ಹಾಸ್ಟೆಲ್‌ಗಳಲ್ಲಿ ಕುಡಿಯುವ ನೀರಿನ ಮಾದರಿಗಳನ್ನು ಪರಿಶೀಲಿಸಿ, ಕ್ಲೋರಿನೇಷನ್ ಪ್ರಕ್ರಿಯೆಯನ್ನು ಕಡ್ಡಾಯವಾಗಿ ಕೈಗೊಳ್ಳುವಂತೆ ತಿಳಿಸಿದರು.

ಮಳೆಗಾಲದಲ್ಲಿ ಆರೋಗ್ಯ ಸಮಸ್ಯೆಗಳು ಉಂಟಾಗದಂತೆ ಚರಂಡಿ ಮತ್ತು ತ್ಯಾಜ್ಯ ವಿಲೇವಾರಿ ಪ್ರದೇಶಗಳ ಸ್ವಚ್ಛತೆ, ಕ್ಲೀನಿಂಗ್ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಸೂಚಿಸಿದ ಜಿಲ್ಲಾಧಿಕಾರಿಗಳು, ಕಲುಷಿತ ನೀರು ಕುಡಿಯುವ ನೀರಿನ ಮೂಲಗಳಿಗೆ ಸೇರ್ಪಡೆಯಾಗದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಎಲ್ಲಾ ತಹಶೀಲ್ದಾರರು, ತಾಲೂಕು ಕಾರ್ಯ ನಿರ್ವಹಣಾಧಿಕಾರಿಗಳು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಎಲ್ಲರೂ ಕೇಂದ್ರ ಸ್ಥಾನದಲ್ಲಿ ಇರಬೇಕು. ಮಳೆ ಮುನ್ಸೂಚನೆ ಇರುವುದರಿಂದ ಏನೇ ಅನಾಹುತಗಳಾದರು ತಕ್ಷಣವೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನಾ ವರದಿಯನ್ನು ಪ್ರಾಧಿಕಾರಕ್ಕೆ ಕಳಿಸಿಕೊಡಲು ಸೂಚಿಸಿದರು.

ಸಭೆಯಲ್ಲಿ ಪ್ರಸ್ತುತ ಮುಂಗಾರು ಹಂಗಾಮಿನ ಋತುಮಾನ ಪರಿಸ್ಥಿತಿಯನ್ನು ಸಮಗ್ರವಾಗಿ ಪರಿಶೀಲಿಸಿ, ಜಿಲ್ಲೆಯಾದ್ಯಂತ ಕೈಗೊಳ್ಳಬೇಕಾದ ಮುನ್ನೆಚ್ಚರಿಕಾ ಹಾಗೂ ತುರ್ತು ಕ್ರಮಗಳ ಕುರಿತು ಚರ್ಚಿಸಲಾಯಿತು.

ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಸಂಬಂಧಿಸಿದ ಅಧಿಕಾರಿಗಳು ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆಯಲ್ಲಿ ಭಾಗವಹಿಸಿದ್ದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ತಿಪ್ಪೇಸ್ವಾಮಿ, ತುಮಕೂರು ಉಪವಿಭಾಗದ ಅಧಿಕಾರಿ ನಹೀದಾ ಜ಼ಮ್ ಜ಼ಮ್, ಮಹಾನಗರ ಪಾಲಿಕೆ ಆಯುಕ್ತೆ ಶುಭ, ಯೋಜನಾ ನಿರ್ದೇಶಕ ಯೋಗಾನಂದ, ಡಿಹೆಚ್‌ಒ ಡಾ: ಚಂದ್ರಶೇಖರ್ ಸೇರಿದಂತೆ ಇತರೆ ಜಿಲ್ಲಾ ಮಟ್ಟದ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

# ಯುವಕರ ಎರಡು ಗುಂಪುಗಳ ನಡುವೆ ಗಲಾಟೆ

ಬಂಗಾರಪೇಟೆ

ನಗರದ ಗಂಗಮ್ಮನಪಾಳ್ಯ ಸಮೀಪದ ಕ್ರಿಕೆಟ್ ಮೈದಾನದಲ್ಲಿ ಹುಟ್ಟುಹಬ್ಬ ಆಚರಣೆ ವೇಳೆ ಯುವಕರ ಎರಡು ಗುಂಪುಗಳ ನಡುವೆ ಗಲಾಟೆ ನಡೆದ ಘಟನೆ ಸೋಮವಾರ ಸಂಜೆ ನಡೆದಿದೆ.

ಮಾಹಿತಿಯ ಪ್ರಕಾರ, ಸಂಜೆ ಸುಮಾರು 6 ಗಂಟೆ ವೇಳೆಗೆ ಒಂದು ಗುಂಪಿನ ಯುವಕರು ಮೈದಾನದಲ್ಲಿ ಹುಟ್ಟುಹಬ್ಬ ಆಚರಣೆ ಮಾಡುತ್ತಿದ್ದರು. ಇದೇ ವೇಳೆ ಮತ್ತೊಂದು ಗುಂಪಿನ ಯುವಕರು ಕ್ರಿಕೆಟ್ ಆಡುತ್ತಿದ್ದರು. ಈ ಸಂದರ್ಭದಲ್ಲಿ ಕ್ಷುಲ್ಲಕ ವಿಚಾರಕ್ಕೆ ಮಾತಿನ ಚಕಮಕಿ ಆರಂಭವಾಗಿ ನಂತರ ಪರಸ್ಪರ ಹೊಡೆದಾಟಕ್ಕೆ ತಿರುಗಿದೆ ಎಂದು ತಿಳಿದುಬಂದಿದೆ.

ಗಲಾಟೆ ತೀವ್ರ ಸ್ವರೂಪ ಪಡೆಯುತ್ತಿದ್ದಂತೆ ಸ್ಥಳೀಯರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ತಕ್ಷಣವೇ ಪೊಲೀಸ್ ವೃತ್ತ ನಿರೀಕ್ಷಕರಾದ ರವಿಕುಮಾರ್ ಹಾಗೂ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದಿದ್ದಾರೆ.

ಘಟನೆಯಲ್ಲಿ ಒಬ್ಬ ಯುವಕನ ಮುಖಕ್ಕೆ ಗಾಯಗಳಾಗಿದ್ದು, ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ತಿಳಿದುಬಂದಿದೆ. ನಂತರ ಕೆಜಿಎಫ್ ಉಪ ವಿಭಾಗದ ಪೊಲೀಸ್ ಉಪಾಧೀಕ್ಷಕರಾದ ಲಕ್ಷ್ಮಯ್ಯ ಅವರು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಸಂಬಂಧ ಬಂಗಾರಪೇಟೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.

# ಪ್ರತಿ 2.5 ಗಂಟೆಗೊಂದು ಅಪರಾಧ ಪ್ರಕರಣ

ಬೆಂಗಳೂರು

ದೇಶದ ತಂತ್ರಜ್ಞಾನ ರಾಜಧಾನಿ, ಸಿಲಿಕಾನ್ ಸಿಟಿ ಎಂದೆಲ್ಲ ಖ್ಯಾತಿ ಪಡೆದಿರುವ ಬೆಂಗಳೂರು ಈಗ ಆರ್ಥಿಕ ಅಪರಾಧಗಳ ಕೇಂದ್ರವಾಗಿ ಹೊರಹೊಮ್ಮುತ್ತಿದೆ! ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೋ ಬಿಡುಗಡೆ ಮಾಡಿರುವ 'ಕ್ರೈಮ್ ಇನ್ ಇಂಡಿಯಾ 2024' ವರದಿಯ ಪ್ರಕಾರ, ನಗರದಲ್ಲಿ ಕಳೆದ ಮೂರು ವರ್ಷಗಳಲ್ಲಿ (2022 ರಿಂದ 2024) ಪ್ರತಿ 2.5 ಗಂಟೆಗೆ ಸರಾಸರಿ ಒಂದರಂತೆ ಆರ್ಥಿಕ ಅಪರಾಧ ಪ್ರಕರಣಗಳು ದಾಖಲಾಗಿವೆ.

ನಕಲಿ ದಾಖಲೆ ಸೃಷ್ಟಿ, ವಂಚನೆ, ಹಣಕಾಸು ಹಗರಣಗಳು ಮತ್ತು ವೈಟ್ ಕಾಲರ್ ಅಪರಾಧಗಳು ಸೇರಿ ಕಳೆದ 3 ವರ್ಷಗಳಲ್ಲಿ ಒಟ್ಟು 10,580 ಪ್ರಕರಣಗಳು ದಾಖಲಾಗಿವೆ. 2024ರ ಒಂದೇ ವರ್ಷದಲ್ಲಿ ಬೆಂಗಳೂರಿನಲ್ಲಿ 3,477 ಆರ್ಥಿಕ ಅಪರಾಧಗಳು ದಾಖಲಾಗಿವೆ.

ಇದರೊಂದಿಗೆ, ದೇಶದಲ್ಲೇ ಅತಿ ಹೆಚ್ಚು ಆರ್ಥಿಕ ವಂಚನೆ ನಡೆಯುವ ಟಾಪ್ 5 ಮಹಾನಗರಗಳ ಪಟ್ಟಿಗೆ ಬೆಂಗಳೂರು ಸೇರಿದೆ.

ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೋ ಬಿಡುಗಡೆ ಮಾಡಿರುವ ಅಂಕಿ–ಅಂಶಗಳನ್ನು ಗಮನಿಸಿದರೆ ಬೆಂಗಳೂರಿನ ಅಪರಾಧದ ಸ್ವರೂಪವೇ ಬದಲಾಗುತ್ತಿರುವುದು ಸ್ಪಷ್ಟವಾಗಿದೆ. ಸಾಮಾನ್ಯ ಕಳ್ಳತನ, ದರೋಡೆ ಮತ್ತು ದೈಹಿಕ ದೌರ್ಜನ್ಯಗಳಿಗಿಂತಲೂ ಸಾರ್ವಜನಿಕರನ್ನು ಡಿಜಿಟಲ್ ಹಾಗೂ ಆರ್ಥಿಕವಾಗಿ ವಂಚಿಸುವ ಜಾಲಗಳು ಇಲ್ಲಿ ಹೆಚ್ಚಾಗುತ್ತಿವೆ.

ನಗರದಲ್ಲಿ ದೊಡ್ಡ ಮಟ್ಟದ ಡಿಜಿಟಲ್ ಆರ್ಥಿಕತೆ, ಆನ್‌ಲೈನ್ ಬ್ಯಾಂಕಿಂಗ್ ಬಳಕೆ ಮತ್ತು ಹೂಡಿಕೆಯ ಸಂಸ್ಕೃತಿ ಹೆಚ್ಚಿರುವುದು ಖದೀಮರಿಗೆ ವರದಾನವಾಗಿದೆ.

ನಕಲಿ ಹೂಡಿಕೆ ಪ್ಲಾಟ್‌ಫಾರ್ಮ್‌ಗಳು, ಕ್ರಿಪ್ಟೋಕರೆನ್ಸಿ ಹಗರಣಗಳು, ಲೋನ್ ಆಪ್ ಮುಖಾಂತರ ಬ್ಲ್ಯಾಕ್‌ಮೇಲ್ ಮಾಡುವುದು ಮತ್ತು ಟ್ರೇಡಿಂಗ್ ಆಪ್‌ಗಳ ಹೆಸರಲ್ಲಿ ಜನರನ್ನು ಲೂಟಿ ಮಾಡಲಾಗುತ್ತಿದೆ.

# ಪ್ರಗತಿಪರ ಚಿಂತನೆಯ ಯತಿಗಳೆಂದರೆ ಪೇಜಾವರಶ್ರೀ: ಈಶ್ವರಖಂಡ್ರೆ

ನೀಲಾವರ (ಉಡುಪಿ)

ಪೇಜಾವರ ಮಠದ ಪೀಠಾಧಿಪತಿಗಳಾಗಿದ್ದ ಕೀರ್ತಿಶೇಷ ಪೇಜಾವರ ಶ್ರೀಗಳು ತಮ್ಮ ಪ್ರಗತಿಪರ ಚಿಂತನೆಗಳಿಂದ ನಾಡಿನ ಜನರ ಮನಗೆದ್ದಿದ್ದರು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಹೇಳಿದ್ದಾರೆ.



ಉಡುಪಿ ಬಳಿಯ ನೀಲಾವರದಲ್ಲಿ ಪೇಜಾವರ ಶ್ರೀಗಳ ಸ್ಮೃತಿವನ ಉದ್ಘಾಟಿಸಿ ಮಾತನಾಡಿದ ಅವರು, ಪ್ರಕೃತಿ, ಪರಿಸರ ಸಂರಕ್ಷಣೆಯ ಕ್ಷೇತ್ರಕ್ಕೂ ಶ್ರೀಗಳು ನೀಡಿರುವ ಕೊಡುಗೆ ಅಪಾರವಾದ್ದು, ಅವರು ನಕ್ಸಲರ ಮನವೊಲಿಸುವ ಕಾರ್ಯವನ್ನೂ ಮಾಡಿದ್ದರು, ಶಾಂತಿಯನ್ನು ಪ್ರತಿಪಾದಿಸುತ್ತಿದ್ದರು ಎಂದರು.

33ನೇ ಯತಿಗಳಾಗಿದ್ದ ಶ್ರೀ ಪೇಜಾವರ ಶ್ರೀಗಳ ಹೆಸರಿನ ಸ್ಮೃತಿವನ ಉದ್ಘಾಟಿಸುತ್ತಿರುವುದು ತಮ್ಮ ಸೌಭಾಗ್ಯ ಎಂದ ಅವರು, ನೀಲಾವರದ ಸ್ಮೃತಿವನದ ಸಮೀಪದಲ್ಲೇ 2 ಎಕರೆ ಪ್ರದೇಶದಲ್ಲಿ ಮತ್ತೊಂದು ವನ ನಿರ್ಮಿಸಲು ಮುಂದಾಗಿರುವ ಮಠಕ್ಕೆ 1 ಕೋಟಿ ರೂ. ಅನುದಾನ ನೀಡುವ ಭರವಸೆ ನೀಡಿದರು. ಇದೇ ವೇಳೆ ಕಳೆದ ಆರು ತಿಂಗಳ ಹಿಂದೆ ನಡೆದಾಡುವ ದೇವರು ಎಂದೇ ಖ್ಯಾತರಾಗಿದ್ದ ಸಿದ್ದಗಂಗಾಮಠದ ಡಾ. ಶ್ರೀ ಶಿವಕುಮಾರ ಸ್ವಾಮೀಜಿ ಅವರ ಹೆಸರಿನಲ್ಲೂ ಸ್ಮೃತಿವನ ಉದ್ಘಾಟಿಸಿದ್ದನ್ನು ಸ್ಮರಿಸಿದರು.

ಪ್ರಕೃತಿ ಪರಿಸರ ಉಳಿದರೆ ಮಾತ್ರ ಜಗತ್ತು ಉಳಿಯಲು ಸಾಧ್ಯವಿದೆ. ಪಶ್ಚಿಮಘಟ್ಟಗಳು ಮಳೆಯ ಮಾರುತಗಳನ್ನು ತಡೆದು ವ್ಯಾಪಕ ಮಳೆ ಸುರಿಸುತ್ತವೆ. ಇದು ಜೀವವೈವಿಧ್ಯದ 8ನೇ ನೆಚ್ಚಿನ ತಾಣವಾಗಿದ್ದು, ಹಲವು ಪ್ರಭೇದದ ಸಸ್ಯಸಂಕುಲ, ಕೀಟಸಂಕುಲ, ಜೀವಸಂಕುಲದ ತವರಾಗಿದೆ. ಇದನ್ನು ಸರ್ಕಾರ, ಅರಣ್ಯ ಇಲಾಖೆ ಮಾತ್ರ ರಕ್ಷಿಸಲು ಸಾಧ್ಯವಿಲ್ಲ. ಹೀಗಾಗಿ ಪ್ರತಿಯೊಬ್ಬರೂ ಪಶ್ಚಿಮ ಘಟ್ಟದ ಸಂರಕ್ಷಣೆಗೆ ಮುಂದಾಗಬೇಕು ಎಂದರು.

ತಾವು ಸಚಿವರಾದ ತರುವಾಯ ಬೆಂಗಳೂರಿನಲ್ಲಿ 10 ಸಾವಿರ ಕೋಟಿ ರೂ. ಬೆಲೆಬಾಳುವ 250 ಎಕರೆ ಸೇರಿದಂತೆ ಒಟ್ಟು 12500 ಎಕರೆ ಅರಣ್ಯ ಒತ್ತುವರಿ ತೆರವು ಮಾಡಿಸಿರುವುದಾಗಿ ಹೇಳಿದ ಅವರು, 50 ಸಾವಿರ ಕೋಟಿ ಬೆಲೆ ಬಾಳುವ ಅರಣ್ಯ ಭೂಮಿಯ ಮರು ವಶಕ್ಕೆ ಕಾನೂನು ಹೋರಾಟ ಮಾಡುತ್ತಿರುವುದಾಗಿ ಹೇಳಿದರು.

ಬೆಂಗಳೂರು ನಗರದ ಶ್ವಾಸತಾಣ ಸಂವರ್ಧನೆಗೆ ಕ್ರಮ: ಬೆಂಗಳೂರು ನಗರದಲ್ಲಿ ಉಸಿರಾಡಲೂ ಕಷ್ಟವಾಗಬಾರದು ಎಂದು ತಾವು ಅರಣ್ಯ ಸಚಿವರಾದ ತರುವಾಯ ಬೆಂಗಳೂರು ಯಲಹಂಕ ಬಳಿ 153 ಎಕರೆ ಪ್ರದೇಶದಲ್ಲಿ ವಿಶ್ವಗುರು ಬಸವಣ್ಣ ಬೃಹತ್ ಜೈವಿಕ ಉದ್ಯಾನ ಅಭಿವೃದ್ಧಿಪಡಿಸಲು ಕ್ರಮವಹಿಸಿದ್ದು, 50 ಕೋಟಿ ರೂ. ತೆಗೆದಿರಿಸಲಾಗಿದೆ ಎಂದರು.

ರಾಜ್ಯ 6395 ಆನೆಗಳೊಂದಿಗೆ ದೇಶದಲ್ಲೇ ಅತಿ ಹೆಚ್ಚು ಆನೆ ಇರುವ ರಾಜ್ಯವಾಗಿದೆ. ಅದೇ ರೀತಿ ಹುಲಿಯ ಸಂಖ್ಯೆಯಲ್ಲಿ 563 ಹುಲಿಗಳೊಂದಿಗೆ 2ನೇ ಸ್ಥಾನದಲ್ಲಿದೆ. ಅದರ ಜೊತೆಗೆ ಮಾನವ–ಆನೆ ಸಂಘರ್ಷವೂ ಹೆಚ್ಚಾಗಿದೆ. ಹೀಗಾಗಿ ಈ ಸಂಘರ್ಷ ತಗ್ಗಿಸಲು ಅತ್ಯಾಧುನಿಕ ತಂತ್ರಜ್ಞಾನ ಬಳಕೆ ಮಾಡುತ್ತಿರುವುದಾಗಿ ಹೇಳಿದರು.

ಪೇಜಾವರದ ಶ್ರೀ ವಿಶ್ವ ಪ್ರಸನ್ನ ಶ್ರೀಪಾದಂಗಳು ಮಾತನಾಡಿ, ಪೇಜಾವರ ಶ್ರೀಗಳ ಸ್ಮೃತಿವನ ಸಾಕಾರಕ್ಕೆ ಸಹಕಾರ ನೀಡಿದ ಅರಣ್ಯ ಸಚಿವ ಈಶ್ವರ ಬಿ ಖಂಡ್ರೆ ಅವರನ್ನು ಅಭಿನಂದಿಸಿದರು.

2031 ಶ್ರೀ ಪೇಜಾವರ ಮ ಜನ್ಮ ಶತಮಾನೋತ್ಸವ ವರ್ಷವಾಗಿದ್ದು, ಅವರ ಹೆಸರಿನಲ್ಲಿ ಒಂದು ಮಹಾವನ ನಿರ್ಮಿಸುವ ಕನಸಿದೆ. ಸರ್ಕಾರ 1 ಸಾವಿರ ಎಕರೆ ಬರಡು ಭೂಮಿ ನೀಡಿದರೂ ಮಹಾವನ ನಿರ್ಮಿಸಲು ಶ್ರೀಮಠ ಸಿದ್ಧ ಎಂದು ಹೇಳಿದರು. ಇದಕ್ಕೆ ಸ್ಪಂದಿಸಿದ ಸಚಿವ ಈಶ್ವರ ಖಂಡ್ರೆ ಈ ಬಗ್ಗೆ ಸರ್ಕಾರದ ಮಟ್ಟದಲ್ಲಿ ಚರ್ಚಿಸಿ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಹೇಳಿದರು.

ಶಾಸಕರಾದ ಯಶಪಾಲ್ ಸುವರ್ಣ, ಹೆಚ್ಚುವರಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮನೋಜ್ ತ್ರಿಪಾಠಿ, ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಕರಿಕಳನ್ ಮತ್ತಿತರರು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

# 'ಎಸ್‌ಐಆರ್‌ನಿಂದ ಮತದಾರರ ಹಕ್ಕು ಕಸಿಯುವ ಕೆಲಸ'

ದೇವನಹಳ್ಳಿ

ಕೇಂದ್ರದ ಬಿಜೆಪಿ ಸರ್ಕಾರವು ಮತದಾರರ ಪಟ್ಟಿಯಿಂದ ಎಸ್‌ಐಆರ್ ಪರಿಶೀಲನೆ ಮೂಲಕ ಸಾರ್ವಜನಿಕರ ಹೆಸರನ್ನು ಕೈಬಿಡುವ ಮೂಲಕ ಪ್ರಜಾಪ್ರಭುತ್ವವನ್ನು ಕಗ್ಗೊಲೆ ಮಾಡುತ್ತಿದೆ ಎಂದು ಆಹಾರ ಸಚಿವರಾದ ಕೆ. ಹೆಚ್. ಮುನಿಯಪ್ಪ ಗಂಭೀರ ಆರೋಪ ಮಾಡಿದ್ದಾರೆ.

"ದಶಕಗಳಿಂದ ಮತ ಚಲಾಯಿಸುತ್ತಿರುವವರ ಹೆಸರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕುವ ಕಾರ್ಯಕ್ರಮ ಅನ್ಯಾಯಯುತವಾದುದು. ಇದು ಸಂವಿಧಾನಕ್ಕೆ ಮಾಡುತ್ತಿರುವ ದ್ರೋಹ," ಎಂದು ಅವರು ಕಿಡಿಕಾರಿದರು.

ಈ ಅಕ್ರಮಗಳ ವಿರುದ್ಧ ಹಾಗೂ ದೇಶದಲ್ಲಿ ಹೆಚ್ಚುತ್ತಿರುವ ಬೆಲೆ ಏರಿಕೆಯನ್ನು ಖಂಡಿಸಿ ಮೇ 30ರಂದು ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಕಾಂಗ್ರೆಸ್ ಪಕ್ಷದಿಂದ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ತಿಳಿಸಿದರು.



ಪಕ್ಷದ ಉನ್ನತ ನಾಯಕರ ಮಾರ್ಗದರ್ಶನದಲ್ಲಿ ಬೂತ್ ಮಟ್ಟದ ಕಾರ್ಯಕರ್ತರು ಮತದಾರರ ಪಟ್ಟಿ ಪರಿಶೀಲನೆ ಮತ್ತು ಜನಜಾಗೃತಿ ಅಭಿಯಾನ ಕೈಗೊಳ್ಳಲಿದ್ದಾರೆ ಎಂದು ಹೇಳಿದರು.

"ಬಿಜೆಪಿ ಸರ್ಕಾರ ಕೇಂದ್ರದಲ್ಲಿ ನಡೆಸುತ್ತಿರುವ ಇಂತಹ ವ್ಯವಹಾರ ನಮಗೆಲ್ಲಾ ತುಂಬಾ ಬೇಸರ ತಂದಿದೆ. ಇಡೀ ದೇಶದ ಜನರಿಗೆ ಇದು ಅನ್ಯಾಯ ಮಾಡುತ್ತಿದೆ. ಒಬ್ಬ ವ್ಯಕ್ತಿ ತನ್ನ ಗ್ರಾಮದಲ್ಲಿ ಅಥವಾ ನಗರದಲ್ಲಿ ಹತ್ತಾರು ವರ್ಷಗಳಿಂದ ವಾಸವಿದ್ದು, ಅನೇಕ ಚುನಾವಣೆಗಳಲ್ಲಿ ಮತ ಚಲಾಯಿಸಿದ್ದರೂ ಅವರ ಮತವನ್ನು ಕಸಿಯುವಂತಹ ಕೆಲಸ ನಡೆಯುತ್ತಿದೆ. ಇದು ನಮ್ಮ ದೇಶದ ದುರದೃಷ್ಟಕರ ಸಂಗತಿ," ಎಂದು ಹೇಳಿದರು.

"ಇದು ಪ್ರಜಾಪ್ರಭುತ್ವದ ಕೊಲೆಯಾಗಿದೆ ಹಾಗೂ ಸಂವಿಧಾನವನ್ನು ಕಗ್ಗೊಲೆ ಮಾಡುವ ಕೆಲಸವಾಗಿದೆ," ಎಂದು ಆರೋಪಿಸಿದರು.

ಕಾಂಗ್ರೆಸ್ ಪಕ್ಷದ ರಾಜ್ಯಾಧ್ಯಕ್ಷರಾದ ಡಿ. ಕೆ. ಶಿವಕುಮಾರ್, ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಹಾಗೂ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಂದೀಪ್ ಸಿಂಗ್ ಸುರ್ಜೇವಾಲಾ ಅವರ ನೇತೃತ್ವದಲ್ಲಿ ಎರಡು ದಿನಗಳ ಕಾರ್ಯಾಗಾರ ನಡೆಸಲಾಗಿದೆ ಎಂದು ಹೇಳಿದರು.

ಕಾರ್ಯಾಗಾರದಲ್ಲಿ ಶಾಸಕರು, ಸಚಿವರು, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರು, ಕೆಪಿಸಿಸಿ ಪದಾಧಿಕಾರಿಗಳು, ಗ್ಯಾರಂಟಿ ಯೋಜನೆಗಳ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು, ಬೂತ್ ಮಟ್ಟದ ಕಾರ್ಯಕರ್ತರು ಮತ್ತು ನಿಗಮ ಮಂಡಳಿ ಅಧ್ಯಕ್ಷರು ಭಾಗವಹಿಸಿ ಮತದಾರರ ಹಕ್ಕು ರಕ್ಷಣೆ ಕುರಿತು ಸವಿಸ್ತಾರ ಚರ್ಚೆ ನಡೆಸಿದ್ದಾರೆ ಎಂದು ವಿವರಿಸಿದರು.

"ಮತದಾರರ ಹಕ್ಕು ರಕ್ಷಣೆ ಹೇಗೆ ಮಾಡಬೇಕು ಎಂಬುದರ ಕುರಿತು ಕಾರ್ಯಕರ್ತರಿಗೆ ಮಾರ್ಗದರ್ಶನ ನೀಡಲಾಗಿದೆ. ಬೂತ್ ಮಟ್ಟದ ಅಧಿಕಾರಿಗಳ ಮೂಲಕ ಗ್ರಾಮೀಣ ಭಾಗದ ಜನರಿಗೂ ಜಾಗೃತಿ ಮೂಡಿಸಲಾಗುವುದು," ಎಂದು ತಿಳಿಸಿದರು.

"ನಿಮ್ಮ ಮತವನ್ನು ಕಸಿದುಕೊಳ್ಳುವ ಕೆಲಸ ನಡೆಯುತ್ತಿದೆ. ಬಿಜೆಪಿ ವಿರುದ್ಧ ಮಾತನಾಡಿದರೂ ಅಥವಾ ಮಾಧ್ಯಮಗಳು ಪ್ರಶ್ನೆ ಮಾಡಿದರೂ ಮತ ಹಕ್ಕಿಗೆ ಧಕ್ಕೆಯಾಗುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ," ಎಂದು ಸಚಿವರು ಆರೋಪಿಸಿದರು.

# ಕೋಲಾರದಲ್ಲಿ ಅಕ್ರಮ ಕಲ್ಲು ಗಣಿಗಾರಿಕೆ: ಲೋಕಾಯುಕ್ತ ದಾಳಿ, ದಾಖಲೆ ವಶ

ಕೋಲಾರ

ಕೋಲಾರ ತಾಲ್ಲೂಕಿನ ವಕ್ಕಲೇರಿ ಹೋಬಳಿಯ ತಲಗುಂದ ಗ್ರಾಮದ ಸರ್ವೆ ನಂ. 3 ಹಾಗೂ ಸುಗಟೂರು ಹೋಬಳಿಯ ತಲಗುಂದಪುರಹಳ್ಳಿ ಗ್ರಾಮದ ಸರ್ವೆ ನಂ. 34ರಲ್ಲಿ ವ್ಯಾಪಕ ಪ್ರಮಾಣದಲ್ಲಿ ಅಕ್ರಮ ಕಲ್ಲು ಗಣಿಗಾರಿಕೆ ನಡೆಯುತ್ತಿರುವ ಆರೋಪದ ಹಿನ್ನೆಲೆಯಲ್ಲಿ ಕರ್ನಾಟಕ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿ ಪರಿಶೀಲನೆ ಕೈಗೊಂಡಿದ್ದಾರೆ.

ಸುಮಾರು ಹತ್ತಾರು ಎಕರೆ ಸರ್ಕಾರಿ ಗುಡ್ಡದ ಜಮೀನಿನಲ್ಲಿ ಸಂಬಂಧಪಟ್ಟ ಇಲಾಖೆಗಳಿಂದ ಯಾವುದೇ ಅಧಿಕೃತ ಪರವಾನಗಿ ಅಥವಾ ಗುತ್ತಿಗೆ ಪಡೆಯದೇ ಹಲವು ವರ್ಷಗಳಿಂದ ಕಾನೂನುಬಾಹಿರವಾಗಿ ಕಲ್ಲು ಗಣಿಗಾರಿಕೆ ನಡೆಸಲಾಗುತ್ತಿದೆ ಎಂಬ ಮಾಹಿತಿ ಲೋಕಾಯುಕ್ತಕ್ಕೆ ಲಭ್ಯವಾಗಿತ್ತು.



ಕಂಪ್ರೆಸರ್ ವಾಹನಗಳು, ಕ್ರೇನುಗಳು, ಯಂತ್ರೋಪಕರಣಗಳು ಹಾಗೂ ರಸಾಯನಿಕ ಟ್ರಾಕ್ಟರ್‌ಗಳು ಸೇರಿದಂತೆ ವಿವಿಧ ಕೇಪು ತೂಟಾಗಳನ್ನು ಬಳಸಿ ಅಕ್ರಮ ಗಣಿಗಾರಿಕೆ ನಡೆಸಲಾಗುತ್ತಿದೆ ಎನ್ನಲಾಗಿದೆ.

ಈ ಕುರಿತು ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು ಯಾವುದೇ ಕ್ರಮ ಕೈಗೊಳ್ಳದೇ, ಪರೋಕ್ಷವಾಗಿ ಅಕ್ರಮ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡುವ ಮೂಲಕ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟುಮಾಡುತ್ತಿದ್ದಾರೆ ಎಂಬ ಆರೋಪವೂ ಕೇಳಿಬಂದಿತ್ತು.

ಈ ಸಂಬಂಧ ಕೋಲಾರ ಕರ್ನಾಟಕ ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರಾದ ಸುನಿಲ್ ಕುಮಾರ್. ಬಿ. ಅವರು ಗೌರವಾನ್ವಿತ ಲೋಕಾಯುಕ್ತರಿಗೆ ವರದಿ ಸಲ್ಲಿಸಿದ್ದರು. ವರದಿ ಆಧರಿಸಿ ಗೌರವಾನ್ವಿತ ಲೋಕಾಯುಕ್ತರು ಸ್ವಯಂಪ್ರೇರಿತ ಪ್ರಕರಣ ದಾಖಲಿಸಿಕೊಂಡು ತನಿಖೆಗೆ ಆದೇಶಿಸಿದ್ದರು.

ಅದರಂತೆ, ಪ್ರಕರಣಕ್ಕೆ ಸಂಬಂಧಿಸಿದಂತೆ ಕೋಲಾರದ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಉಪ ನಿರ್ದೇಶಕರ ಕಚೇರಿ ಹಾಗೂ ಅಕ್ರಮ ಗಣಿಗಾರಿಕೆ ನಡೆಯುತ್ತಿದ್ದ ಸ್ಥಳಗಳಲ್ಲಿ ವಿಶೇಷ ಶೋಧ ಕಾರ್ಯ ನಡೆಸುವಂತೆ ಸೂಚನೆ ನೀಡಲಾಗಿತ್ತು.

ಈ ಹಿನ್ನೆಲೆಯಲ್ಲಿ ಮೇ 25, 2026ರಂದು ಕರ್ನಾಟಕ ಲೋಕಾಯುಕ್ತ ಕೋಲಾರ ಪೊಲೀಸ್ ಅಧೀಕ್ಷಕರಾದ ಂಟನಿಜಾನ್ ಜೆ.ಕೆ. ಅವರ ಮಾರ್ಗದರ್ಶನದಲ್ಲಿ ಡಿವೈಎಸ್‌ಪಿ ಸುನಿಲ್ ಕುಮಾರ್. ಬಿ. ಹಾಗೂ ಲೋಕಾಯುಕ್ತ ಸಿಬ್ಬಂದಿ ದಾಳಿ ನಡೆಸಿದರು.

ದಾಳಿಯ ವೇಳೆ ಸಂಬಂಧಪಟ್ಟ ಕೆಲವು ಪ್ರಮುಖ ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಸ್ಥಳ ಪರಿಶೀಲನೆಯ ಸಂದರ್ಭದಲ್ಲಿ ಅಕ್ರಮ ಕಲ್ಲು ಗಣಿಗಾರಿಕೆ ನಡೆಯುತ್ತಿರುವುದು ಪತ್ತೆಯಾಗಿದೆ ಎಂದು ಮೂಲಗಳು ತಿಳಿಸಿವೆ. ಪ್ರಕರಣದ ಕುರಿತು ಹೆಚ್ಚಿನ ತನಿಖೆ ಮುಂದುವರಿದಿದೆ.

27/05/2026
# ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ‘ಚರಂಡಿಗಳ ಹೂಳೆತ್ತಿದ ತ್ಯಾಜ್ಯ ಎರಡು ದಿನದಲ್ಲಿ ತೆರವುಗೊಳಿಸಿ’

ಬೆಂಗಳೂರು

ಬೆಂಗಳೂರು ಕೇಂದ್ರ ನಗರ ಪಾಲಿಕೆಯ ಆಯುಕ್ತರಾದ ರಾಜೇಂದ್ರ ಚೋಳನ್ ಅವರು ಇಂದು ಇಂಜಿನಿಯರಿಂಗ್ ವಿಭಾಗದ ಅಧಿಕಾರಿಗಳೊಂದಿಗೆ ವಿವಿಧ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.



ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಸನ್ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಅಭಿವೃದ್ಧಿ ಯೋಜನೆ ಹಾಗೂ ವಿಶೇಷ ಅಭಿವೃದ್ಧಿ ಯೋಜನೆಯಡಿ ರಸ್ತೆ ಪಕ್ಕದ ಚರಂಡಿಗಳ ಹೂಳೆತ್ತುವ ಕಾರ್ಯ, ಬೃಹತ್ ಮಳೆನೀರು ಗಾಲುವೆಗಳಲ್ಲಿ ಶೇಖರಣೆಯಾಗಿರುವ ಹೂಳನ್ನು ತೆರವುಗೊಳಿಸುವುದು, ಪಾದಚಾರಿ ಮಾರ್ಗಗಳ ಅಭಿವೃದ್ಧಿ ಹಾಗೂ ರಸ್ತೆ ಡಾಂಬರೀಕರಣ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ರಸ್ತೆಗಳ ಅಕ್ಕಪಕ್ಕದಲ್ಲಿನ ಚರಂಡಿಗಳಿಂದ ಹೂಳನ್ನು ತೆಗೆದು ವಾರಗಟ್ಟಲೆ ರಸ್ತೆ ಮೇಲೆ ಬಿಟ್ಟುಬಿಡುವುದರಿಂದ ಸಾರ್ವಜನಿಕರು ಹಾಗೂ ವಾಹನಗಳ ಸಂಚಾರಕ್ಕೆ ತೊಂದರೆಯಾಗುತ್ತಿದೆ. ಅಲ್ಲದೆ ಪಾದಚಾರಿ ಮಾರ್ಗಗಳ ಮೇಲೆ ತ್ಯಾಜ್ಯ ಬಿದ್ದಿರುವುದರಿಂದ ಜನರ ಆರೋಗ್ಯದ ಮೇಲೂ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ ಎಂದು ಹೇಳಿದರು.

ಆದ್ದರಿಂದ ಚರಂಡಿಗಳ ಹೂಳೆತ್ತಿದ ತ್ಯಾಜ್ಯವನ್ನು ಎರಡು ದಿನಗಳೊಳಗೆ ಕಡ್ಡಾಯವಾಗಿ ತೆರವುಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಚರಂಡಿ ಹೂಳೆತ್ತುವ ಕಾಮಗಾರಿಯನ್ನು ತುರ್ತು ಹಾಗೂ ಸಮರ್ಪಕವಾಗಿ ಕೈಗೊಳ್ಳುವ ಉದ್ದೇಶದಿಂದ ಅಭಿವೃದ್ಧಿ ಅಪರ ಆಯುಕ್ತರ ನೇತೃತ್ವದಲ್ಲಿ ಎರಡೂ ವಲಯಗಳ ಜಂಟಿ ಆಯುಕ್ತರು, ಮುಖ್ಯ ಇಂಜಿನಿಯರ್‌ಗಳು ಹಾಗೂ ಅಧೀಕ್ಷಕ ಅಭಿಯಂತರರು ತಲಾ 50 ಕಿಲೋಮೀಟರ್ ವ್ಯಾಪ್ತಿಯ ಕಾಮಗಾರಿಗಳ ಉಸ್ತುವಾರಿ ವಹಿಸಿಕೊಳ್ಳಬೇಕು ಎಂದು ಸೂಚಿಸಿದರು.

ಸ್ಥಳ ಪರಿಶೀಲನೆ ನಡೆಸಿ ಕಾಮಗಾರಿಗಳ ಗುಣಮಟ್ಟ ಹಾಗೂ ಪ್ರಗತಿಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

## ಬಿಜೆಪಿ ಸರ್ಕಾರ ಮಾಡಿದ ಡೀಮ್ಡ್ ಅರಣ್ಯ ತಪ್ಪು ಸರಿಪಡಿಸಲು ಪ್ರಾಮಾಣಿಕ ಯತ್ನ: ಈಶ್ವರಖಂಡ್ರೆ

ಕಾರ್ಕಳ

ಪರಿಭಾವಿತ (ಡೀಮ್ಡ್) ಅರಣ್ಯ ಪ್ರದೇಶಗಳಲ್ಲಿ ಸರ್ಕಾರಿ ಕಟ್ಟಡಗಳು, ಆಸ್ಪತ್ರೆಗಳು, ಅಂಗನವಾಡಿಗಳು ಸೇರಿದಂತೆ ಹಲವು ಸಾರ್ವಜನಿಕ ಸೌಕರ್ಯಗಳು ಸೇರಿರುವ ಹಿನ್ನೆಲೆಯಲ್ಲಿ, ಬಿಜೆಪಿ ಸರ್ಕಾರದ ಅವಧಿಯಲ್ಲಿ ನಡೆದ ತಪ್ಪುಗಳನ್ನು ಸರಿಪಡಿಸಲು ರಾಜ್ಯ ಸರ್ಕಾರ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ.

ಕಾರ್ಕಳದಲ್ಲಿ ವಲಯ ಅರಣ್ಯಾಧಿಕಾರಿಗಳ ಹಾಗೂ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಯವರ ನೂತನ ಕಟ್ಟಡವನ್ನು ಉದ್ಘಾಟಿಸಿ, ಅರಣ್ಯ ಹುತಾತ್ಮರಿಗೆ ಪುಷ್ಪನಮನ ಸಲ್ಲಿಸಿದ ಬಳಿಕ ಅವರು ಮಾತನಾಡಿದರು.



“ಡೀಮ್ಡ್ ಅರಣ್ಯ ಸಮಸ್ಯೆ ಪರಿಹರಿಸಲು ಕೊನೆಯ ಅವಕಾಶ ದೊರೆತಿದೆ. ಈ ಹಿನ್ನೆಲೆಯಲ್ಲಿ ಸುಪ್ರೀಂ ಕೋರ್ಟ್‌ಗೆ ಮರು ಮನವಿ ಸಲ್ಲಿಸಲು ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಸಮಿತಿಗಳನ್ನು ರಚಿಸಲಾಗಿದೆ,” ಎಂದು ಹೇಳಿದರು.

“ಮೊದಲ ಬಾರಿಗೆ ಸುಪ್ರೀಂ ಕೋರ್ಟ್‌ಗೆ ಪ್ರಮಾಣಪತ್ರ ಸಲ್ಲಿಸಿದಾಗ ಸುಮಾರು 9 ಲಕ್ಷ ಹೆಕ್ಟೇರ್ ಭೂಮಿಯನ್ನು ಡೀಮ್ಡ್ ಅರಣ್ಯ ಎಂದು ಗುರುತಿಸಲಾಗಿತ್ತು. ನಂತರ 2022ರಲ್ಲಿ ಸಲ್ಲಿಸಿದ ಪ್ರಮಾಣಪತ್ರದಲ್ಲಿ ಅದನ್ನು 3 ಲಕ್ಷ 33 ಸಾವಿರ ಹೆಕ್ಟೇರ್‌ಗೆ ಪರಿಷ್ಕರಿಸಲಾಯಿತು. ಆದರೆ ಸಮರ್ಪಕ ಸರ್ವೆ ಹಾಗೂ ಸ್ಥಳ ಪರಿಶೀಲನೆ ನಡೆಸದ ಕಾರಣ ಸರ್ಕಾರಿ ಕಟ್ಟಡಗಳು, ಶಾಲೆಗಳು, ಆಸ್ಪತ್ರೆಗಳು ಹಾಗೂ ಪಟ್ಟಾ ಭೂಮಿಗಳೂ ಡೀಮ್ಡ್ ಅರಣ್ಯ ವ್ಯಾಪ್ತಿಗೆ ಸೇರಿವೆ,” ಎಂದು ವಿವರಿಸಿದರು.

“ಇದರಿಂದ ಬಡ ಮತ್ತು ಮಧ್ಯಮ ವರ್ಗದ ಜನರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಈ ಲೋಪವನ್ನು ಸರಿಪಡಿಸುವುದು ಸರ್ಕಾರದ ಜವಾಬ್ದಾರಿ,” ಎಂದರು.

ಕುದುರೆಮುಖ ಕಬ್ಬಿಣದ ಅದಿರು ಕಂಪನಿಯು ಅರಣ್ಯ ಇಲಾಖೆಗೆ ಪಾವತಿಸಬೇಕಾದ ದಂಡ ಹಾಗೂ ಇತರೆ ಶುಲ್ಕಗಳ ಕುರಿತು ಮಾತನಾಡಿದ ಸಚಿವರು, “ಈ ಸಂಬಂಧ ಹೈಕೋರ್ಟ್ ನಿರ್ದೇಶನ ನೀಡಿದ್ದು, ನ್ಯಾಯಾಲಯದ ಆದೇಶದಂತೆ ಸರ್ಕಾರ ಕ್ರಮ ಕೈಗೊಳ್ಳಲಿದೆ,” ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಸಚಿವರು ವಲಯ ಅರಣ್ಯಾಧಿಕಾರಿಗಳ ಕಚೇರಿ ಆವರಣದಲ್ಲಿ ಸಸಿ ನೆಟ್ಟು ನೀರೆರೆದರು.

ಇದಕ್ಕೂ ಮುನ್ನ ಕಟೀಲು ದುರ್ಗಾ ಪರಮೇಶ್ವರಿ ದೇವಸ್ಥಾನಕ್ಕೆ ಭೇಟಿ ನೀಡಿದ ಈಶ್ವರ ಖಂಡ್ರೆ, ರಾಜ್ಯದಲ್ಲಿ ಉತ್ತಮ ಮಳೆ, ಬೆಳೆ ಹಾಗೂ ಸಮೃದ್ಧಿ ನೆಲೆಸಲಿ ಎಂದು ಪ್ರಾರ್ಥಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಕರಿಕಳನ್, ಕಮಲಾ ಕರಿಕಳನ್ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.


ಮುಂಚೂಣಿ ಸಿಬ್ಬಂದಿಗೆ ಸುರಕ್ಷತಾ ಸಲಕರಣೆ ಒದಗಿಸಲು ಸೂಚನೆ

ಅರಣ್ಯ ರಕ್ಷಣೆಯಲ್ಲಿ ಮುಂಚೂಣಿ ಸಿಬ್ಬಂದಿಯ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಅವರ ಸುರಕ್ಷತೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಚಿವ ಈಶ್ವರ ಖಂಡ್ರೆ ಸೂಚಿಸಿದರು.

ಕಾರ್ಕಳದಲ್ಲಿ ವಲಯ ಅರಣ್ಯಾಧಿಕಾರಿಗಳ ಕಚೇರಿ ಉದ್ಘಾಟಿಸಿದ ಬಳಿಕ ಅರಣ್ಯ ಸಿಬ್ಬಂದಿಗೆ ಒದಗಿಸಿರುವ ಆಧುನಿಕ ಹಾಗೂ ಹಗುರ ಬಂದೂಕುಗಳನ್ನು ಪರಿಶೀಲಿಸಿ ಮಾತನಾಡಿದ ಅವರು, ವಿದ್ಯುತ್ ಪ್ರವಹಿಸುವ ಕೈಗೋಲು, ಮಳೆಯಿಂದ ರಕ್ಷಿಸುವ ಜಾಕೆಟ್, ಶೂ ಸೇರಿದಂತೆ ಅಗತ್ಯ ಸುರಕ್ಷತಾ ಉಪಕರಣಗಳನ್ನು ಸಿಬ್ಬಂದಿಗೆ ಒದಗಿಸಬೇಕು ಎಂದು ಹೇಳಿದರು.

ಆನೆ ಕಾರ್ಯಪಡೆ, ಕಳ್ಳಬೇಟೆ ನಿಗ್ರಹ ಪಡೆ ಹಾಗೂ ಮುಂಚೂಣಿ ಸಿಬ್ಬಂದಿಗೆ ವಸತಿ ಸೌಲಭ್ಯ ಕಲ್ಪಿಸಿರುವುದರ ಬಗ್ಗೆ ಮಾಹಿತಿ ಪಡೆದ ಸಚಿವರು, ಅಪಾಯದ ನಡುವೆ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಗೆ ಅಪಾಯ ಭತ್ಯೆ ನೀಡಲಾಗುತ್ತಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಬಳಿಕ ಪ್ರವಾಸಿ ಮಂದಿರಕ್ಕೆ ತೆರಳಿದ ಸಚಿವರು ಪಕ್ಷದ ಕಾರ್ಯಕರ್ತರನ್ನು ಭೇಟಿ ಮಾಡಿ ಅಹವಾಲು ಸ್ವೀಕರಿಸಿದರು.



ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವನ್ನು ನಿರ್ವಹಿಸುತ್ತಿರುವ ಬಿಐಎಎಲ್ ಸಂಸ್ಥೆಯಲ್ಲಿ ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮ ಹೊಂದಿರುವ 13 ಶೇಕಡಾ ಹೂಡಿಕೆಗೆ 2025-26ನೇ ಸಾಲಿನಲ್ಲಿ 16.49 ಕೋಟಿ ಲಾಭಾಂಶ ಲಭಿಸಿದೆ. ಈ ಹಿನ್ನೆಲೆಯಲ್ಲಿ ಲಾಭಾಂಶದ ಚೆಕ್ ಅನ್ನು ಕಾವೇರಿ ನಿವಾಸದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಹಸ್ತಾಂತರಿಸಲಾಯಿತು. ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮದ ಪರವಾಗಿ ಬಿಐಎಎಲ್ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಡಾ. ಹರಿ ಕೆ. ಮರಾರ್ ಅವರು ಚೆಕ್ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಇದ್ದರು.

## ಮುಂಗಾರು ವಿಪತ್ತು ನಿರ್ವಹಣೆಗೆ ಅಣಕು ಪ್ರದರ್ಶನ

ಬೆಂಗಳೂರು

ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವರಾದ ಡಿ. ಕೆ. ಶಿವಕುಮಾರ್ ಅವರ ಮಾರ್ಗದರ್ಶನದಲ್ಲಿ ಹಾಗೂ ಬೆಂಗಳೂರು ಉತ್ತರ ನಗರ ಪಾಲಿಕೆಯ ಆಯುಕ್ತರು ಮತ್ತು ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ಪೊಮ್ಮಲ ಸುನೀಲ್ ಕುಮಾರ್ ಅವರ ಸೂಚನೆಯಂತೆ, ಅಪರ ಆಯುಕ್ತರು (ಕಂದಾಯ–ಪ್ರಭಾರ) ಹಾಗೂ ಜಂಟಿ ಆಯುಕ್ತರಾದ ಪಲ್ಲವಿ ಮತ್ತು ಜಂಟಿ ಆಯುಕ್ತರಾದ ಮೊಹಮ್ಮದ್ ನಯೀಂ ಮೊಮಿನ್ ಅವರ ನೇತೃತ್ವದಲ್ಲಿ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಮುಂಗಾರು ಮಳೆಯ ಪೂರ್ವಸಿದ್ಧತೆ ಹಾಗೂ “ವಿಪತ್ತು ನಿರ್ವಹಣೆ”ಗೆ ಸಂಬಂಧಿಸಿದಂತೆ ಯಲಹಂಕ ಕೆರೆಯಲ್ಲಿ ಅಣಕು ಪ್ರದರ್ಶನ ಮತ್ತು ಸನ್ನದ್ಧತಾ ಕಾರ್ಯಕ್ರಮ ನಡೆಸಲಾಯಿತು.



ಮುಂಗಾರು ಸಂದರ್ಭದಲ್ಲಿ ಯಾವುದೇ ರೀತಿಯ ತುರ್ತು ಪರಿಸ್ಥಿತಿಗಳನ್ನು ಸಮರ್ಥವಾಗಿ ಎದುರಿಸುವ ನಿಟ್ಟಿನಲ್ಲಿ ನಗರಪಾಲಿಕೆಯ ಅಧಿಕಾರಿಗಳು, ನಿಯಂತ್ರಣ ಕೊಠಡಿ ಸಿಬ್ಬಂದಿ, ರಾಷ್ಟ್ರೀಯ ವಿಪತ್ತು ಸ್ಪಂದನ ಪಡೆ, ರಾಜ್ಯ ವಿಪತ್ತು ಸ್ಪಂದನ ಪಡೆ, ಅಗ್ನಿಶಾಮಕ ಮತ್ತು ತುರ್ತುಸೇವೆಗಳು, ದೂರಸಂಪರ್ಕ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇಪ್ಪತ್ತನಾಲ್ಕು ಗಂಟೆಗಳ ಕಾಲ ಸನ್ನದ್ಧರಾಗಿರಲು ಕರೆ ನೀಡಲಾಯಿತು.

ಮಳೆಗಾಲದ ಸಿದ್ಧತೆಗಳ ಅಂಗವಾಗಿ ನಗರ ಪಾಲಿಕೆ ವ್ಯಾಪ್ತಿಯ ವಿವಿಧ ವಿಭಾಗಗಳ ಸಿಬ್ಬಂದಿ, ಯಂತ್ರೋಪಕರಣಗಳು ಹಾಗೂ ತುರ್ತು ಕಾರ್ಯಾಚರಣೆ ತಂಡಗಳ ಸನ್ನದ್ಧತೆಯನ್ನು ಪರಿಶೀಲಿಸಲಾಯಿತು. ವಿಶೇಷವಾಗಿ ಪ್ರವಾಹ ಪರಿಸ್ಥಿತಿ, ನೀರು ನಿಲುವು ಹಾಗೂ ತುರ್ತು ರಕ್ಷಣಾ ಕಾರ್ಯಾಚರಣೆಗಳಿಗೆ ಅಗತ್ಯವಿರುವ ಉಪಕರಣಗಳು ಮತ್ತು ಸಿಬ್ಬಂದಿಗಳ ಕಾರ್ಯಕ್ಷಮತೆಯನ್ನು ಅವಲೋಕಿಸಲಾಯಿತು.

ಜೊತೆಗೆ “ಸುವರ್ಣ ಸಮಯ” ಮಹತ್ವವನ್ನು ತಿಳಿಸುವ ಉದ್ದೇಶದಿಂದ ಹೃದಯ ಪುನಶ್ಚೇತನ ವಿಧಾನವನ್ನು ಪ್ರಾಯೋಗಿಕವಾಗಿ ಪ್ರದರ್ಶಿಸಲಾಯಿತು. ಮಗು, ಮಹಿಳೆ ಹಾಗೂ ಪುರುಷರಿಗೆ ಹೃದಯ ಪುನಶ್ಚೇತನ ವಿಧಾನ ನೀಡುವ ವಿಧಾನಗಳಲ್ಲಿನ ವ್ಯತ್ಯಾಸಗಳ ಕುರಿತು ಸಿಬ್ಬಂದಿ ಮತ್ತು ಸಾರ್ವಜನಿಕರಿಗೆ ವಿವರಿಸಲಾಯಿತು.

## ‘108 ಆಂಬ್ಯುಲೆನ್ಸ್ ಸೇವೆ ಇನ್ನು ಸರ್ಕಾರದ ಸುಪರ್ದಿಯಲ್ಲಿ’

ಬೆಂಗಳೂರು

“ಒಂದು ಕರೆ ನಮಗೆ, ತುರ್ತು ಸೇವೆ ನಿಮಗೆ” ಎಂಬ ಘೋಷವಾಕ್ಯದಡಿಯಲ್ಲಿ ದೇಶದಲ್ಲೇ ಪ್ರಥಮವಾಗಿ ಕರ್ನಾಟಕ ಸರ್ಕಾರದ ಆರೋಗ್ಯ ಇಲಾಖೆ 108 ಆಂಬ್ಯುಲೆನ್ಸ್ ಸೇವೆಯನ್ನು ನೇರವಾಗಿ ಸರ್ಕಾರದ ಸುಪರ್ದಿಯಲ್ಲಿ ನಡೆಸುವ ಮಹತ್ವದ ಕಾರ್ಯಕ್ಕೆ ಚಾಲನೆ ನೀಡಿದೆ ಎಂದು ಆರೋಗ್ಯ ಸಚಿವರಾದ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರ ಬೆಂಬಲ ಹಾಗೂ ಪ್ರೋತ್ಸಾಹದೊಂದಿಗೆ ಈ ಯೋಜನೆ ಜಾರಿಗೆ ಬಂದಿದೆ ಎಂದು ಹೇಳಿದರು.

2008ರಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ 108 ಸೇವೆಯನ್ನು ಆರಂಭಿಸಲಾಗಿತ್ತು. ಈವರೆಗೆ ಖಾಸಗಿ ಸಂಸ್ಥೆಯೊಂದು ಸೇವೆಯನ್ನು ನಿರ್ವಹಿಸುತ್ತಿತ್ತು. ಆದರೆ ಹಲವಾರು ಸಮಸ್ಯೆಗಳು ಎದುರಾಗುತ್ತಿದ್ದ ಹಿನ್ನೆಲೆಯಲ್ಲಿ



2025–26ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಈ ಸೇವೆಯನ್ನು ಉನ್ನತೀಕರಣ ಮಾಡಲಾಗುವುದು ಎಂದು ಮುಖ್ಯಮಂತ್ರಿ ಘೋಷಿಸಿದ್ದರು ಎಂದು ತಿಳಿಸಿದರು.

ನಂತರ ಸರ್ಕಾರವೇ ಈ ಸೇವೆಯನ್ನು ನೇರವಾಗಿ ನಿರ್ವಹಿಸಬೇಕು ಹಾಗೂ ಅತ್ಯಾಧುನಿಕ ವ್ಯವಸ್ಥೆಯನ್ನು ಅಳವಡಿಸಬೇಕು ಎಂದು ತೀರ್ಮಾನಿಸಿ ವಿವಿಧ ಮಾದರಿಗಳನ್ನು ಅಧ್ಯಯನ ಮಾಡಲಾಯಿತು. ಸಿಂಗಪುರದ ತುರ್ತು ಆರೋಗ್ಯ ಸೇವಾ ವ್ಯವಸ್ಥೆಯನ್ನೂ ಪರಿಶೀಲಿಸಿ, ಅದಕ್ಕೆ ಅನುಗುಣವಾಗಿ ರಾಜ್ಯದಲ್ಲಿ ಸುಸಜ್ಜಿತ ವ್ಯವಸ್ಥೆ ರೂಪಿಸಲಾಗಿದೆ ಎಂದು ವಿವರಿಸಿದರು.

ಈ ವ್ಯವಸ್ಥೆಯನ್ನು ಮೊದಲಿಗೆ ಚಾಮರಾಜನಗರದಲ್ಲಿ ಪ್ರಾಯೋಗಿಕವಾಗಿ ಜಾರಿಗೆ ತರಲಾಗಿತ್ತು. ಸರ್ಕಾರಿ ಸ್ವಾಮ್ಯದ ಸಿ–ಡಾಕ್ ಸಂಸ್ಥೆ ಅಗತ್ಯ ತಂತ್ರಾಂಶವನ್ನು ಸಿದ್ಧಪಡಿಸಿದ್ದು, ಈಗ ಸುಸಜ್ಜಿತ ಇಪ್ಪತ್ನಾಲ್ಕು ಗಂಟೆಗಳ ಕಮಾಂಡ್ ಮತ್ತು ಕಂಟ್ರೋಲ್ ಕೊಠಡಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದರು. ಹೊಸ ವ್ಯವಸ್ಥೆಯಲ್ಲಿ ಆಂಬ್ಯುಲೆನ್ಸ್ ಟ್ರ್ಯಾಕಿಂಗ್ ವ್ಯವಸ್ಥೆ ಅಳವಡಿಸಲಾಗಿದ್ದು, ತುರ್ತು ಸಂದರ್ಭಗಳಲ್ಲಿ ಆಂಬ್ಯುಲೆನ್ಸ್‌ನಲ್ಲಿಯೇ ವೈದ್ಯರನ್ನು ಸಂಪರ್ಕಿಸಲು ಅವಕಾಶ ಕಲ್ಪಿಸಲಾಗಿದೆ. ಜೊತೆಗೆ ಆಸ್ಪತ್ರೆಗಳಿಗೆ ಮುಂಚಿತವಾಗಿ ಮಾಹಿತಿ ರವಾನಿಸಿ ಅಗತ್ಯ ಸಿದ್ಧತೆ ಮಾಡಿಕೊಳ್ಳಲು ಸಹ ಸಾಧ್ಯವಾಗಲಿದೆ ಎಂದು ಹೇಳಿದರು.

## ಬಿಜೆಪಿಯ ಬೆಲೆ ಏರಿಕೆಯ ಬರೆ: ರೂ.110 ದಾಟಿದ ಪೆಟ್ರೋಲ್ ಬೆಲೆ, ಕಾಂಗ್ರೆಸ್ ವಾಗ್ದಾಳಿ

ಬೆಂಗಳೂರು

ಕೇಂದ್ರದ ಬಿಜೆಪಿ ಸರ್ಕಾರವು ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯನ್ನು ಸತತವಾಗಿ ಏರಿಸುವ ಮೂಲಕ ದೇಶದ ಜನಸಾಮಾನ್ಯರನ್ನು ಲೂಟಿ ಮಾಡುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಎಐಸಿಸಿ ಪ್ರಧಾನ ಕಾರ್ಯದರ್ಶಿ ಮತ್ತು ಕರ್ನಾಟಕ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ತೀವ್ರ ವಾಗ್ದಾಳಿ ನಡೆಸಿದ್ದಾರೆ.





ಜಂಟಿ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ನಾಯಕರು, “ಬಿಜೆಪಿಯ ಬೆಲೆ ಏರಿಕೆಯ ಬರೆ ಜನರ ಬದುಕನ್ನು ದುಸ್ತರಗೊಳಿಸಿದೆ. ಬೆಂಗಳೂರಿನಲ್ಲಿ ಪೆಟ್ರೋಲ್ ಬೆಲೆ ರೂ.110.93 ದಾಟಿದ್ದು, ದೇಶದ 78 ವರ್ಷಗಳ ಇತಿಹಾಸದಲ್ಲೇ ಇದು ಅಪರೂಪದ ಏರಿಕೆಯಾಗಿದೆ. ಕಳೆದ 12 ವರ್ಷಗಳಲ್ಲಿ ‘ಮೆಹಂಗಾಯ್ ಮ್ಯಾನ್ ಮೋದಿ’ ಆಡಳಿತದಲ್ಲಿ ರೂ.57 ಲಕ್ಷ ಕೋಟಿ ಲೂಟಿ ನಡೆದಿದೆ” ಎಂದು ಆರೋಪಿಸಿದ್ದಾರೆ.

ಕೇಂದ್ರದ ಬಿಜೆಪಿ ಸರ್ಕಾರವು ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯನ್ನು ಪ್ರತಿ ಲೀಟರ್‌ಗೆ ರೂ.7.52 ಹೆಚ್ಚಿಸುವ ಮೂಲಕ “ಇಂಧನ ಲೂಟ” ಆರಂಭಿಸಿದೆ.

ಕಳೆದ 11 ದಿನಗಳು ವೇತನ ವರ್ಗ, ರೈತರು, ಬಡವರು, ಗೃಹಿಣಿಯರು, ಸಣ್ಣ ಉದ್ಯಮಿಗಳು ಹಾಗೂ ಸಾಮಾನ್ಯ ಜನರ ಪಾಲಿಗೆ ಅತ್ಯಂತ ಸಂಕಷ್ಟದ ದಿನಗಳಾಗಿವೆ. ಬಿಜೆಪಿ ಸರ್ಕಾರ ಕನ್ನಡಿಗರ ಮೇಲೆ ನಡೆಸುತ್ತಿರುವ ಈ ಆರ್ಥಿಕ ಹೊರೆ ಅಕ್ಷಮ್ಯ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಬೆಲೆ ಏರಿಕೆ ವಿರುದ್ಧ ಜನರು ವಿವಿಧ ರೀತಿಯಲ್ಲಿ ಆಕ್ರೋಶ ವ್ಯಕ್ತಪಡಿಸುತ್ತಿದ್ದರೂ ಬಿಜೆಪಿ ನಾಯಕರು ಹಾಗೂ ಮೋದಿ ಸರ್ಕಾರ ಜನರ ಸಂಕಷ್ಟವನ್ನು ಗಂಭೀರವಾಗಿ ಪರಿಗಣಿಸುತ್ತಿಲ್ಲ. ಕನ್ನಡಿಗರು ಮತ್ತು ದೇಶದ ಜನರು ಎದುರಿಸುತ್ತಿರುವ ಜೀವನೋಪಾಯದ ಬಿಕ್ಕಟ್ಟಿಗೆ ಯಾವುದೇ ಸ್ಪಂದನೆ ನೀಡದೆ ಮೌನವಾಗಿದೆ ಎಂದು ಟೀಕಿಸಿದ್ದಾರೆ.

ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆಗೆ ಮಾತ್ರ ಸೀಮಿತವಾಗದೆ, ಗೃಹಬಳಕೆಯ ಗ್ಯಾಸ್, ವಾಣಿಜ್ಯ ಗ್ಯಾಸ್, ಸಣ್ಣ ಸಿಲಿಂಡರ್ ಹಾಗೂ ಸಿಎನ್‌ಜಿ ದರಗಳನ್ನೂ ಕೇಂದ್ರ ಸರ್ಕಾರ ಹೆಚ್ಚಿಸಿದೆ. ಇದರ ಪರಿಣಾಮವಾಗಿ ದಿನನಿತ್ಯದ ಅಗತ್ಯ ವಸ್ತುಗಳ ಬೆಲೆಗಳ ಮೇಲೂ ತೀವ್ರ ಪರಿಣಾಮ ಉಂಟಾಗಿದೆ ಎಂದು ಹೇಳಿಕೆಯಲ್ಲಿ ಉಲ್ಲೇಖಿಸಲಾಗಿದೆ.

ಬಿಜೆಪಿ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅಬಕಾರಿ ಮತ್ತು ಕಸ್ಟಮ್ಸ್ ಸುಂಕಗಳ ಮೂಲಕ ರೂ.43 ಲಕ್ಷ ಕೋಟಿ ಸಂಗ್ರಹಿಸಿದೆ. ಇದಲ್ಲದೆ ತುರ್ತು ಸಂದರ್ಭಗಳಿಗೆ ಮೀಸಲಿಟ್ಟಿರುವ ಭಾರತೀಯ ರಿಸರ್ವ್ ಬ್ಯಾಂಕ್‌ನ ತುರ್ತು ನಿಧಿಯ ಮೇಲೂ ಕಣ್ಣು ಹಾಕಲಾಗಿದೆ ಎಂದು ಕಾಂಗ್ರೆಸ್ ಆರೋಪಿಸಿದೆ.

ಮೇ 23ರಂದು ಡಾಲರ್ ಎದುರು ರೂಪಾಯಿ ಮೌಲ್ಯ ಕುಸಿದಿರುವುದರ ಲಾಭ ಪಡೆದುಕೊಂಡು ಆರ್‌ಬಿಐನ ವಿದೇಶಿ ವಿನಿಮಯ ಮೀಸಲು ನಿಧಿಯಿಂದ ರೂ.2.87 ಲಕ್ಷ ಕೋಟಿಯನ್ನು ಮೋದಿ ಸರ್ಕಾರ ಪಡೆದುಕೊಂಡಿದೆ. ಕಳೆದ 12 ವರ್ಷಗಳಲ್ಲಿ ಆರ್‌ಬಿಐನಿಂದಲೇ ರೂ.14 ಲಕ್ಷ ಕೋಟಿ ಸಂಗ್ರಹಿಸಲಾಗಿದೆ. ಇದರಿಂದ ಒಟ್ಟು ರೂ.57 ಲಕ್ಷ ಕೋಟಿ ಲೂಟಿ ನಡೆದಿದೆ ಎಂದು ನಾಯಕರು ದೂರಿದ್ದಾರೆ.

ಕಳೆದ 12 ವರ್ಷಗಳಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ತೆರಿಗೆಗಳ ಮೂಲಕ ಕೇಂದ್ರ ಸರ್ಕಾರ ರೂ.43 ಲಕ್ಷ ಕೋಟಿ ಸಂಗ್ರಹಿಸಿದ್ದು, ಇದು 2014ರಿಂದ ಪ್ರತಿದಿನ ಸರಾಸರಿ ರೂ.1,000 ಕೋಟಿ ಸಂಗ್ರಹಿಸಿದಂತಾಗಿದೆ ಎಂದು ಕಾಂಗ್ರೆಸ್ ಹೇಳಿದೆ.

2014ರ ಮೇ 26ರಂದು ಕಾಂಗ್ರೆಸ್–ಯುಪಿಎ ಆಡಳಿತಾವಧಿಯಲ್ಲಿ ಪೆಟ್ರೋಲ್ ಬೆಲೆ ಲೀಟರ್‌ಗೆ ರೂ.71.41 ಮತ್ತು ಡೀಸೆಲ್ ರೂ.56.71 ಇತ್ತು. ಆದರೆ ಇಂದು ಬೆಂಗಳೂರಿನಲ್ಲಿ ಪೆಟ್ರೋಲ್ ರೂ.110.93 ಹಾಗೂ ಡೀಸೆಲ್ ರೂ.98.89ಕ್ಕೆ ತಲುಪಿದೆ.

2014ರ ಕಚ್ಚಾತೈಲದ ಬೆಲೆ ಮತ್ತು ಪಶ್ಚಿಮ ಏಷ್ಯಾದ ಯುದ್ಧ ಆರಂಭಕ್ಕೂ ಮುಂಚಿನ ಬೆಲೆಗಳನ್ನು ಆಧರಿಸಿದರೆ, ಪೆಟ್ರೋಲ್ ರೂ.61.60 ಮತ್ತು ಡೀಸೆಲ್ ರೂ.56.99 ಇರಬೇಕಾಗಿತ್ತು. ಉಳಿದ ಹಣವನ್ನು ಬಿಜೆಪಿ ಸರ್ಕಾರ ತೆರಿಗೆ ರೂಪದಲ್ಲಿ ವಸೂಲಿ ಮಾಡುತ್ತಿದೆ ಎಂದು ಆರೋಪಿಸಲಾಗಿದೆ.

ಕಳೆದ 11 ದಿನಗಳಲ್ಲಿ ನಾಲ್ಕು ಬಾರಿ ಇಂಧನ ದರ ಏರಿಕೆ ಮಾಡಲಾಗಿದೆ. ಮೇ 15ರಂದು ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯಲ್ಲಿ ಲೀಟರ್‌ಗೆ ರೂ.3 ಹೆಚ್ಚಳ ಮಾಡಲಾಗಿತ್ತು. ಮೇ 19ರಂದು 90 ಪೈಸೆ, ಮೇ 23ರಂದು 91 ಪೈಸೆ ಹಾಗೂ ಮೇ 25ರಂದು ರೂ.2.71 ಹೆಚ್ಚಳ ಮಾಡಲಾಗಿದೆ. ಒಟ್ಟಾರೆ 11 ದಿನಗಳಲ್ಲಿ ಲೀಟರ್‌ಗೆ ರೂ.7.52 ಹೆಚ್ಚಳವಾಗಿದೆ.

ಮೇ 23ರಂದು ಸಿಎನ್‌ಜಿ ದರವನ್ನು ಪ್ರತಿ ಕೆಜಿಗೆ ರೂ.1 ಹೆಚ್ಚಿಸಲಾಗಿದ್ದು, ಕಳೆದ 11 ದಿನಗಳಲ್ಲಿ ಒಟ್ಟು ರೂ.4 ಹೆಚ್ಚಳವಾಗಿದೆ. ಇದರಿಂದ ಬೆಂಗಳೂರಿನಲ್ಲಿ ಸಿಎನ್‌ಜಿ ದರ ಪ್ರತಿ ಕೆಜಿಗೆ ರೂ.90.10 ತಲುಪಿದೆ ಎಂದು ಕಾಂಗ್ರೆಸ್ ಹೇಳಿದೆ.

2014ರಿಂದ 2025ರವರೆಗೆ ಮೋದಿ ಸರ್ಕಾರ ಪೆಟ್ರೋಲ್ ಮೇಲೆ ಸರಾಸರಿ ರೂ.19.70 ಮತ್ತು ಡೀಸೆಲ್ ಮೇಲೆ ರೂ.15.50 ಅಬಕಾರಿ ಸುಂಕ ವಿಧಿಸಿದೆ. ಇದರ ಪರಿಣಾಮವಾಗಿ ಪೆಟ್ರೋಲ್ ಬೆಲೆಯ ಶೇಕಡಾ 25 ಹಾಗೂ ಡೀಸೆಲ್ ಬೆಲೆಯ ಶೇಕಡಾ 22.1 ಭಾಗ ತೆರಿಗೆ ರೂಪದಲ್ಲಿ ಸರ್ಕಾರದ ಖಜಾನೆಗೆ ಸೇರುತ್ತಿದೆ ಎಂದು ಹೇಳಲಾಗಿದೆ.

ಮೋದಿ ಸರ್ಕಾರ ಅಬಕಾರಿ ಸುಂಕವನ್ನು 21 ಬಾರಿ ಪರಿಷ್ಕರಿಸಿದ್ದು, ಅದರಲ್ಲಿ 12 ಬಾರಿ ಬೆಲೆ ಹೆಚ್ಚಳ ಮಾಡಿದೆ. “ಬೆಲೆ ಕಡಿಮೆ ಮಾಡುತ್ತೇವೆ” ಎಂದು ಹೇಳುತ್ತಲೇ ಸಾಮಾನ್ಯ ಜನರಿಂದ ಹಣ ವಸೂಲಿ ಮಾಡುತ್ತಿರುವುದು ಸ್ಪಷ್ಟವಾಗಿದೆ ಎಂದು ಆರೋಪಿಸಲಾಗಿದೆ.

2014ರಲ್ಲಿ ರೂ.412 ಇದ್ದ ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್ ಬೆಲೆ ಈಗ ರೂ.915.50ಕ್ಕೆ ಏರಿಕೆಯಾಗಿದೆ. ಅಂದರೆ 12 ವರ್ಷಗಳಲ್ಲಿ ರೂ.503.50 ಹೆಚ್ಚಳವಾಗಿದ್ದು, ಇದು ಶೇಕಡಾ 122ರಷ್ಟು ಏರಿಕೆಯಾಗಿದೆ. ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಎಲ್‌ಪಿಜಿ ದರ ಕಡಿಮೆಯಾಗಿದ್ದರೂ ದೇಶದಲ್ಲಿ ಬೆಲೆ ಏರಿಸಲಾಗಿದೆ ಎಂದು ಕಾಂಗ್ರೆಸ್ ಹೇಳಿದೆ.

2014ರಲ್ಲಿ ರೂ.1,241 ಇದ್ದ 19 ಕೆಜಿ ವಾಣಿಜ್ಯ ಗ್ಯಾಸ್ ಸಿಲಿಂಡರ್ ಬೆಲೆ ಈಗ ರೂ.3,152ಕ್ಕೆ ತಲುಪಿದೆ. ಮಾರ್ಚ್ 1ರಿಂದ ಮೇ 25ರವರೆಗೆ ವಾಣಿಜ್ಯ ಗ್ಯಾಸ್ ದರವನ್ನು ಐದು ಬಾರಿ ಹೆಚ್ಚಿಸಲಾಗಿದೆ. ಮಾರ್ಚ್ 1ರಂದು ರೂ.28, ಮಾರ್ಚ್ 7ರಂದು ರೂ.114.50, ಮಾರ್ಚ್ 23ರಂದು ರೂ.49, ಏಪ್ರಿಲ್ 1ರಂದು ರೂ.195ರಿಂದ ರೂ.218 ಹಾಗೂ ಮೇ 1ರಂದು ರೂ.993ರಷ್ಟು ಹೆಚ್ಚಳ ಮಾಡಲಾಗಿದೆ ಎಂದು ಆರೋಪಿಸಲಾಗಿದೆ.

ಮೋದಿ ಸರ್ಕಾರ ಮತ್ತು ಬಿಜೆಪಿ ತಕ್ಷಣವೇ ಇಂಧನ ಲೂಟಿಯನ್ನು ನಿಲ್ಲಿಸಿ, ಪೆಟ್ರೋಲ್, ಡೀಸೆಲ್, ಗೃಹಬಳಕೆಯ ಗ್ಯಾಸ್, ವಾಣಿಜ್ಯ ಗ್ಯಾಸ್, ಸಣ್ಣ ಸಿಲಿಂಡರ್, ಸಿಎನ್‌ಜಿ ಮತ್ತು ಪಿಎನ್‌ಜಿ ದರಗಳನ್ನು ಕೂಡಲೇ ಕಡಿತಗೊಳಿಸಬೇಕು ಎಂದು ಕಾಂಗ್ರೆಸ್ ನಾಯಕರು ಒತ್ತಾಯಿಸಿದ್ದಾರೆ.

## ‘ಕೇಂದ್ರ ಬಿಜೆಪಿ ಸರ್ಕಾರವನ್ನು ಜನರೇ ಕಿತ್ತೊಗೆಯಬೇಕು’

ಬೆಂಗಳೂರು

ಬಿಜೆಪಿಯ ಕೇಂದ್ರ ಸರ್ಕಾರ ಬೆಲೆ ಏರಿಕೆ ಮೂಲಕ ಜನರ ಮೇಲೆ ಆರ್ಥಿಕ ಹೊರೆ ಹೆಚ್ಚಿಸಿದರೆ, ರಾಜ್ಯ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳ ಮೂಲಕ ಜನಸಾಮಾನ್ಯರ ಆರ್ಥಿಕ ಹೊರೆ ಇಳಿಸುತ್ತಿದೆ. ಕಾಂಗ್ರೆಸ್ ಗ್ಯಾರಂಟಿ ಇಲ್ಲವಾಗಿದ್ದರೆ ಪರಿಸ್ಥಿತಿ ಯಾವ ರೀತಿ ಇರುತ್ತಿತ್ತು ಎಂದು ಆಲೋಚನೆ ಮಾಡಿ” ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಕೆಪಿಸಿಸಿ ಕಚೇರಿಯಲ್ಲಿ ನಡೆದ ಜಂಟಿ ಮಾಧ್ಯಮಗೋಷ್ಠಿಯಲ್ಲಿ ಶಿವಕುಮಾರ್ ಅವರು ಸೋಮವಾರ ಮಾತನಾಡಿದರು.

“ಈ ಬೆಲೆ ಏರಿಕೆ ಎಲ್ಲರ ಬದುಕಿಗೆ ಶಾಪವಾಗಿದೆ. ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾತೈಲ ಬೆಲೆ ಕಡಿಮೆ ಇದ್ದರೂ ಇಷ್ಟು ದೊಡ್ಡ ಪ್ರಮಾಣದಲ್ಲಿ ಬೆಲೆ ಏರಿಕೆ ಮಾಡಲಾಗಿದೆ. ಇಂಧನ ಮೇಲಿನ ತೆರಿಗೆ ಮೂಲಕ ಕೇಂದ್ರ ಸರ್ಕಾರ ನಿತ್ಯ 1 ಸಾವಿರ ಕೋಟಿ ಸಂಗ್ರಹಿಸುತ್ತಿದೆ. ಈ ತೆರಿಗೆ ಬಿಟ್ಟು ಜನಸಾಮಾನ್ಯರ ಮೇಲಿನ ಆರ್ಥಿಕ ಹೊರೆ ಕಡಿಮೆ ಮಾಡಬಹುದಾಗಿತ್ತು. ಬೇರೆ ಯಾವುದೇ ದೇಶದಲ್ಲಿ ಈ ರೀತಿ ಬೆಲೆ ಏರಿಕೆಯಾಗಿಲ್ಲ. ಕಳೆದ 11 ದಿನಗಳಲ್ಲಿ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಯನ್ನು 7.52 ರೂ. ಹೆಚ್ಚಳ ಮಾಡಲಾಗಿದೆ. ಇದರಿಂದ ಜನಸಾಮಾನ್ಯರ ಮೇಲೆ ಪರಿಣಾಮ ಬೀರಿದೆ” ಎಂದು ತಿಳಿಸಿದರು.

“ಕೇಂದ್ರ ಸರ್ಕಾರದ ಬೆಲೆ ಏರಿಕೆ ವಿರುದ್ಧ ಸುಲಿಗೆ ಎಂದು ಟೀಕೆ ಮಾಡಿದೆವು, 100 ನಾಟೌಟ್ ಎಂದು ಪ್ರತಿಭಟನೆ ಮಾಡಿದೆವು. ನಿಘಂಟಿನಲ್ಲಿರುವ ಎಲ್ಲಾ ಪದ ಪ್ರಯೋಗ ಮಾಡಿ ಟೀಕೆ ಮಾಡಿದರೂ ಮಾನ ಮರ್ಯಾದೆ ಇಲ್ಲದೆ, ರಾಜ್ಯ ಸರ್ಕಾರ ತೆರಿಗೆ ಕಡಿಮೆ ಮಾಡಬೇಕು ಎಂದು ವಿರೋಧ ಪಕ್ಷದ ನಾಯಕರಾದ ಆರ್.ಅಶೋಕ್ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು ಹೇಳುತ್ತಿದ್ದಾರೆ. ಮೊದಲು ನೀವು ಕೇಂದ್ರ ಸರ್ಕಾರದ ಸುಲಿಗೆ ನಿಲ್ಲಿಸಿ” ಎಂದು ವಾಗ್ದಾಳಿ ನಡೆಸಿದರು.

“ಈ ಮಧ್ಯೆ ಪ್ರಧಾನಮಂತ್ರಿಗಳು ಅಡುಗೆ ಎಣ್ಣೆ ಕಡಿಮೆ ಮಾಡಿ ಎಂದು ಸಲಹೆ ನೀಡುತ್ತಾರೆ. ಕೇಂದ್ರ ಸರ್ಕಾರ 12 ವರ್ಷಗಳಲ್ಲಿ ಇಂಧನ ತೈಲಗಳ ಮೇಲಿನ ತೆರಿಗೆ ಮೂಲಕ 43 ಲಕ್ಷ ಕೋಟಿ ಸಂಗ್ರಹಿಸಿದೆ. ಯುಪಿಎ ಸರ್ಕಾರದ ಅವಧಿಯಲ್ಲಿ 71 ರೂ. ಇದ್ದ ಪೆಟ್ರೋಲ್ ಹಾಗೂ 56 ರೂ. ಇದ್ದ ಡೀಸೆಲ್ ಬೆಲೆ ಇಂದು ಕ್ರಮವಾಗಿ 110 ಹಾಗೂ 99 ರೂ. ತಲುಪಿದೆ. ಇದೇ ತಿಂಗಳು 30ರಂದು ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಬೆಲೆ ಏರಿಕೆ ವಿರುದ್ಧ ಪ್ರತಿಭಟನೆ ನಡೆಸಲಾಗುವುದು. ನಮ್ಮ ಪಕ್ಷ ಇಂದಿನ ಸಭೆಯ ಬಳಿಕ ಮುಂದಿನ ಹೋರಾಟದ ರೂಪುರೇಷೆ ಪ್ರಕಟಿಸುತ್ತೇವೆ. ನಂತರ ಪ್ರತಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹೋರಾಟ ಮಾಡುವಂತೆ ಸೂಚಿಸಲಾಗುವುದು” ಎಂದು ತಿಳಿಸಿದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy